ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 160 ಸಂಚಿಕೆ- 160 | PAGE-8 ಪುಟ-8 | ಮಂಗಳವಾರ 05.08.2025 | RS.2/- ಬೆಲೆ 2/-




# ರಾಹುಲ್‌ಗೆ ಸುಪ್ರೀಂ ಛೀಮಾರಿ

ಮಲ್ಲಮ ನುಡಿ ವಾರ್ತೆ

ನವದೆಹಲಿ:ಅ.4: ಗಲ್ವಾನ್ ಸಂಘರ್ಷಕ್ಕೆಸಂಬಂಧಿಸಿದಂತೆ ಸೈನಿಕರ ಬಗ್ಗೆ ಹೇಳಿಕೆ ನೀಡಿದ್ದ ರಾಹುಲ್ ಗಾಂಧಿ ಅವರನ್ನು ಸುಪ್ರೀಂ ಕೋರ್ಟ್ ತರಾಟೆಗೆತೆಗೆದುಕೊಂಡಿದೆ.ನಿಜವಾದ ಭಾರತೀಯ ವ್ಯಕ್ತಿ ಈ ರೀತಿ ಮಾತನಾಡುವುದಿಲ್ಲ ಎಂದು ಸುಪ್ರೀಂಕೋರ್ಟ್ ಛೀಮಾರಿ ಹಾಕಿದೆ. ಭಾರತ್ ಜೋಡೋ ಯಾತ್ರೆಯ ಸಂದರ್ಭದಲ್ಲಿ ಭಾರತೀಯ ಸೇನೆಯ ವಿರುದ್ಧ ನೀಡಿದ್ದ ಹೇಳಿಕೆ ಪ್ರಕರಣದಲ್ಲಿ ತಮ್ಮ ವಿರುದ್ಧದ ಮಾನನಷ್ಟ ಮೊಕದ್ದಮೆಯನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ



ಸಲ್ಲಿಸಿದ್ದರು. ವಿಚಾರಣೆ ನಡೆಸಿದ ನ್ಯಾಯಮೂರ್ತಿ ದೀಪಂಕರ್ ದತ್ತಾ ಮತ್ತು ಎ.ಜಿ. ಮಸಿಹ್ ಪೀಠವು ರಾಹುಲ್ ಗಾಂಧಿ ಹೇಳಿಕೆಗಳಿಗೆ ಅಸಮಾಧಾನ ವ್ಯಕ್ತಪಡಿಸಿತು. ರಾಹುಲ್ ಗಾಂಧಿ ಪರವಾಗಿ ವಾದಿಸಿದ ಹಿರಿಯ ವಕೀಲ ಅಭಿಷೇಕ್ ಮನು ಸಿಂಘ್ವಿ, ವಿರೋಧ ಪಕ್ಷದ ನಾಯಕರೊಬ್ಬರು ಸಮಸ್ಯೆಗಳನ್ನು ಎತ್ತಲು ಸಾಧ್ಯವಾಗದಿದ್ದರೆ ಅದು ದುರದೃಷ್ಟಕರ ಪರಿಸ್ಥಿತಿ ಎಂದು ವಾದಿಸಿದರು. ಇದಕ್ಕೆ ನ್ಯಾಯಮೂರ್ತಿ ದತ್ತಾ ಪ್ರತಿಕ್ರಿಯಿಸಿ, ಚೀನಾ ಭೂ ಸ್ವಾಧೀನಪಡಿಸಿಕೊಂಡ ಮಾಹಿತಿ ನಿಮಗೆ ಹೇಗೆ ತಿಳಿಯುತ್ತದೆ? 2,000 ಚದರ ಕಿ.ಮೀ ಪ್ರದೇಶವನ್ನು ಚೀನಿಯರು ಆಕ್ರಮಿಸಿಕೊಂಡಿದ್ದಾರೆ ಎಂದು ನೀವು ಹೇಗೆ ಹೇಳುತ್ತೀರಿ? ನೀವು ವಿರೋಧ ಪಕ್ಷದ ನಾಯಕರು, ಸಂಸತ್ತಿನಲ್ಲಿ ಏನಾದರೂ ಹೇಳಿ, ನೀವು ಅದನ್ನು ಸಾಮಾಜಿಕ ಮಾಧ್ಯಮದಲ್ಲಿ ಏಕೆ ಹೇಳುತ್ತೀರಿ ಎಂದು ಪ್ರಶ್ನಿಸಿದ್ದಾರೆ.

ನಿಮ್ಮ ಈ ಆರೋಪಕ್ಕೆ ಯಾವುದೇ ವಿಶ್ವಾಸಾರ್ಹ ಸಾಕ್ಷ್ಯವಿದೆಯೇ? ಗಡಿಯಲ್ಲಿ ಸಂಘರ್ಷ ಉಂಟಾದಾಗ ಇದನ್ನೆಲ್ಲಾ ಹೇಳಬಲ್ಲಿರಾ? ಯಾವುದೇ ಸಾಕ್ಷ್ಯ ಇಲ್ಲದೇ ಈ ರೀತಿಯ ಹೇಳಿಕೆಗಳನ್ನು ಯಾಕೆ ನೀಡುತ್ತೀರಿ? ನೀವು ನಿಜವಾದ ಭಾರತೀಯರಾಗಿದ್ದರೆ, ಅಂತಹ ಹೇಳಿಕೆಗಳನ್ನು ನೀಡುತ್ತಿರಲಿಲ್ಲ ಎಂದು ಹೇಳಿ ಕುಟುಕಿದೆ.

ಸದ್ಯ ಸುಪ್ರೀಂಕೋರ್ಟ್ ರಾಹುಲ್ ಗಾಂಧಿಗೆ ರಿಲೀಫ್ ನೀಡಿದ್ದು, ಲಕ್ನೋ ಕೋರ್ಟ್ ಮಾನನಷ್ಟ ಪ್ರಕರಣದ ವಿಚಾರಣೆಗೆ ತಡೆ ನೀಡಿದೆ. ಅಲ್ಲದೆ 3 ವಾರಗಳ ನಂತರ ವಿಚಾರಣೆಗೆ ಸಮಯವನ್ನು ನಿಗದಿಪಡಿಸಿದೆ. 2022ರ ಡಿಸೆಂಬರ್ 16ರಂದು ಭಾರತ್ ಜೋಡೋ ಯಾತ್ರೆಯ ವೇಳೆ ರಾಹುಲ್ ಗಾಂಧಿಯವರು ಭಾರತೀಯ ಸೇನೆಯ ವಿರುದ್ಧ ಅವಹೇಳನಕಾರಿ ಹೇಳಿಕೆಗಳನ್ನು ನೀಡಿದ್ದಾರೆ ಎಂದು ಆರೋಪಿಸಿ ಉದಯ್ ಶಂಕರ್ ಶ್ರೀವಾಸ್ತವ ಅವರು ಮಾನನಷ್ಟ ಮೊಕದ್ದಮೆ ಹೂಡಿದ್ದಾರೆ.

ಭಾರತ ಹಾಗೂ ಚೀನಾ ಸೇನಾಪಡೆಗಳ ನಡೆದಿದ್ದ ಸಂಘರ್ಷದ ಕುರಿತು ಮಾಧ್ಯಮಗಳ ಜೊತೆ ಮಾತನಾಡುತ್ತಿದ್ದಾಗ ರಾಹುಲ್ ಗಾಂಧಿ ಆಕ್ಷೇಪಾರ್ಹ ಹೇಳಿಕೆ ನೀಡಿದ್ದಾರೆ. ಈ ಹೇಳಿಕೆಯಿಂದ ಭಾರತೀಯ ಸೇನೆಯ ಮಾನಹಾನಿ ಮತ್ತು ಸ್ಥೈರ್ಯ ಕುಗ್ಗಿಸಿವೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ.

ಅರುಣಾಚಲಪ್ರದೇಶದಲ್ಲಿ ಚೀನಾದ ಸೈನಿಕರು ಭಾರತೀಯ ಸೇನಾ ಸಿಬ್ಬಂದಿಯನ್ನು ಥಳಿಸುತ್ತಿದ್ದಾರೆ' ಎಂಬ ರಾಹುಲ್ ಅವರ ಹೇಳಿಕೆಯು ವ್ಯಾಪಕ ಚರ್ಚೆ ಮತ್ತು ರಾಜಕೀಯ ವಿವಾದಕ್ಕೆ ಕಾರಣವಾಗಿತ್ತು ಎಂದು ಅರ್ಜಿಯಲ್ಲಿ ಉಲ್ಲೇಖಿಸಲಾಗಿದೆ.

## ಭಾರತಕ್ಕೆ ರೋಚಕ 6 ರನ್‌ಗಳ ಜಯ



ಮಲ್ಲಮ ನುಡಿ ವಾರ್ತೆ

ಲಂಡನ್:ಅ.4: ನಾಟಕೀಯ ತಿರುವುಗಳಿಂದ ಕೂಡಿದ್ದ ತೆಂಡುಲ್ಕರ್- ಆಂಡರ್‌ಸನ್ ಟೆಸ್ಟ್ ಸರಣಿಯ ಐದನೇ ಪಂದ್ಯದ ಐದನೇ ದಿನ ಭಾರತ ಇಂಗ್ಲೆಂಡ್ ವಿರುದ್ಧ ರೋಚಕ 6 ರನ್‌ಗಳ ಜಯ ಸಾಧಿಸಿದೆ. ಈ ಪಂದ್ಯವನ್ನು ಗೆಲ್ಲುವ ಮೂಲಕ ಸರಣಿ 2-2 ರಲ್ಲಿ ಸಮಬಲಗೊಂಡಿದೆ.

ಓವಲ್ ಕ್ರೀಡಾಂಗಣದಲ್ಲಿ ಟೀಂ ಇಂಡಿಯಾ ನೀಡಿದ್ದ ಬೃಹತ್ ರನ್ ಬೆನ್ನಟ್ಟಿದ ಇಂಗ್ಲೆಂಡ್ ಅಂತಿಮವಾಗಿ 85.1 ಓವರ್‌ಗಳಲ್ಲಿ 367 ರನ್‌ಗಳಿಗೆ ಆಲೌಟ್ ಆಗಿ ಸೋಲೊಪ್ಪಿಕೊಂಡಿತು.

2ನೇ ಇನ್ನಿಂಗ್ಸ್‌ನಲ್ಲಿ ಇಂಗ್ಲೆಂಡ್ ಗೆಲುವಿಗೆ 374 ರನ್‌ಗಳ ಬೃಹತ್ ಗುರಿಯನ್ನು ಭಾರತ ನೀಡಿತ್ತು. ಬೃಹತ್ ಮೊತ್ತವನ್ನು ಗುರಿ ಬೆನ್ನತ್ತಿದ ಇಂಗ್ಲೆಂಡಿಗೆ ಕೊನೆಯ ದಿನ 4 ವಿಕೆಟ್ ಸಹಾಯದಿಂದ 35 ರನ್ ಬೇಕಿತ್ತು.

ನಾಲ್ಕನೇಯ ದಿನ ಅಜೇಯರಾಗಿದ್ದ ಸ್ಮಿತ್ ನಿನ್ನೆಯ ಮೊತ್ತವಾದ 2 ರನ್‌ಗೆ ಸಿರಾಜ್ ಬೌಲಿಂಗ್‌ನಲ್ಲಿ ಕ್ಯಾಚ್ ನೀಡಿ ಔಟಾದರೆ ಓವರ್‌ಟನ್ 8 ರನ್‌ಗಳಿಸಿ ಸಿರಾಜ್ ಎಲ್‌ಬಿ ಔಟಾದರು. ಜೋಶ್ ಟಂಗ್ ಅವರು ಪ್ರಸಿದ್ಧ್ ಕೃಷ್ಣ ಬೌಲ್ಡ್ ಮಾಡಿದರು. 10ನೇಯವರಾಗಿ ಗಂಭೀರವಾಗಿ ಗಾಯಗೊಂಡಿದ್ದ ಕ್ರೀಸ್ ವೋಕ್ಸ್ ಮೈದಾನಕ್ಕೆ ಇಳಿದಿದ್ದರು.

ಗಸ್ ಅಟ್ಕಿನ್ಸನ್ ಅವರು ಕ್ರೀಸ್ ವೋಕ್ಸ್‌ಗೆ ಸ್ಟ್ರೈಕ್ ನೀಡುತ್ತಿರಲಿಲ್ಲ. ಸ್ಟ್ರೈಕ್ ನೀಡಿದ್ದರೆ 1 ಕೈಯಲ್ಲಿ ಬ್ಯಾಟ್ ಬೀಸಬೇಕಿತ್ತು. ಓವರ್ ಕೊನೆಯಲ್ಲಿ ಒಂದು ರನ್ ಓಡುವ ಮೂಲಕ ಮತ್ತೆ ಗಸ್ ಅಟ್ಕಿನ್ಸನ್ ಸ್ಟ್ರೈಕ್‌ಗೆ ಬರುತ್ತಿದ್ದರು. ಆದರೆ ಕೊನೆಗೆ ಸಿರಾಜ್ 17 ರನ್ ಹೊಡೆದಿದ್ದ ಗಸ್ ಅಟ್ಕಿನ್ಸನ್ ಬೌಲ್ಡ್ ಮಾಡುವ ಮೂಲಕ ಭಾರತಕ್ಕೆ ಜಯ ತಂದುಕೊಟ್ಟರು.

ಸಿರಾಜ್ 5 ವಿಕೆಟ್ ಕಿತ್ತರೆ ಪ್ರಸಿದ್ಧ್ ಕೃಷ್ಣ 4 ವಿಕೆಟ್ ಪಡೆದರು. ಈ ಪಂದ್ಯದಲ್ಲಿ 10 ವಿಕೆಟ್ ಪಡೆದ ಸಿರಾಜ್ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರೆ ಸರಣಿಯಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿದ ಹ್ಯಾರಿ ಬ್ರೂಕ್ ಅವರಿಗೆ ಸರಣಿ ಶ್ರೇಷ್ಠ ಗೌರವಕ್ಕೆ ಪಾತ್ರರಾದರು.

## ಒಳಮೀಸಲಾತಿ:ಸಿಎಂಗೆ ಅಂತಿಮ ವರದಿ ಸಲ್ಲಿಕೆ



ಮಲ್ಲಮ ನುಡಿ ವಾರ್ತೆ

ಬೆಂಗಳೂರು:ಅ.4: ಪರಿಶಿಷ್ಟ ಜಾತಿಯಲ್ಲಿ(ಎಸ್‌ಸಿ)ಒಳಮೀಸಲಾತಿ ಕಲ್ಪಿಸುವ ಸಂಬಂಧ ರಚಿಸಲಾಗಿದ್ದ ನ್ಯಾಯಮೂರ್ತಿ ನಾಗಮೋಹನ್ ದಾಸ್ ನೇತೃತ್ವದ ಏಕವ್ಯಕ್ತಿ ಆಯೋಗ ಸೋಮವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಅಂತಿಮ ವರದಿ ಸಲ್ಲಿಸಿದೆ. ನ್ಯಾ. ನಾಗಮೋಹನ್ ದಾಸ್ ಅವರು ಇಂದು ವಿಧಾನಸೌಧದಲ್ಲಿ ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ, ರಾಜ್ಯದ ಹಲವಾರು ಸಚಿವರ ಸಮ್ಮುಖದಲ್ಲಿ ಒಳ ಮೀಸಲಾತಿ ಕುರಿತು 1,766 ಪುಟಗಳ ಸಮೀಕ್ಷಾ ವರದಿಯನ್ನು ಸಲ್ಲಿಸಿದರು. ಬಳಿಕ ವರದಿಗಾರರೊಂದಿಗೆ ಮಾತನಾಡಿದ ನ್ಯಾಯಮೂರ್ತಿ ನಾಗಮೋಹನ್ ದಾಸ್ ಅವರು, ಆಯೋಗದ ವರದಿಯು ಪರಿಶಿಷ್ಟ ಜಾತಿಗೆ(ಖಅ) ಒಳ ಮೀಸಲಾತಿ ಒದಗಿಸಬೇಕೆಂದು ಶಿಫಾರಸು ಮಾಡಿದೆ ಎಂದು ತಿಳಿಸಿದರು.

"ಸಂಪೂರ್ಣ ಡೇಟಾವನ್ನು ವಿಶ್ಲೇಷಿಸಿದ ನಂತರ, ಆಯೋಗವು ತನ್ನ ವರದಿಯನ್ನು ಕರ್ನಾಟಕ ಸರ್ಕಾರಕ್ಕೆ ಸಲ್ಲಿಸಿದೆ. ಇದು ಸುಮಾರು 1,766 ಪುಟಗಳ ಸಮೀಕ್ಷಾ ವರದಿಯಾಗಿದೆ. ಸಮೀಕ್ಷೆಯನ್ನು ಮೊಬೈಲ್ ಅಪ್ಲಿಕೇಶನ್ ಮೂಲಕ ಮಾಡಲಾಗಿದೆ. ಬಹಳ ದಿನಗಳಿಂದ, ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಬೇಕು ಎಂಬುದು ನನ್ನ ಬಯಕೆಯಾಗಿತ್ತು. ಒಳ ಮೀಸಲಾತಿಯನ್ನು ಒದಗಿಸಬೇಕೆಂದು ನಾನು ಸರ್ಕಾರಕ್ಕೆ ಶಿಫಾರಸು ಮಾಡಿದ್ದೇನೆ" ಎಂದು ನ್ಯಾಯಮೂರ್ತಿ ದಾಸ್ ಅವರು ಇಲ್ಲಿ ಮಾಧ್ಯಮಗಳಿಗೆ ತಿಳಿಸಿದರು.

"ಪರಿಶಿಷ್ಟ ಜಾತಿಗಳಿಗೆ ಒಳ ಮೀಸಲಾತಿ ಅನುಷ್ಠಾನದ ಬಗ್ಗೆ ಅಧ್ಯಯನ ಮಾಡಲು ರಚಿಸಲಾದ ನಿವೃತ್ತ ನ್ಯಾಯಮೂರ್ತಿ ಎಚ್. ಎನ್. ನಾಗಮೋಹನ್ ದಾಸ್ ನೇತೃತ್ವದ ಸಮಿತಿಯು ಇಂದು ತನ್ನ ಅಂತಿಮ ವರದಿಯನ್ನು ಸಲ್ಲಿಸಿದೆ.

ವರದಿ, ಸಮೀಕ್ಷೆಯ ದತ್ತಾಂಶ ಹಾಗೂ ಅನುಬಂಧಗಳು ಒಟ್ಟು ಸೇರಿ ಸುಮಾರು 1766 ಪುಟಗಳು ಮತ್ತು 6 ಶಿಫಾರಸುಗಳನ್ನು ಒಳಗೊಂಡ ವರದಿ ಇಂದು ಸಲ್ಲಿಕೆಯಾಗಿದ್ದು, ಸಾಮಾಜಿಕ ನ್ಯಾಯದ ಅನುಷ್ಠಾನದಲ್ಲಿ ಇದೊಂದು ಮಹತ್ವಪೂರ್ಣ ಮೈಲಿಗಲ್ಲು ಎಂದು ಭಾವಿಸಿದ್ದೇನೆ." ಎಂದು ಸಿಎಂ ಸಿದ್ದರಾಮಯ್ಯ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ಇನ್ನು ಈ ಕುರಿತು ಮಾಧ್ಯಮಗಳಿಗೆ ಪ್ರತಿಕ್ರಿಯಿಸಿರುವ ಸಿಎಂ ಸಿದ್ದರಾಮಯ್ಯ, ನ್ಯಾ. ನಾಗಮೋಹನ್‌ದಾಸ್ ಆಯೋಗ ಒಳಮೀಸಲಾತಿ ಸಂಬಂಧ ವರದಿ ನೀಡಿದೆ. ಅದರಲ್ಲಿ ಏನಿದೆ ಎಂದು ಇನ್ನೂ ನೋಡಿಲ್ಲ. ಆಗಸ್ಟ್ 7ರಂದು ಸಚಿವ ಸಂಪುಟ ಸಭೆಯಿದೆ. ಅದರಲ್ಲಿ ವರದಿಯನ್ನು ಮಂಡಿಸಿ ಚರ್ಚೆ ಮಾಡುತ್ತೇವೆ" ಎಂದು ಹೇಳಿದರು.

ಅಕ್ಟೋಬರ್ 2024 ರಲ್ಲಿ, ಕರ್ನಾಟಕ ಸರ್ಕಾರವು ಪರಿಶಿಷ್ಟ ಜಾತಿಗಳಿಗೆ ಒಳ ಮೀಸಲಾತಿ ಜಾರಿಗೊಳಿಸುವ ಬಗ್ಗೆ ಸಲಹೆ ನೀಡಲು ಏಕವ್ಯಕ್ತಿ ಆಯೋಗವನ್ನು ರಚಿಸಿತ್ತು.

## ಆನೆ, ಹುಲಿಗಳ ಸಾವಿಗೆ ಕಂಬನಿ:ವನ್ಯಜೀವಿಗಳ ಸಂರಕ್ಷಣೆಗೆ ಸಚಿವ ಈಶ್ವರ ಖಂಡ್ರೆ ಮನವಿ



ಮಲ್ಲಮ ನುಡಿ ವಾರ್ತೆ

ಬೆಂಗಳೂರು/ಹುಣಸೂರು,ಆ. 04:ಸಫಾರಿಯಲ್ಲಿ ವನ್ಯಜೀವಿಗಳನ್ನು, ದಸರಾ ಜಂಬೂಸವಾರಿಯಲ್ಲಿ ಅಲಂಕೃತ ಆನೆಗಳನ್ನು ನೋಡಿ ಆನಂದಿಸುವ ನಾವು ಅವುಗಳ ಸಂರಕ್ಷಣೆಗೂ ಮುಂದಾಗಬೇಕು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ.

ಹುಣಸೂರು ತಾಲೂಕು ವೀರನಹೊಸಹಳ್ಳಿಯಲ್ಲಿಂದು ದಸರಾ ಮಹೋತ್ಸವದಲ್ಲಿ ಪಾಲ್ಗೊಳ್ಳುವ 14 ಆನೆಗಳ ಪೈಕಿ 9 ಆನೆಗಳ ಮೊದಲ ತಂಡಕ್ಕೆ ಸಾಂಪ್ರದಾಯಿಕವಾಗಿ ಪೂಜೆ ನೆರವೇರಿಸಿ, ಕಬ್ಬು, ಅಕ್ಕಿ, ಬೆಲ್ಲ ತಿನ್ನಿಸಿ ಗಜಪಯಣಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರಕೃತಿ ಪರಿಸರದ ಸಮತೋಲನಕ್ಕೆ ವನ್ಯಜೀವಿಗಳು ಅತ್ಯವಶ್ಯಕವಾಗಿದ್ದು, ಅವುಗಳ ರಕ್ಷಣೆಗೆ ನಾವೆಲ್ಲರೂ ಕಟಿಬದ್ಧರಾಗಬೇಕು ಎಂದರು.

ತಂತಿ ಬೇಲಿಗಳಿಗೆ ಅಕ್ರಮವಾಗಿ ಪ್ರವಹಿಸಿದ ವಿದ್ಯುತ್ ಸ್ಪರ್ಶದಿಂದ ಆನೆಗಳು ಮೃತಪಡುತ್ತಿದ್ದರೆ, ಉರುಳಿಗೆ ಚಿರತೆಗಳು ಸಿಲುಕಿ ನರಳಾಡಿ ಸಾಯುತ್ತಿವೆ. ಇತ್ತೀಚೆಗೆ ಮಲೆ ಮಹದೇಶ್ವರ ಬೆಟ್ಟದ ವನ್ಯಜೀವಿಧಾಮದಲ್ಲಿ ವಿಷ ಪ್ರಾಶನದಿಂದ 5 ಹುಲಿಗಳು ಮೃತಪಟ್ಟಿವೆ. ಈ ಭೂಮಿಯಲ್ಲಿ ಹುಟ್ಟಿದ ಪ್ರತಿಯೊಂದು ಜೀವಿಗೂ ಬದುಕುವ ಹಕ್ಕಿದೆ. ವನ್ಯಜೀವಿಗಳ ಜಾಗವನ್ನು ಆಕ್ರಮಿಸಿರುವ ನಾವು ಅವುಗಳನ್ನು ನಿರ್ದಯವಾಗಿ ಕೊಲ್ಲದೆ, ಅವುಗಳ ಸಂರಕ್ಷಣೆಗೆ ಸಂಕಲ್ಪ ಮಾಡಬೇಕು ಎಂದು ಹೇಳಿದರು.

ಹೊರ ರಾಜ್ಯದಿಂದ ಸಾವಿರಾರು ಸಂಖ್ಯೆಯಲ್ಲಿ ದನಕರುಗಳನ್ನು ತಂದು ನಮ್ಮ ರಾಜ್ಯದ ಅರಣ್ಯ ಪ್ರದೇಶದಲ್ಲಿ ಮೇಯಿಸುತ್ತಿರುವುದರಿಂದ ವನ್ಯಜೀವಿಗಳಿಗೆ ಕಾಡಿನಲ್ಲಿ ಆಹಾರ ಲಭಿಸದಂತಾಗಿದೆ. ಹೀಗಾಗಿ ಹೊರ ರಾಜ್ಯದಿಂದ ತಂದು ದನಕರು ಮೇಯಿಸುವುದನ್ನು ಮಾತ್ರವೇ ನಿಷೆ?ಧಿಸಲು ಕ್ರಮವಹಿಸಲಾಗಿದೆ ಎಂದರು.

ಆನೆ ಸೇರಿದಂತೆ ವನ್ಯಜೀವಿ-ಮಾನವ ಸಂಘರ್ಷ ನಿಯಂತ್ರಣಕ್ಕೆ ಸರ್ಕಾರ ಅನೇಕ ಕ್ರಮ ಕೈಗೊಂಡಿದೆ. ಸೌರ ತಂತಿಬೇಲಿ, ಟೆಂಟಕಲ್ ಫೆನ್ಸಿಂಗ್, ಆನೆ ಕಂದಕಗಳ ಸಮರ್ಪಕ ನಿರ್ವಹಣೆ ಮಾಡಲು ನಾನು ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಿದ್ದೇನೆ. ನಾನು ಅರಣ್ಯ ಸಚಿವನಾಗುವ ಮೊದಲು ಅಂದರೆ 2023ರ ಜೂನ್ ವರೆಗೆ ರಾಜ್ಯದಲ್ಲಿ 312.918 ಕಿ.ಮೀ ಮಾತ್ರ ರೈಲ್ವೆ ಬ್ಯಾರಿಕೇಡ್ ಅಳವಡಿಸಲಾಗಿತ್ತು. ನಾನು ಸಚಿವನಾದ ಬಳಿಕ ಕಳೆದ 2 ವರ್ಷದಲ್ಲಿ 115.085 ಕಿ.ಮೀ ರೈಲ್ವೆ ಬ್ಯಾರಿಕೇಡ್ ಕಾಮಗಾರಿ ಪೂರ್ಣಗೊಳಿಸಲಾಗಿದ್ದು, ಇನ್ನೂ 193 ಕಿ.ಮೀ. ರೈಲ್ವೆ ಬ್ಯಾರಿಕೇಡ್ ಅಳವಡಿಕೆಗೆ ಅನುಮೋದನೆ ನೀಡಲಾಗಿದೆ. ಮುಂದಿನ ಒಂದೆರೆಡು ವರ್ಷದಲ್ಲಿ 500 ಕೋಟಿ ರೂ. ವೆಚ್ಚದಲ್ಲಿ ಉಳಿದ ಕಡೆಯೂ ರೈಲ್ವೆ ಬ್ಯಾರಿಕೇಡ್ ಅಳವಡಿಸಲಾಗುವುದು ಎಂದರು.

ಪ್ರಕೃತಿ ಪರಿಸರ ಸಂರಕ್ಷಣೆ ನಮ್ಮೆಲ್ಲರ ಕರ್ತವ್ಯವಾಗಿದೆ. ಅರಣ್ಯವನ್ನು ರಕ್ಷಿಸುವಲ್ಲಿ ಮಹತ್ವದ ಪಾತ್ರವಹಿಸುತ್ತಿರುವ ಆದಿವಾಸಿಗಳಿಗೆ, ಅರಣ್ಯವಾಸಿಗಳ ಸಮಸ್ಯೆಗೆ ಸ್ಪಂದಿಸಲಾಗುವುದು. ಜಂಟಿ ಸಮೀಕ್ಷೆ ನಡೆಸಿ 2015ಕ್ಕೆ ಮೊದಲು ಪಟ್ಟಾ ಜಮೀನೂ ಸೇರಿ 3 ಎಕರೆಗಿಂತ ಕಡಿಮೆ ಅರಣ್ಯ ಭೂಮಿಯಲ್ಲಿ ಉಳಿಮೆ

(2ನೇ ಪುಟ ನೋಡಿ)

ಗ್ರಾ.ಪಂ ಅಧ್ಯಕ್ಷರು, ಪಿಡಿಓ, ವಾಟರ್ ಮನ್‌ಗಳಿಗೆತರಬೇತಿ

## 19 ಗ್ರಾಮಗಳಿಗೆ ನಿರಂತರ ನೀರು ಪೂರೈಕೆಗೆಕ್ರಮ :ಕುರೇರ್



ಮಲ್ಲಮ ನುಡಿ ವಾರ್ತೆ

ಬಾಗಲಕೋಟೆ:ಆಗಸ್ಟ 04-:ಜಲಜೀವನ ಮಿಷನ್‌ಯೋಜನೆ ಹಾಗೂ ಕರ್ನಾಟಕ ಸುಸ್ಥಿರ ಗ್ರಾಮೀಣಕುಡಿಯುವ ನೀರು ಸರಬರಾಜುಕಾರ್ಯಕ್ರಮದಲ್ಲಿ ನಿರಂತರ ನೀರು ಪೂರೈಸುವ ನಿಟ್ಟಿನಲ್ಲಿ 19 ಗ್ರಾಮಗಳನ್ನು ದಿನದ 24 ಗಂಟೆರೂಪಿಸಲು ಪೈಲಟ್ ಬೇಸ್ ಮೇಲೆ ಯೋಜನೆ ಹಮ್ಮಿಕೊಳ್ಳಲಾಗಿದೆ ಎಂದುಜಿ.ಪಂ ಮುಖ್ಯಕಾರ್ಯನಿರ್ವಾಹಕಅಧಿಕಾರಿ ಶಶಿಧರ ಕುರೇರ್ ತಿಳಿಸಿದರು.

ಗದ್ದನಕೇರಿ ಹತ್ತಿರ ವಿರುವ ಕಂಠಿರೇಸಾರ್ಟನಲ್ಲಿ ಸೋಮವಾರ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಗ್ರಾ.ಪಂ ಅಧ್ಯಕ್ಷರುಗಳು ಹಾಗೂ ವಾಟರ್‌ಮನ್‌ಗಳಿಗೆ ಹಮ್ಮಿಕೊಂಡ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು ದಿನದ 24 ಗಂಟೆಗಳ ಕಾಲ ನೀರು ಪೂರೈಸುವ ಯೋಜನೆ ರೂಪಿಸಲು ಬೇಕಾದ ರೂಪುರೇಷೆಗಳನ್ನು ಫೀಡ್‌ಬ್ಯಾಕ್ ಪೌಂಡೇಷನ್ ಮೂಲಕ ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಈ ತರಬೇತಿ ಕಾರ್ಯಾಗಾರದಲ್ಲಿ 19 ಗ್ರಾಮಗಳಿಗೆ ಸಂಬಂಧಪಟ್ಟ ಅಧ್ಯಕ್ಷರುಗಳನ್ನು, ವಿಡಬ್ಲುಎಸ್‌ಸಿ ಅಧ್ಯಕ್ಷರುಗಳನ್ನು, ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಸೆಕ್ಷನ್ ಅಧಿಕಾರಿಗಳು, ಪಂಚಾಯತ ಅಬಿವೃದ್ಧಿ ಅಧಿಕಾರಿಗಳು ಹಾಗೂ ವಾಟರ್

(2ನೇ ಪುಟ ನೋಡಿ)

## ಪಾಟೀಲ್ ಪರಿವಾರದಿಂದ ವಿಶೇಷ ಪೂಜೆ



ಮಲ್ಲಮ ನುಡಿ ವಾರ್ತೆ

ಹುಮನಾಬಾದ:ಶಾವಣಮಾಸದ ನಿಮಿತ್ತ ಪಟ್ಟಣದ ಐತಿಹಾಸಿಕ ವೀರಭದ್ರೇಶ್ವರ ದೇವಸ್ಥಾನದಲ್ಲಿ ಸೋಮವಾರ ಪಾಟೀಲ್ ಪರಿವಾರದಿಂದ ಮಹಾ ರುದ್ರಭಿಷೇಕ ಪೂಜಾ ಕಾರ್ಯಕ್ರಮ ವೈಭವದಿಂದ ಜರುಗಿತು. ಬೆಳಗ್ಗೆ ದೇವಸ್ಥಾನದಲ್ಲಿ ಹಿರೇಮಠದ ಪೀಠಾಧಿಪತಿ ರೇಣುಕವೀರ ಗಂಗಾಧರ ಶಿವಾಚಾರ್ಯರ ಸಾನಿಧ್ಯದಲ್ಲಿ ಮಾಜಿ ಸಚಿವ ರಾಜಶೇಖರ ಪಾಟೀಲ್, ಎಂಎಲ್ಸಿ ಡಾ. ಚಂದ್ರಶೇಖರ ಪಾಟೀಲ್, ಎಂಎಲ್ಸಿ ಭೀಮರಾವ ಪಾಟೀಲ್, ಜಿಪಂ. ಮಾಜಿ ಸದಸ್ಯ ವೀರಣ್ಣ ಪಾಟೀಲ್ ಸೇರಿ ಪಾಟೀಲ್ ಪರಿವಾರಸ್ಥರು ವೀರಭದ್ರ ಮಹಾಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಕೆಪಿಸಿಸಿ ಸಹಕಾರ ವಿಭಾಗದ ರಾಜ್ಯಾಧ್ಯಕ್ಷ ಧನರಾಜ ತಾಳಂಪಳ್ಳಿ, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಅಭಿಷೇಕ ಪಾಟೀಲ್, ವಿಜಯಲಕ್ಷ್ಮಿ ಪಾಟೀಲ್, ಪ್ರೇಮಾ ಪಾಟೀಲ್, ಯೋಗಿತಾ ಪಾಟೀಲ್, ವಿದ್ಯಾ ಪಾಟೀಲ್, ಮಹಾಲಕ್ಷ್ಮಿ ಪಾಟೀಲ್, ಅಕ್ಷಯ ಪಾಟೀಲ್, ರುದ್ರಂ ಪಾಟೀಲ್, ಹಾವಗೇಶ ಪಾಟೀಲ್ ಸೇರಿ ಅನೇಕರಿದ್ದರು.

## ರಾಹುಲ್ ಗಾಂಧಿ ಪ್ರತಿಭಟನಾ ರ್‍ಯಾಲಿ ಆ.8ಕ್ಕೆ : ಡಿಕೆಶಿ

ಮಲ್ಲಮ ನುಡಿ ವಾರ್ತೆ

ಬೆಂಗಳೂರು:ಅ.4:ಇಲ್ಲಿನ ಫ್ರೀಡಂ ಪಾರ್ಕ್‌ನಲ್ಲಿ ನಿಗದಿಯಾಗಿದ್ದ ರಾಹುಲ್ ಗಾಂಧಿ ನೇತೃತ್ವದ ಪ್ರತಿಭಟನಾ ರ್‍ಯಾಲಿ ಆಗಸ್ಟ್ 8ಕ್ಕೆ ಮುಂದೂಡಿಕೆಯಾಗಿದೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ ವಿರುದ್ಧ ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಮತಗಳ್ಳತನ ಆರೋಪ ಮಾಡಿದ್ದರು. ಕೇಂದ್ರದ ಈ ಕ್ರಮ ವಿರೋಧಿಸಿ ಆಗಸ್ಟ್ 5ರಂದು ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಿಗದಿಯಾಗಿತ್ತು. ಇದೇ ಸಮಯದಲ್ಲಿ ಸಾರಿಗೆ ನೌಕರರು ಮುಷ್ಕರಕ್ಕೆ ಕರೆ ನೀಡಿದ್ದಾರೆ. ಈ ನಡುವೆ ಪ್ರತಿಭಟನಾ ರ್‍ಯಾಲಿ ಮುಂದೂಡಿರುವುದಾಗಿ ಡಿಸಿಎಂ ತಿಳಿಸಿದ್ದಾರೆ.

ನಗರದಲ್ಲಿಂದು ಸುದ್ದಿಗೋಷ್ಠಿ ನಡೆಸಿ ರಣದೀಪ್ ಸುರ್ಜೇವಾಲ ಮಾತನಾಡಿದರು, ಶಿಬು ಸೋರೇನ್ ಅವರ ಮರಣದ ಹಿನ್ನೆಲೆಯಲ್ಲಿ ನಾಳೆ ಅಂತ್ಯಸಂಸ್ಕಾರ ನಡೆಯಲಿದೆ. ರಾಹುಲ್ ಗಾಂಧಿ ಹಾಗೂ ಮಲ್ಲಿಕಾರ್ಜುನ ಖರ್ಗೆ ಅದರಲ್ಲಿ ಭಾಗವಹಿಸಿದ್ದಾರೆ. ಆದ್ದರಿಂದ ನಾಳೆಯ (ಆ.5) ಪ್ರತಿಭಟನೆ ಮುಂದೂಡಲಾಗಿದೆ. ಅದನ್ನ ಆ.8ಕ್ಕೆ ನಡೆಸಲು ತೀರ್ಮಾನ ಮಾಡಲಾಗಿದೆ ಎಂದು ತಿಳಿಸಿದರು.

ಇನ್ನೂ ಡಿಸಿಎಂ ಡಿಕೆಶಿವಕುಮಾರ್ ಮಾತನಾಡಿ, ನಾಳೆ ಶಿಬು ಸೋರೇನ್ ಅಂತ್ಯಕ್ರಿಯೆಯಲ್ಲಿ ರಾಹುಲ್ ಗಾಂಧಿ ಭಾಗಿಯಾಗಲಿದ್ದಾರೆ. ಇಲ್ಲಿಗೆ ಬಂದು ಅಲ್ಲಿಗೆ ಹೋಗೋದು ಅಂತ ಮೊದಲು ಮಾತುಕತೆ ಆಗಿತ್ತು. ಆದ್ರೆ ಇದು ದೊಡ್ಡ ಸಂದೇಶ ಕೊಡುವ ದಿನ, ಆದ್ದರಿಂದ ಗಡಿಬಿಡಿ ತೀರ್ಮಾನ ಬೇಡ ಅಂತ ಪ್ರತಿಭಟನೆಯನ್ನು ಆಗಸ್ಟ್ 8ಕ್ಕೆ ಮುಂದೂಡಲಾಗಿದೆ. ಕೆಲವರಿಗೆಲ್ಲಾ ವರಮಹಾಲಕ್ಷ್ಮಿ ಹಬ್ಬ ಅಂತ ಇರುತ್ತದೆ. ಪಕ್ಷದ ಕಾರ್ಯಕ್ರಮದಲ್ಲಿ ಅದನ್ನೆಲ್ಲ ಲೆಕ್ಕದಲ್ಲಿ ಇಟ್ಟುಕೊಳ್ಳೋಕೆ ಆಗಲ್ಲ ಎಂದು ತಿಳಿಸಿದರು.

# ಆ.6 ರಂದು ಕಲ್ಯಾಣ ಕರ್ನಾಟಕ ವಿಭಾಗ ಮಟ್ಟದ ಮಾಧ್ಯಮ ತರಬೇತಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಆ.04 : ಕರ್ನಾಟಕ ಮಾಧ್ಯಮ ಅಕಾಡೆಮಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಬೀದರ ಸಹಯೋಗದಲ್ಲಿ ಆಗಸ್ಟ್.6 ರಂದು ಬೆಳಿಗ್ಗೆ 10 ಗಂಟೆಗೆ ಗುರುನಾನಕ್ ಎಂಜಿನಿಯರಿಂಗ್ ಕಾಲೇಜು ಸಭಾಂಗಣ ಬೀದರದಲ್ಲಿ ಕಲ್ಯಾಣ ಕರ್ನಾಟಕ ವಿಭಾಗ ಮಟ್ಟದ ಮಾಧ್ಯಮ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಮಾಡಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರು ಹಾಗೂ ಜೇವರ್ಗಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ಅಜಯ್ ಧರಮ್ ಸಿಂಗ್ ಅವರು ವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕ ನುಡಿಯನ್ನು ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧ್ಯಕ್ಷರಾದ ಶ್ರೀಮತಿ ಆಯೇಶಾ ಖಾನಂ ಮಾಡಲಿದ್ದಾರೆ.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಬೀದರ ಲೋಕಸಭಾ ಸದಸ್ಯರಾದ ಸಾಗರ ಈಶ್ವರ ಖಂಡ್ರೆ, ಔರಾದ (ಬಿ) ಶಾಸಕ ಪ್ರಭು ಬಿ.ಚವ್ಹಾಣ, ಬಸವಕಲ್ಯಾಣ ಶಾಸಕ ಶರಣು ಸಲಗರ, ಬೀದರ್ ದಕ್ಷಿಣ ಶಾಸಕ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ಹುಮನಾಬಾದ ಶಾಸಕ ಡಾ.ಸಿದ್ಧಲಿಂಗಪ್ಪ ಎನ್.ಪಾಟೀಲ ಹಾಗೂ ವಿಧಾನ ಪರಿಷತ್ ಶಾಸಕರುಗಳಾದ ಡಾ.ಚಂದ್ರಶೇಖರ ಬಿ.ಪಾಟೀಲ, ಶಶೀಲ ಜಿ.ನಮೋಶಿ, ಭೀಮರಾವ ಬಿ.ಪಾಟೀಲ, ಎಂ.ಜಿ.ಮೂಳೆ ಹಾಗೂ ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಮಾಲಾ ನಾರಾಯಣರಾವ, ಬೀದರ ನಗರಸಭೆ ಅಧ್ಯಕ್ಷ ಮಹಮ್ಮದ ಗೌಸ್, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಬೀದರ ಗುರುನಾನಕ್ ಎಂಜಿನಿಯರಿಂಗ್ ಕಾಲೇಜಿನ ಅಧ್ಯಕ್ಷ ಡಾ.ಎಸ್.ಬಲ್ಬೀರ್ ಸಿಂಗ್, ಬೀದರ ಶ್ರೀ ನಾನಕ್ ಝೀರಾ ಸಾಹಿಬ್ ಪ್ರತಿಷ್ಠಾನದ ಅಧ್ಯಕ್ಷ ನಾನಕ್ ಝೀರಾ ಸಾಹಿಬ್, ಬೀದರ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಬೀದರ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ್ ದಿಲೀಫ್ ಬದೋಲೆ, ಬೀದರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ಅವರುಗಳು ಭಾಗವಹಿಸಲಿದ್ದಾರೆ.

ಗೋಷ್ಠಿ–1 "ನ್ಯೂಸ್ ರೂಂ ನಲ್ಲಿ ಎ1 ಮತ್ತು ನಾನು" ಸಂಪನ್ಮೂಲ ವ್ಯಕ್ತಿಗಳು: ಹಿರಿಯ ಪತ್ರಕರ್ತರು ಹಾಗೂ ಮಾಧ್ಯಮ ಸಮಾಲೋಚಕ ಎಸ್.ಕುಮಾರ್ ನಡೆಸಿಕೊಡಲಿದ್ದಾರೆ.

ಗೋಷ್ಠಿ–2 "ಸುದ್ದಿಯಲ್ಲಿ ನಿಖರತೆ ಮತ್ತು ಪರಿಣಾಮಕಾರಿ ಸಂವಹನ" ಸಂಪನ್ಮೂಲ ವ್ಯಕ್ತಿಗಳು: ಪ್ರೋ.ಸಪ್ನಾ ಎಂ.ಎಸ್., ನಿರ್ದೇಶಕರು, ಇಎಂಆರ್‌ಸಿ ಹಾಗೂ ಪ್ರೊಫೆಸರ್, ಪತ್ರಿಕೋದ್ಯಮ ಮತ್ತು ಸಂವಹನ ವಿಭಾಗ, ಮೈಸೂರು ವಿಶ್ವವಿದ್ಯಾಲಯ ಇವರು ನಡೆಸಿಕೊಡಲಿದ್ದಾರೆ.

ಕಾರ್ಯಕ್ರಮದ ನಿರೂಪಣೆಯನ್ನು ಕರ್ನಾಟಕ ಮಾಧ್ಯಮ ಅಕಾಡೆಮಿಯ ಸದಸ್ಯರಾದ ಶ್ರೀಮತಿ ಎಸ್.ರಶ್ಮಿ ಮಾಡಲಿದ್ದಾರೆ.

# ಬಸವ ಪುರಸ್ಕಾರಕ್ಕೆ ಬಸವರಾಜ ಧನ್ನೂರ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 04 :– ಬೆಂಗಳೂರಿನ ಬಸವ ಪರಿಷತ್ ವತಿಯಿಂದ ಕೊಡಲಾಗುವ ಪ್ರಸಕ್ತ ಸಾಲಿನ ಬಸವ ಪುರಸ್ಕಾರಕ್ಕೆ ಖ್ಯಾತ ಉದ್ಯಮಿ ಹಾಗೂ ಜಾಗತಿಕ ಲಿಂಗಾಯತ ಮಹಾಸಭಾದ ಕೇಂದ್ರ ಸಮಿತಿಯ ಉಪಾಧ್ಯಕ್ಷ ಬಸವರಾಜ ಧನ್ನೂರ ಅವರನ್ನು ಆಯ್ಕೆ ಮಾಡಲಾಗಿದೆ.

ಉದ್ಯಮ ಹಾಗೂ ಸಮಾಜ ಸೇವೆಗಾಗಿ ಅವರಿಗೆ ಪ್ರಶಸ್ತಿ ಒಲಿದು ಬಂದಿದೆ. ಬೆಂಗಳೂರಿನ ಕೊಂಡಜ್ಜಿ ಬಸಪ್ಪ ಸಭಾಂಗಣದಲ್ಲಿ ಆಗಸ್ಟ್ 9 ರಂದು ನಡೆಯಲಿರುವ ಸಮಾರಂಭದಲ್ಲಿ ಪರಿಷತ್ ಪ್ರಶಸ್ತಿ ಪ್ರದಾನ ಮಾಡಲಿದೆ.

ಬಸವರಾಜ ಧನ್ನೂರ ಅವರು ಮೂರು ದಶಕಗಳಿಂದ ಉದ್ಯಮ ಹಾಗೂ ಸಮಾಜ ಸೇವಾ ಚಟುವಟಿಕೆಗಳಲ್ಲಿ ಸಕ್ರಿಯರಾಗಿದ್ದಾರೆ. ಬಸವ ಕಾಯಕ ದಾಸೋಹ ಫೌಂಡೇಷನ್ ಅಧ್ಯಕ್ಷ, ಗಾಂಧಿಗಂಜ್‌ನ ದಿ ಗ್ರೇನ್ ಆ್ಯಂಡ್ ಸೀಡ್ಸ್ ಮರ್ಚಂಟ್ಸ್ ಅಸೋಸಿಯೇಷನ್ ಅಧ್ಯಕ್ಷ, ದಾಲ್ ಮಿಲ್ ಓನರ್ಸ್ ಅಸೋಸಿಯೇಷನ್ ಕಾರ್ಯದರ್ಶಿ, ಅಂತರರಾಷ್ಟ್ರೀಯ ರೋಟರಿ ಜಿಲ್ಲೆ 3160 ಪಬ್ಲಿಕ್ ಇಮೇಜ್ ಅಧ್ಯಕ್ಷ ಸೇರಿ ವಿವಿಧ ಸಂಘ ಸಂಸ್ಥೆಗಳ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಜಿಲ್ಲೆಯಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದಾರೆ. ಬಸವ ಪುರಸ್ಕಾರಕ್ಕೆ ತಮ್ಮನ್ನು ಆಯ್ಕೆ ಮಾಡಿರುವುದು ಸಂತಸ ಉಂಟು ಮಾಡಿದೆ. ಪ್ರಶಸ್ತಿ ತಮಗೆ ಉದ್ಯಮ ಹಾಗೂ ಸಮಾಜಮುಖಿ ಕಾರ್ಯಗಳಲ್ಲಿ ಇನ್ನಷ್ಟು ಉತ್ಸಾಹದೊಂದಿಗೆ ತೊಡಗಿಸಿಕೊಳ್ಳಲು ಪ್ರೇರಣೆ ನೀಡಿದೆ ಎಂದು ಬಸವರಾಜ ಧನ್ನೂರ ಪ್ರತಿಕ್ರಿಯಿಸಿದ್ದಾರೆ.

**ಒಂದನೆ ಪುಟದಿಂದ...**

# ಸಂರಕ್ಷಣೆಗೆ ಸಚಿವ ಈಶ್ವರ ಖಂಡ್ರೆ ಮನವಿ

ಮಾಡುತ್ತಿರುವ ಹಾಗೂ ಮನೆ ನಿರ್ಮಿಸಿಕೊಂಡಿರುವವರಿಗೆ ತೊಂದರೆ ನೀಡದಂತೆ ಸೂಚಿಸಲಾಗಿದೆ ಎಂದರು.

ನವರಾತ್ರಿ ಮತ್ತು ದಸರಾ ಮಹೋತ್ಸವ ಕೆಡುಕಿನ ಮೇಲೆ ಒಳಿತಿನ ದಿಗ್ವಿಜಯದ ವಿಜಯೋತ್ಸವವಾಗಿದ್ದು, ನಾವು ಎಲ್ಲ ದುಶ್ಚಟ, ದುರ್ಗಣಗಳ ವಿರುದ್ಧ ವಿಜಯೋತ್ಸವ ಆಚರಿಸೋಣ. ನಾಡದೇವಿ ಚಾಮುಂಡೇಶ್ವರಿ ಎಲ್ಲರಿಗೂ ಶುಭ ತರಲಿ ಎಂದರು.

ಅರ್ಜುನ ಪ್ರಶಸ್ತಿ ಪ್ರದಾನ:

ಆನೆ ಸೆರೆ ಕಾರ್ಯಾಚರಣೆ, ಆನೆಗಳನ್ನು ಪಳಗಿಸುವುದು ಮತ್ತು ಯಶಸ್ವಿಯಾಗಿ ವನ್ಯಜೀವಿ ಸೆರೆ ಕಾರ್ಯಾಚರಣೆಯಲ್ಲಿ ಪಾಲ್ಗೊಂಡು ಉತ್ತಮ ಕಾರ್ಯ ಮಾಡಿದ ಮಾವುತರು, ಕಾವಾಡಿ ಹಾಗೂ ಅರಣ್ಯ ಸಿಬ್ಬಂದಿಗೆ ಇನ್ನು ಮುಂದೆ "ಅರ್ಜುನ ಆನೆ" ಹೆಸರಿನಲ್ಲಿ ಪ್ರಶಸ್ತಿ ನೀಡಲಾಗುವುದು. ಮೊದಲ ಸಾಲಿನ ಪ್ರಶಸ್ತಿಯನ್ನು ಭೀಮ ಆನೆಯ ಮಾವುತ ಹಾಗೂ ಕಾವಾಡಿಗಳಾದ ಗುಂಡ ಮತ್ತು ನಂಜುಂಡಸ್ವಾಮಿಯವರಿಗೆ ಪ್ರದಾನ ಮಾಡಿದರು. ಈ ಪ್ರಶಸ್ತಿ ತಲಾ 10000 ರೂ. ಗೌರವಧನ ಹಾಗೂ ಪ್ರಶಂಸಾ ಪತ್ರ ಒಳಗೊಂಡಿರುತ್ತದೆ ಎಂದು ಅವರು ಪ್ರಕಟಿಸಿದರು. ಸಮಿತಿ ಒಂದನ್ನು ರಚಿಸಿ ಅರ್ಹ ಸಾಧಕರನ್ನು ಈ ಪ್ರಶಸ್ತಿಗೆ ಪ್ರತಿ ವರ್ಷ ಆಯ್ಕೆ ಮಾಡಲಾಗುವುದು. ಗಜ ಪಯಣದ ದಿನ ಪ್ರಶಸ್ತಿ ಪ್ರದಾನ ನೆರವೇರಲಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಈ ಬಾರಿಯ ದಸರಾದಲ್ಲಿ ಪಾಲ್ಗೊಳ್ಳುವ ಆನೆಗಳ ಕಿರುಪರಿಚಯದ ಕೈಪಿಡಿ ಮತ್ತು ಪೋಸ್ಟರ್ ಬಿಡುಗಡೆ ಮಾಡಿದರು.

ಕಾರ್ಯಕ್ರಮದಲ್ಲಿ ರೇಷೆ?? ಮತ್ತು ಪಶುಸಂಗೋಪನಾ ಖಾತೆ ಸಚಿವ ಕೆ. ವೆಂಕಟೇಶ್, ಶಾಸಕರುಗಳಾದ ಹರೀಶ್ ಗೌಡ, ತನ್ವೀರ್ ಸೇಠ್, ರವಿಶಂಕರ್, ಕಾಡಾ ಅಧ್ಯಕ್ಷರಾದ ಮರಿಗೌಡ, ಅರಣ್ಯ ಪಡೆ ಮುಖ್ಯಸ್ಥರಾದ ಮೀನಾಕ್ಷಿ ನೇಗಿ ಮತ್ತಿತರರು ಪಾಲ್ಗೊಂಡಿದ್ದರು.

# ನೀರು ಪೂರೈಕೆಗೆಕ್ರಮ :ಕುರೇರ್

ಮನ್‌ಗಳನ್ನು ಮತ್ತುಜಿಲ್ಲೆಯಜಿಲ್ಲಾ ಮಟ್ಟದ ಅಧಿಕಾರಿಗಳನ್ನು ನೋಡಲ್ ಅಧಿಕಾರಿಗಳನ್ನಾಗಿ ಮಾಡಿತರಬೇತಿ ನೀಡಿ, ಮುಂದು ಬರುವ ದಿನಗಳಲ್ಲಿ 19 ಜಲಜೀವನ ಮಿಷನ್ ಕಾಮಗಾರಿಗಳನ್ನು 24*7 ಮಾಡಲುಆಯ್ದುಕೊಂಡುಯೋಜನೆರೂಪಿಸಲಾಗಿದೆಎಂದು ತಿಳಿಸಿದರು.

ಯೋಜನೆಯನ್ನು ದಿನದ 24 ಗಂಟೆ ಮಾಡಲುಆದಷ್ಟು ಬೇಗನೆ ಎಲ್ಲ ನಲ್ಲಿಗಳಲ್ಲಿ ಟ್ಯಾಪ್‌ಕನೇಕ್ಷನ್ ಮಾಡುವುದು, ಸೋರುವಿಕೆಯನ್ನು ನೋಡಿಕೊಳ್ಳುವುದು, ಬೈಪಾಸ್‌ಆಗುವದನ್ನುತಡೆಗಟ್ಟಿಓಎಚ್‌ಪಿ ಮೂಲಕ ನೀರು ಸರಬರಾಜು ಮಾಡಲು ಸಂಬಂಧ ಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಫೀಡಬ್ಯಾಕ್ ಫೌಂಡೇಶನ್‌ಸಿಇಓ ಅಜಯ್ ಸಿನ್ಹಾ ಅವರು 24/7 ನೀರು ಸರಬರಾಜು ಮಾಡಲುಅನುಸರಿಸಬೇಕಾದಎಲ್ಲ ಹಂತಗಳನ್ನು ಬಹು ವಿಸ್ತøತವಾಗಿ ತಿಳಿಸಿಕೊಟ್ಟರು. ಸಮುದಾಯದ ಸಹಭಾಗಿತ್ವ, ಎದುರಿಸಬೇಕಾದ ಸವಾಲುಗಳು, ಇಲಾಖೆ ಹಾಗೂ ಸಿಬ್ಬಂದಿಗಳ ಕರ್ತವ್ಯ ಮತ್ತು ಪಾಲ್ಗೊಳ್ಳುವ ರೀತಿ, ಗ್ರಾಮ ಪಂಚಾಯತ್‌ಅಧ್ಯಕ್ಷರು, ಸದಸ್ಯರು ಹಾಗೂ ಕಆಔ ಗಳು ವಹಿಸಬೇಕಾದ ಜವಾಬ್ದಾರಿಗಳ ಬಗ್ಗೆ ಮನದಟ್ಟು ಮಾಡಿದರು.

24*7 ನೀರು ಸರಬರಾಜು ಗ್ರಾಮಗಳನ್ನಾಗಿ ಪರಿವರ್ತಿಸುವುದರಿಂದದೊರೆಯಬಹುದಾದ ಪ್ರಯೋಜನಗಳ ಕುರಿತು ತಿಳಿಸಿದರು.ಬೇಡಿಕೆ ಪೂರೈಕೆ, ಅದಾಯಖರ್ಚು ಹಾಗೂ ಸಹಭಾಗಿದಾರರ ಜವಾಬ್ದಾರಿಗಳ ಬಗ್ಗೆ ಉದಾಹರಣೆ ಮೂಲಕ ವಿವರಿಸಿದರು.ಪ್ರತಿಗ್ರಾಮದಲ್ಲಿ ಸಮುದಾಯ ಸಭೆಗಳನ್ನು ನಡೆಸಿ ಜನರ ಮನ ಪರಿವರ್ತನೆ ಮಾಡುವುದು ಸಹ ಪ್ರಮುಖವಿಷಯಎಂದು ತಿಳಿಸಿದರು.ಜೊತೆಗೆಹಾಜರಿದ್ದ 15 ಗ್ರಾ.ಪಂ.ಗಳನ್ನಸೇರಿಸಿಕೊಂಡುಒಂದುವ್ಯಾಟ್ಸಾಪ್‌ಗುಂಪನ್ನು ಮಾಡಲು ತಿಳಿಸಿದರು.

ಕಾರ್ಯಕ್ರಮದಲ್ಲಿಜಿ.ಪಂ ಉಪ ಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಮುಖ್ಯ ಲೆಕ್ಕ ಅಧೀಕ್ಷಕ ಸಿದ್ದರಾಮೇಶ್ವರ ಉಕ್ಕಲಿ,ಗ್ರಾಮೀಣಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದಕಾರ್ಯಪಾಲಕಅಭಿಯಂತರಆಕಾಶ್ ಸೇರಿದಂತಉಪಸ್ಥಿತರಿದ್ದರು.

# ಗುರು ಕರುಣೆಯಿಂದ ಭರವಸೆಯ ಬದುಕು



(ವರದಿ.ಡಿ.ಕೆ. ಪ್ರಹ್ಲಾದ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಆ 4 ಜೀವನದಲ್ಲಿ ಸವಾಲುಗಳು, ಸಂಕಷ್ಟಗಳು, ಸಮಸ್ಯೆಗಳು ಬರುವುದು ಸಹಜ, ಇಂತಹ ಸಹಜ ಸನ್ನಿವೇಶಗಳ ಮಧ್ಯೆ ಗುರು ಕರುಣೆಯಿಂದ ಭರವಸೆಯ ಬದುಕು ಸಾಗಿಸಲು ಸಾಧ್ಯವಾಗುತ್ತದೆ ಎಂದು ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಹಾರಕೂಡ ಗ್ರಾಮದ ಬೆಳಮಗೆ ಪರಿವಾರದ ಹೆಣ್ಣುಮಕ್ಕಳ ವತಿಯಿಂದ ಆಯೋಜಿಸಿದ ಗುರುವಂದನೆ ಹಾಗೂ 859ನೇ ತುಲಾಭಾರ ಸೇವೆ ಸಮಾರಂಭದ ಸನ್ನಿಧಾನ ವಹಿಸಿ ಮಾತನಾಡಿದ ಶ್ರೀಗಳು, ಬದುಕಿನಲ್ಲಿ ಬೇವು ಬೆಲ್ಲದ ಮಿಶ್ರಣ ವಿದ್ದಾಗಲೇ ಮಾತ್ರ ಯುಗಾದಿಯ ಸಂಭ್ರಮ ಅನುಭವಿಸಲು ಸಾಧ್ಯವಾಗುತ್ತದೆ.

ಸದಾ ಸುಖಿಯಾಗಿರಬೇಕೆನ್ನುವ ಭೌತಿಕ ಹಪಾಹಪಿ ಬಿಡಬೇಕು, ಏಕೆಂದರೆ ದುಃಖ ಎನ್ನುವುದು ಸುಖದಗರ್ಭದಿಂದಲೇ ಜನಿಸಿರುತ್ತದೆ, ಹಾಗಾಗಿ ಗುರುವಿನ ನಿಷ್ಠ ಭಕ್ತನಾಗಿ, ನೋವು ನಲಿವುಗಳನ್ನು ಮೇಳೈಸಿಕೊಂಡು ನಡೆವಾತ ತೀರವನ್ನು ಸೇರಲು ಯೋಗ್ಯನಾಗುತ್ತಾನೆ ಎಂದು ನುಡಿದರು.

ಶಿವಸ್ವರೂಪಿಯಾದ ಹಾರಕೂಡ ಲಿಂ.ಚನ್ನಬಸವ ಶಿವಯೋಗಿಗಳು ಬೆಳಮಗೆ ಪರಿವಾರದ ಹೆಣ್ಣು ಮಕ್ಕಳ ಹಾಗೂ ಸರ್ವರ ಬಾಳಲ್ಲಿ ಕೃಪಾ ಗಂಗೆ ಹರಿಸಲಿ ಎಂದು ಶುಭ ಹಾರೈಸಿದರು.

ಚಂದ್ರಿಕಾ ಬೆಳಮಗೆ ಅನಿಸಿಕೆ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ನಿವೃತ್ತ ಉಪಕಾರ್ಯದರ್ಶಿ ಬಿ.ಕೆ.ಹಿರೇಮಠ, ಮಲ್ಲಿನಾಥ ಹಿರೇಮಠ ಹರಕೂಡ, ಮೇಘರಾಜ ನಾಗರಾಳೆ, ಸುಭಾಷ ಮುರುಡ, ಹೇಮಲತಾ ಹಿರೇಮಠ, ಶ್ರೀದೇವಿ ಹಿರೇಮಠ, ಶಿವಪುತ್ರಪ್ಪ ಅಂಬಲಗಾ, ಸಿದ್ಧಲಿಂಗಪ್ಪ ಬೆಳಮಗಿ, ಶಿವಶರಣಪ್ಪ ಬೆಳಮಗೆ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. ಜಯಶ್ರೀ ಪಾಟೀಲ ಸ್ವಾಗತಿಸಿದರು. ಕಾರ್ತಿಕ ಸ್ವಾಮಿ ಯಲದಗುಂಡಿ ಪ್ರಾರ್ಥನ ಗೀತೆ ಹಾಡಿದರು. ಕುಮಾರಿ ಭಾಗ್ಯಶ್ರೀ ಮತ್ತು ವಿದ್ಯಾಶ್ರೀ ಬೆಳಮಗೆ ಸಹೋದರಿಯರು ಭರತ ನಾಟ್ಯ ಪ್ರದರ್ಶನ ಮಾಡಿದರು. ನವಲಿಂಗ ಪಾಟೀಲ ನಿರೂಪಿಸಿದರು. ಕಾವೇರಿ ಪಾಟೀಲ ವಂದಿಸಿದರು.



ಬಸವಕಲ್ಯಾಣ :– ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಹಾರಕೂಡ ಗ್ರಾಮದ ಬೆಳಮಗೆ ಪರಿವಾರದ ಹೆಣ್ಣುಮಕ್ಕಳ ವತಿಯಿಂದ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರಿಗೆ ಗುರುವಂದನೆ ಹಾಗೂ 859ನೇ ತುಲಾಭಾರ ಕಾರ್ಯಕ್ರಮ ಜರುಗಿತು. ಈ ಸಂದರ್ಭದಲ್ಲಿ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

## ಸಿಪೆಟ್ ಮೈಸೂರು ಉದ್ಯೋಗಾದಾರಿತ ಡಿಪ್ಲೋಮಾ ಕೋರ್ಸ್ ಪ್ರವೇಶಾತಿ: ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.04–ಮೈಸೂರಿನಲ್ಲಿರುವ ಕೇಂದ್ರೀಯ ಪೆಟ್ರೋಕೆಮಿಕಲ್ಸ್ ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಸಂಸ್ಥೆ (ಸಿಪೆಟ್) ಕೌಶಲ್ಯ ಮತ್ತು ತಾಂತ್ರಿಕ ತರಬೇತಿ ಕೇಂದ್ರದಲ್ಲಿ ಪ್ರವೇಶಾತಿ ಪಡೆಯಲು ಈಗಾಗಲೇ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆಯ ಅವಧಿಯನ್ನು ಆಗಸ್ಟ್ 14 ರ ವರೆಗೆ ವಿಸ್ತರಿಸಲಾಗಿದೆ.

**ಕೋರ್ಸ್:** ಡಿಪ್ಲೋಮಾ ಇನ್ ಪ್ಲಾಸ್ಟಿಕ್ಸ್ ಟೆಕ್ನಾಲಜಿ –3 ವರ್ಷ, ಡಿಪ್ಲೋಮಾ ಇನ್ ಪ್ಲಾಸ್ಟಿಕ್ಸ್ ಮೌಲ್ಡ್ ಟೆಕ್ನಾಲಜಿ–3 ವರ್ಷ ಕೋರ್ಸ್.

ಸಿಪೆಟ್ ಸಂಸ್ಥೆಯು ಭಾರತ ಸರ್ಕಾರದ ರಸಾಯನ ಪೆಟ್ರೋರಸಾಯನ ಮತ್ತು ರಸಗೊಬ್ಬರ ಸಚಿವಾಲಯದ ಸ್ವಾಯತ್ತ ಸಂಸ್ಥೆಯಾಗಿದ್ದು, ಸಿಪೆಟ್ ಕರ್ನಾಟಕದ ವಿದ್ಯಾರ್ಥಿಗಳು ಪಾಲಿಮರ್, ಪೆಟ್ರೋಕೆಮಿಕಲ್ಸ್, ಪ್ಲಾಸ್ಟಿಕ್ಸ್ ಸಂಬಂಧಿತ ಕೈಗಾರಿಕಾ ವಲಯಕ್ಕೆ ಬೇಕಾದ ಮಾನವ ಸಂಪನ್ಮೂಲದ ಬೇಡಿಕೆಗಾಗಿ ಜಾಗತಿಕವಾಗಿ ಗುರುತಿಸಲ್ಪಟ್ಟಿದ್ದಾರೆ. ಈ ವೃತ್ತಿಪರ ಡಿಪ್ಲೋಮಾ ದ ಕೊನೆಯ ಸೆಮಿಸ್ಟರ್ ನಲ್ಲಿ ಪ್ರತಿಯೊಬ್ಬ ವಿದ್ಯಾರ್ಥಿಗೂ ಕ್ಯಾಂಪಸ್ ಆಯ್ಕೆಯ ಮೂಲಕ ಉದ್ಯೋಗ ದೊರಕಿಸಿಕೊಡಲಾಗುತ್ತದೆ.

ಮಾಹಿತಿಗಾಗಿ ಆನ್‌ಲೈನ್ ವೆಬ್‌ಸೈಟ್ www.cipet.gov.in ಅಥವಾ ದೂ.0821–2510618, ಮೊ.9480253024, 9791431827 ಗೆ ಸಂಪರ್ಕಿಸಬಹುದು ಎಂದು ಸಿಪೆಟ್ ಸಂಸ್ಥೆಯ ಪ್ರಧಾನ ನಿರ್ದೇಶಕ ಹಾಗೂ ಮುಖ್ಯಸ್ಥರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಸ್ತೆ ಬದಿ ಆಹಾರ ಮಾರಾಟ; ಶುಚಿತ್ವಕ್ಕಿಲ್ಲ ಒತ್ತು





ಬೀದರ್‌ನ ಮಹಾವೀರ ವೃತ್ತದ ರಸ್ತೆಯುದ್ದಕ್ಕೂ ನಿಂತಿರುವ ಜಿಲೇಬಿ ತಳ್ಳು ಗಾಡಿಗಳು

ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 04:– ನಗರದಲ್ಲಿ ಈಗಲೂ ಯಾವುದೇ ಶುಚಿತ್ವದ ಕ್ರಮಗಳನ್ನು ಕೈಗೊಳ್ಳದೆ ರಸ್ತೆಬದಿ ಸಿಹಿ ತಿನಿಸು ಹಾಗೂ ಇತರೆ ಆಹಾರ ಪದಾರ್ಥಗಳನ್ನು ರಾಜಾರೋಷವಾಗಿ ಮಾರಾಟ ಮಾಡಲಾಗುತ್ತಿದೆ. ಆದರೆ, ಆಹಾರ ಸುರಕ್ಷತಾ ಇಲಾಖೆ ತನಗೂ ಇದಕ್ಕೂ ಯಾವುದೇ ಸಂಬಂಧವಿಲ್ಲ ಎನ್ನುವಂತೆ ಕಣ್ಮುಚ್ಚಿ ಕುಳಿತಿದೆ.

ನಗರದ ಮಹಾವೀರ ವೃತ್ತ, ಬಸವೇಶ್ವರ ವೃತ್ತ, ಮೋಹನ್ ಮಾರ್ಕೆಟ್, ಕೇಂದ್ರ ಬಸ್ ನಿಲ್ದಾಣ, ನೌಬಾದ್ ವೃತ್ತ, ಓಲ್ಡ್ ಸಿಟಿ, ಮೈಲೂರ್ ಕ್ರಾಸ್, ಮನ್ನಳ್ಳಿ ರಸ್ತೆ, ಗುಂಪಾ ರಿಂಗ್ ರೋಡ್, ಚಿದ್ರಿ ರಿಂಗ್ ರೋಡ್ ಸೇರಿದಂತೆ ಹಲವು ಕಡೆಗಳಲ್ಲಿ ಆಹಾರ ಪದಾರ್ಥಗಳನ್ನು ರಸ್ತೆಯುದ್ದಕ್ಕೂ ಮಾರಾಟ ಮಾಡಲಾಗುತ್ತಿದೆ. ಆದರೆ, ಹೆಚ್ಚಿನವರು ಸ್ವಚ್ಛತೆಗೆ ಒತ್ತು ಕೊಟ್ಟಿಲ್ಲ. ಈ ರಸ್ತೆಗಳಲೆಲ್ಲಾ ನಿತ್ಯ ನೂರಾರು ವಾಹನಗಳು ಸಂಚರಿಸುತ್ತವೆ. ಅವುಗಳು ಹೊರಸೂಸುವ ಕಪ್ಪು ಹೊಗೆ, ಗಾಳಿಗೆ ಎದ್ದೇಳುವ ದೂಳೆಲ್ಲ ನೇರವಾಗಿ ಆಹಾರ ಪದಾರ್ಥಗಳ ಮೇಲೆ ಹೋಗಿ ಬೀಳುತ್ತದೆ. ಕೆಲವೇ ಕೆಲವರು ಗಾಜು, ಪ್ಲಾಸ್ಟಿಕ್ ಪರದೆ ಮಾಡಿಕೊಂಡಿದ್ದಾರೆ. ಹೆಚ್ಚಿನವರು ತೆರೆದ ಸ್ಥಿತಿಯಲ್ಲಿಯೇ ಜಿಲೇಬಿ, ಸಮೋಸಾ, ಕಚೋರಿ, ಮಿರ್ಚಿ, ವಡಾ ಪಾವ್, ಮಿಸಳ್, ಪಾನಿಪೂರಿ, ಗೋಬಿ ಮಂಚೂರಿ, ಎಗ್ ರೈಸ್, ಕಿಚಡಿ ಸೇರಿದಂತೆ ಇತರೆ ಪದಾರ್ಥಗಳನ್ನು ಮಾರಾಟ ಮಾಡುತ್ತಾರೆ.

ನಗರದ ಮಹಾವೀರ ವೃತ್ತದ ವಾಣಿಜ್ಯ ತೆರಿಗೆ ಇಲಾಖೆಯ ಕಚೇರಿಗೆ ಹೊಂದಿಕೊಂಡಿರುವ ಕಾಂಪೌಂಡ್ ಉದ್ದಕ್ಕೂ ತಳ್ಳುಗಾಡಿಗಳಲ್ಲಿ ಜಿಲೇಬಿ ತಯಾರಿಸಿ ಮಾರಾಟ ಮಾಡಲಾಗುತ್ತದೆ. ಇಲ್ಲಿರುವ ಬಹುತೇಕ ವ್ಯಾಪಾರಿಗಳು ಸುರಕ್ಷತಾ ಕ್ರಮಗಳನ್ನು ಅನುಸರಿಸಿಲ್ಲ. ತೆರೆದ ಸ್ಥಿತಿಯಲ್ಲಿಯೇ ಜಿಲೇಬಿ ಇಟ್ಟು ರಾಜಾರೋಷವಾಗಿ ಮಾರಾಟ ಮಾಡುತ್ತಾರೆ. ಅಲ್ಲಿಯೇ ಸಿಗ್ನಲ್ ಇರುವುದರಿಂದ ವಾಹನಗಳು ನಿಂತು ಹೊಗೆ ಸೂಸುತ್ತವೆ. ಜನಪ್ರತಿನಿಧಿಗಳು, ಅಧಿಕಾರಿಗಳು ಇದೇ ಮಾರ್ಗದಿಂದ ನಿತ್ಯ ಓಡಾಡುತ್ತಾರೆ. ಆದರೆ, ಯಾರೊಬ್ಬರೂ ಕೂಡ ಅದನ್ನು ತಡೆಯಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡಿಲ್ಲ.

'ಪ್ರತಿಯೊಬ್ಬರಿಗೂ ವ್ಯಾಪಾರ ವಹಿವಾಟು ನಡೆಸುವ ಹಕ್ಕಿದೆ. ಆದರೆ, ಕನಿಷ್ಠ ಸುರಕ್ಷತಾ ಕ್ರಮಗಳನ್ನು ತೆಗೆದುಕೊಳ್ಳಬೇಕು. ರಸ್ತೆಬದಿ ತೆರೆದ ಸ್ಥಿತಿಯಲ್ಲಿ ಆಹಾರ ವಸ್ತುಗಳನ್ನು ಇಡುವುದರಿಂದ ಅನೇಕ ಸಮಸ್ಯೆಗಳಿಗೆ ಕಾರಣವಾಗುತ್ತದೆ. ಇದನ್ನು ಸೇವಿಸುವ ಮುಗ್ಧ ಜನರಿಗೆ ಅನೇಕ ಮಾರಣಾಂತಿಕ ಕಾಯಿಲೆಗಳು ಬರುತ್ತವೆ. ಸಾರ್ವಜನಿಕರ ಹಿತದೃಷ್ಟಿಯಿಂದ ಎಲ್ಲರೂ ಸುರಕ್ಷತೆಗೆ ಒತ್ತು ಕೊಡಬೇಕು. ಕೊಡದಿದ್ದರೆ ಸಂಬಂಧಿಸಿದ ಇಲಾಖೆಯವರು ಕ್ರಮ ಜರುಗಿಸಬೇಕು. ಆದರೆ, ಎಲ್ಲರೂ ಕಣ್ಮುಚ್ಚಿ ಕುಳಿತಿರುವ ಹಾಗೆ ಕಾಣಿಸುತ್ತಿದೆ' ಎಂದು ಸ್ಥಳೀಯರಾದ ರಮೇಶ, ವಿನೋದ್ ಟೀಕಿಸಿದ್ದಾರೆ.

ಅಡುಗೆ ಎಣ್ಣೆ ಮೇಲೂ ಅನುಮಾನ

ಬೀದರ್ ನಗರದ ಹಲವು ಕಡೆಗಳಲ್ಲಿ ಅಡುಗೆ ಎಣ್ಣೆ ತಯಾರಿಸಲಾಗುತ್ತದೆ. ಕೆಲವು ಕಡೆಗಳಲ್ಲಿ ರಾಸಾಯನಿಕ ಮಿಶ್ರಣ ಮಾಡಿ, ಕಳಪೆ ಗುಣಮಟ್ಟದ ಎಣ್ಣೆ ತಯಾರಿಸಲಾಗುತ್ತಿದೆ ಎಂಬ ಅನುಮಾನ, ದೂರುಗಳಿವೆ.

ಎಲ್ಲೆಲ್ಲಿ ಅಡುಗೆ ಎಣ್ಣೆ ತಯಾರಿಸ ಲಾಗುತ್ತದೆಯೋ ಅದರ ಗುಣಮಟ್ಟ ಪರೀಕ್ಷೆ ಕಾಲಕಾಲಕ್ಕೆ ಆಗುತ್ತಿಲ್ಲ ಎಂಬ ಆರೋಪಗಳು ಕೇಳಿ ಬಂದಿವೆ. ಈ ಕುರಿತಾಗಿಯೂ ಶಾಸಕ ಡಾ. ಶೈಲೇಂದ್ರ ಕೆ. ಬೆಲ್ದಾಳೆ ಅವರು ಎರಡ್ಮೂರು ಸಭೆಗಳಲ್ಲಿ ದನಿ ಎತ್ತಿದ್ದಾರೆ. 'ಅಡುಗೆ ಎಣ್ಣೆಯ ಸ್ಯಾಂಪಲ್ ಕಳಿಸಲಾಗಿದೆ. ವರದಿ ಬಂದಿಲ್ಲ' ಎಂದು ಅಧಿಕಾರಿಗಳು ಸಿದ್ಧ ಉತ್ತರ ಕೊಟ್ಟು ನುಣುಚಿಕೊಳ್ಳುತ್ತಿದ್ದಾರೆ. ಆದರೆ, ಮನುಷ್ಯರ ದೇಹದೊಳಗೆ ಯಾವ ರೀತಿಯ ಅಡುಗೆ ಎಣ್ಣೆ ಸೇರುತ್ತಿದೆ ಎನ್ನುವುದು ಯಾರಿಗೂ ಗೊತ್ತಿಲ್ಲ. ಇದರ ಬಗ್ಗೆ ಹೆಚ್ಚಿನ ತನಿಖೆ ನಡೆಸುವ ಅಗತ್ಯವಿದೆ ಎನ್ನುತ್ತಾರೆ ಸಾರ್ವಜನಿಕರು.

ಈ ಸಂಬಂಧ ಆಹಾರ ಸುರಕ್ಷತಾ ಇಲಾಖೆಯ ಅಧಿಕಾರಿ ಅನಿಲ್ ಅವರನ್ನು 'ಪ್ರಜಾವಾಣಿ' ಹಲವು ಸಲ ಸಂಪರ್ಕಿಸಿದರೂ ಮಾಹಿತಿಗೆ ಲಭ್ಯರಾಗಲಿಲ್ಲ.

ಶಾಸಕರ ಮಾತಿಗೂ ಇಲ್ಲ ಕಿಮ್ಮತ್ತು

'ರಸ್ತೆಬದಿ ಆಹಾರ ಮಾರಾಟ ಮಾಡುವವರು ಯಾವುದೇ ರೀತಿಯ ಸುರಕ್ಷತಾ ಕ್ರಮಗಳನ್ನು ಅನುಸರಿಸುತ್ತಿಲ್ಲ. ಶುಚಿತ್ವಕ್ಕೂ ಒತ್ತು ಕೊಡುತ್ತಿಲ್ಲ. ರಸ್ತೆಬದಿ ತೆರೆದಿಟ್ಟು ಸಿಹಿ ತಿನಿಸು, ಆಹಾರ ಮಾರಾಟ ಮಾಡಲಾಗುತ್ತಿದೆ. ಇದೆಲ್ಲ ಮನುಷ್ಯರ ದೇಹದೊಳಗೆ ಹೋದರೆ ಏನಾಗಬಲ್ಲದು. ವ್ಯಾಪಾರಿಗಳಿಗೆ ಯಾವುದೇ ರೀತಿಯ ತೊಂದರೆ ಕೊಡದೆ ಸುರಕ್ಷತೆ, ಸ್ವಚ್ಛತೆಗೆ ಒತ್ತು ಕೊಡಲು ಸೂಚನೆ ಕೊಡಬೇಕು. ಯಾರು ನಿಯಮ ಪಾಲಿಸುವುದಿಲ್ಲವೋ ಅಂತಹವರ ವಿರುದ್ಧ ಕ್ರಮ ಕೈಗೊಳ್ಳಬೇಕು' ಎಂದು ಶಾಸಕ ಡಾ. ಶೈಲೇಂದ್ರ ಕೆ. ಬೆಲ್ದಾಳೆ ಅವರು ಜಿಲ್ಲಾ ಪಂಚಾಯಿತಿಯಲ್ಲಿ ನಡೆದ ಹಲವು ಸಭೆಗಳಲ್ಲಿ ವಿಷಯ ಪ್ರಸ್ತಾಪಿಸಿದ್ದಾರೆ.

ಆಹಾರ ಸುರಕ್ಷತಾ ಇಲಾಖೆಯವರ ಕಾರ್ಯವೈಖರಿಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಹೀಗಿದ್ದರೂ ಇದುವರೆಗೆ ಆಹಾರ ಇಲಾಖೆಯ ಅಧಿಕಾರಿಗಳು ಯಾವುದೇ ಕ್ರಮ ಕೈಗೊಂಡಿಲ್ಲ. ಶಾಸಕರು ಪ್ರಸ್ತಾಪಿಸಿದ ಸಮಸ್ಯೆ ಹೇಗಿತ್ತೋ ಈಗಲೂ ಹಾಗೆಯೇ ಇದೆ.

'ಅಧಿವೇಶನದಲ್ಲಿ ಪ್ರಸ್ತಾಪಿಸುವೆ'

'ರಸ್ತೆ ಬದಿ ಸಿಹಿ ತಿನಿಸು, ಫಾಸ್ಟ್ ಫುಡ್ ಮಾರಾಟ ಮಾಡುವವರು ಸ್ವಚ್ಛತೆ, ಸುರಕ್ಷತೆಗೆ ಒತ್ತು ಕೊಡುತ್ತಿಲ್ಲ. ಜನರ ಆರೋಗ್ಯದ ಮೇಲೆ ಪರಿಣಾಮ ಉಂಟಾಗುತ್ತಿದ್ದು, ಇದನ್ನು ತಡೆಯಬೇಕೆಂದು ಆಹಾರ ಸುರಕ್ಷತಾ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರೂ ಕಿವಿಗೊಡುತ್ತಿಲ್ಲ. ಜಿಲ್ಲಾಧಿಕಾರಿ ಕೂಡ ಗಂಭೀರವಾಗಿ ತೆಗೆದುಕೊಳ್ಳುತ್ತಿಲ್ಲ. ಮುಂಬರುವ ವಿಧಾನಸಭೆಯ ಅಧಿವೇಶನದಲ್ಲಿ ಈ ವಿಷಯ ಪ್ರಸ್ತಾಪಿಸುತ್ತೇನೆ' ಎಂದು ಡಾ. ಶೈಲೇಂದ್ರ ಕೆ. ಬೆಲ್ದಾಳೆ ಪ್ರತಿಕ್ರಿಯಿಸಿದ್ದಾರೆ.

ಆಹಾರ ಸುರಕ್ಷತಾ ಇಲಾಖೆಯ ಅಧಿಕಾರಿಗಳು ಜವಾಬ್ದಾರಿ ಇಲ್ಲದವರಂತೆ ವರ್ತಿಸುತ್ತಿದ್ದಾರೆ. ಅವರಿಗೆ ಪರಿಸ್ಥಿತಿಯ ಗಂಭೀರತೆ ಅರ್ಥವಾಗುತ್ತಿಲ್ಲ. ಯಾವುದೇ ಬೀದಿ ಬದಿ ವ್ಯಾಪಾರಿಗಳಿಗೆ ಸಮಸ್ಯೆ ಉಂಟು ಮಾಡದೆ, ಅವರಲ್ಲಿ ಜಾಗೃತಿ ಮೂಡಿಸಬೇಕು. ಕೆಲವು ಕನಿಷ್ಠ ಸುರಕ್ಷತಾ ನಿಯಮ ಪಾಲಿಸಲು ಕ್ರಮ ಕೈಗೊಳ್ಳಬೇಕೆಂದು ತಿಳಿಸಿದರೆ ಏನೂ ಮಾಡಿಲ್ಲ. ಜಿಲ್ಲೆಯಲ್ಲಿ ಇಬ್ಬರು ಸಚಿವರು, ಸರ್ಕಾರದ ಭಯ ಅವರಿಗಿಲ್ಲದಂತೆ ಕಾಣಿಸುತ್ತದೆ ಎಂದಿದ್ದಾರೆ.

# ಸ್ಥಗಿತಗೊಂಡ ಸಹಕಾರ ಸಂಘಗಳ ಸಮಾಪನೆ: ಆಕ್ಷೇಪಣೆಗಳಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.04–ಜಿಲ್ಲೆಯ ಕೆಲವು ಸಹಕಾರ ಸಂಘಗಳು ತಮ್ಮ ಉದ್ದೇಶಿತ ಕಾರ್ಯಚಟುವಟಿಕೆಗಳನ್ನು ನಿರ್ವಹಿಸದೇ ಸ್ಥಗಿತಗೊಂಡಿದ್ದು, ಆ ಸಂಘಗಳನ್ನು ಸಮಾಪನೆಗೊಳಿಸಲಾಗುವುದು ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕರು ತಿಳಿಸಿದ್ದಾರೆ. ಸಹಕಾರ ಸಂಘಗಳನ್ನು ಏಕೆ ಸಮಾಪನೆಗೊಳಿಸಬಾರದು ಎಂಬುವುದಕ್ಕೆ ಪ್ರಕಟಣೆಗೊಂಡ 07 ದಿನಗಳೊಳಗಾಗಿ ಸಂಘಗಳ ಕಾರ್ಯದರ್ಶಿ, ಸದಸ್ಯರಿಂದ ಅಥವಾ ಯಾರಿಂದಲಾದರೂ ಆಕ್ಷೇಪಣೆಗಳಿದ್ದಲ್ಲಿ ಸೂಕ್ತ ದಾಖಲೆಗಳೊಂದಿಗೆ ಈ ಕಚೇರಿಗೆ ಸಲ್ಲಿಸಬೇಕು. **ಸಂಘಗಳು:** ವಿಜಯನಗರ ಜಿಲ್ಲೆಯ ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಮೋರಿಗೇರಿಯ ಶ್ರೀ ಬೆಟ್ಟದ ಮಲ್ಲೇಶ್ವರ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹೊಸಪೇಟೆ ತಾಲ್ಲೂಕಿನ ವಡ್ಡರಹಳ್ಳಿಯ ಹಾಲು ಉತ್ಪಾದಕರ ಸಹಕಾರ ಸಂಘ ನಿ., ಕೂಡ್ಲಿಗಿ ತಾಲ್ಲೂಕಿನ ಹುಡೇಂನ ಶ್ರೀ ಗುರು ತಿಪ್ಪೇರುದ್ರಸ್ವಾಮಿ ಹತ್ತಿ ಉಣ್ಣೆ ಕೈಮಗ್ಗ ನೇಕಾರರ ಸಹಕಾರ ಸಂಘ ನಿ., ಹೊಸಹಳ್ಳಿಯ ಶ್ರೀ ಗಜಾನನ ರೇಷ್ಮೆ ಕೈಮಗ್ಗ ನೇಕಾರರ ಉತ್ಪತ್ತಿ ಮತ್ತು ಮಾರಾಟ ಸಹಕಾರ ಸಂಘ ನಿ., ಕೂಡ್ಲಿಗಿಯ ಶಿವಪುರ ಹತ್ತಿ ಉಣ್ಣೆ ಕೈಮಗ್ಗ ನೇಕಾರರ ಸಹಕಾರ ಸಂಘ ನಿ., ಕೊಟ್ಟೂರು ತಾಲ್ಲೂಕಿನ ರಾಂಪುರದ ಶ್ರೀ ಸಾಲೇಶ್ವರ ರೇಷ್ಮೆ ಮತ್ತು ಹತ್ತಿ ಕೈಮಗ್ಗ ನೇಕಾರರ ಉತ್ಪತ್ತಿ ಮಾರಾಟ ಸಹಕಾರ ಸಂಘ ನಿ., ನಿಂಬಳಗೇರಿಯ ಶ್ರೀ ಚೌಡೇಶ್ವರಿ ಮಹಿಳಾ ವಿವಿದೋದ್ದೇಶ ಕೈಗಾರಿಕಾ ಸಹಕಾರ ಸಹಕಾರ ಸಂಘ ನಿ., ಕೊಟ್ಟೂರು ಕೋಳಿ ಸಾಕಾಣಿಕೆದಾರರ ಮತ್ತು ಮಾರಾಟಗಾರರ ಸಹಕಾರ ಸಂಘ ನಿಯಮಿತ. ತಪ್ಪಿದಲ್ಲಿ ಸಹಕಾರ ಸಂಘಗಳನ್ನು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ, 1959ರ ಕಲಂ 72(2) ರನ್ವಯ ಸಮಾಪನೆಗೊಳಿಸಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಹುಮನಾಬಾದ: ಶ್ರಾವಣ ಮಾಸದ ನಿಮಿತ್ಯ ಪಟ್ಟಣದ ಆರಾಧ್ಯ ದೇವರಾದ ಶ್ರೀ ವೀರಭದ್ರೇಶ್ವರ ದೇವಸ್ಥಾನಕ್ಕೆ ಪಾಟೀಲ ಪರಿವಾರದವರು ತೆರಳಿ ವಿಶೇಷ ಪೂಜೆಯನ್ನು ಸಲ್ಲಿಸಿ, ಸಮಸ್ತ ನಾಡಿನ ಹಾಗೂ ಕ್ಷೇತ್ರದ ಜನತೆಯ ಒಳಿತಿಗಾಗಿ ಪ್ರಾರ್ಥನೆಯನ್ನು ಸಲ್ಲಿಸಿದರು. (ಮಲ್ಲಮ್ಮ ನುಡಿ ಚಿತ್ರ)

# ಸುಪ್ರಿಂಕೋರ್ಟ್ ತೀರ್ಪಿನ ಆಧಾರದ ಮೇಲೆ ತಕ್ಷಣವೇ ಒಳಮೀಸಲಾತಿ ಜಾರಿಗೊಳಿಸಿ: ಫನಾರ್ಂಡಿಸ್

ಮಲ್ಲಮ್ಮ ನುಡಿ ವಾರ್ತೆ

ಬೀದರ: ಅ.4:35 ವರ್ಷಗಳಿಂದ ನೆನೆಗುದಿಗೆ ಬಿದ್ದಿರುವ ಪರಿಶಿಷ್ಟ ಜಾತಿ ಒಳಮೀಸಲಾತಿ ಜಾರಿ ಮಾಡಿ ಇಲ್ಲ ಮುಖ್ಯಮಂತ್ರಿ ಸಿದ್ಧರಾಮಯ್ಯ ಕುರ್ಚಿ ಖಾಲಿ ಮಾಡಿ ಎಂದು ಮಾದಿಗ ಸಂಘಟನೆಗಳ ಒಕ್ಕೂಟದ ಕಾರ್ಯಾಧ್ಯಕ್ಷ ಫನಾರ್ಂಡಿಸ್ ಹಿಪ್ಪಳಗಾಂವ ತಿಳಿಸಿದರು.




ನಗರದಲ್ಲಿ ಮಾದಿಗ ಸಂಘಟನೆಗಳ ಒಕ್ಕೂಟದವತಿಯಿಂದ ಆಯೋಜಿಸಿದ ಅರೆಬೆತ್ತಲೆ ಮೆರವಣಿಗೆ, ಜಿಲ್ಲಾಧಿಕಾರಿಗಳ ಕಚೇರಿಗೆ ಮುತ್ತಿಗೆ ಹಾಗೂ ತಲೆ ಬೋಳಿಸಿಕೊಂಡು ವಿಭಿನ್ನವಾಗಿ ನಡೆಸಿದ ಪ್ರತಿಭಟನೆ ಉದ್ದೇಶಿಸಿ ಮಾತನಾಡಿದರು.

ಮಾನ್ಯ ಸುಪ್ರೀಂ ಕೋರ್ಟ್ ಪರಿಶಿಷ್ಟ ಸಮುದಾಯದೊಳಗಿನ ಅತೀ ಹಿಂದುಳಿದ ಮತ್ತು ಅವಕಾಶ ವಂಚಿತ ಸಮುದಾಯಗಳಿಗೆ ಸಾಮಾಜಿಕ ನ್ಯಾಯವನ್ನು ಒದಗಿಸುವ ಸಲುವಾಗಿ ದತ್ತಾಂಶಗಳ ಆಧಾರದ ಮೇಲೆ ಆಯಾ ರಾಜ್ಯಗಳು ಒಳಮೀಸಲಾತಿ ಜಾರಿ ಮಾಡಿ ಎಂದು ತೀರ್ಪು ನೀಡಿ ಒಂದು ವರ್ಷ ಗತಿಸಿತು. ಆದರೆ ವಿನಾಕಾರಣ ರಾಜ್ಯ ಕಾಂಗ್ರೆಸ್ ಸರ್ಕಾರ ಕುಂಟು ನೆಪವೊಡ್ಡಿ ವಿಳಂಬ ನೀತಿ ಅನುಸರಿಸುತ್ತಿದೆ. ಇದು ಖಂಡನೀಯ ಎಂದು ತಿಳಿಸಿದರು.

ರಾಜ್ಯ ಸರ್ಕಾರದ ಈ ರೀತಿಯ ಅನಗತ್ಯ ವಿಳಂಬ ನೀತಿಯಿಂದ ನಮ್ಮ ಸಮುದಾಯ ಆತಂಕಕ್ಕೆ ಒಳಗಾಗಿದೆ. ವಿದ್ಯಾರ್ಥಿಗಳು, ಉದ್ಯೋಗಾಕಾಂಕ್ಷಿಗಳು, ಕಾರ್ಮಿಕರು ಮತ್ತು ಮಹಿಳೆಯರು ಹಾಗೂ ಒಟ್ಟಾರೆ ತಮ್ಮ ನ್ಯಾಯಯುತ ಹಕ್ಕುಗಳಿಂದ ವಂಚಿತರಾಗಿದ್ದಾರೆ ಎಂದರು.

ಸುಪ್ರಿಂಕೋರ್ಟ್ ತೀರ್ಪಿನ ಪ್ರಕಾರ ಹರಿಯಾಣ, ತೆಲಂಗಾಣ, ಆಂಧ್ರಪ್ರದೇಶ ಸರ್ಕಾರಗಳು ತುರ್ತು ನಿಗಾ ವಹಿಸಿ ತಮ್ಮ ರಾಜ್ಯಗಳಲ್ಲಿ ಒಳಮೀಸಲಾತಿ ಜಾರಿ ಮಾಡಿ ಅಗ್ರಪಂಕ್ತಿಯಲ್ಲಿವೆ. ಸರ್ಕಾರ ನಾಗಮೋಹನದಾಸ್ ಅವರ ಆಯೋಗ–ಕ್ಕೆ ಸರಿಯಾಗಿ ಸಹಕಾರ ನೀಡುತ್ತಿಲ್ಲ. ಮಾಹಿತಿ ಅಪೂರ್ಣವಾಗಿವೆ. ಕಾಂತರಾಜು ವರದಿ ಸರ್ಕಾರದ ನಿರ್ಲಕ್ಷ ದಿಂದ ಕಸದ ಬುಟ್ಟಿ ಸೇರಿದೆ. ಆಗಸ್ಟ್ 11 ರಿಂದ ವಿಧಾನಮಂಡಲ ಅಧಿವೇಶನ ಆರಂಭವಾಗುತ್ತಿದೆ. ಸರ್ಕಾರ ನಿರ್ಲಕ್ಷ?? ತೋರಿದರೆ ಜನಾಕ್ರೋಶ ಉಗ್ರ ಸ್ವರೂಪ ತಾಳುತ್ತದೆ ಎಂದು ಸರ್ಕಾರಕ್ಕೆ ಎಚ್ಚರಿಕೆ ಗಂಟೆ ಬಾರಿಸಿದರು.

ಪ್ರತಿಭಟನೆಯಲ್ಲಿ ಹೋರಾಟಗಾರರು ಕೆಲವೊಂದು ಹಕ್ಕೋತ್ತಾಯ ಮಾಡಿದರು. ಒಳಮೀಸಲಾತಿ ಹೋರಾಟಗಾರರ ಮೇಲೆ ಹಾಕಲಾದ ರೌಡಿಶೀಟರ್ ಪ್ರಕರಣ ಹಿಂಪಡೆಯಬೇಕು. ಸುರಕ್ಷತಾ ಪರಿಕರ ಇಲ್ಲದೆ ಮ್ಯಾನ್‌ಹೋಹೋಲ್‌ಗೆ ಇಳಿಸಿದ ಘಟನೆಯನ್ನು ಗಂಭೀರವಾಗಿ ಪರಿಗಣಿಸಿ ಸಂಬಂಧಪಟ್ಟ ಅಧಿಕಾರಿಗಳನ್ನು ಅಮಾನತುಗೊಳಿಸಬೇಕೆಂದು ಹಕ್ಕೊತ್ತಾಯ ಮಾಡಿದರು.

ಇದೇ ವೇಳೆ ವಿವಿಧ ಸಂಘಟನೆಗಳ ಪ್ರಮುಖರಾದ ವಿಜಯಕುಮಾರ ಹಿಪ್ಪಳಗಾಂವ, ಪ್ರಭುರಾವ ತಾಳಮಡಗಿ, ಕಮಲಾಕರ ಹೆಗಡೆ, ಪರಮೇಶ್ವರ ಕಾಳಮದರಗಿ, ಡೇವಿಡ್ ವಾಡೆಕರ್, ಪೀಠರ್ ಶ್ರೀಮಂಡಲ, ವಿಶಾಲ ಜೋಶಿ, ಜಯಶೀಲ ಮೇತ್ರೆ, ಪೀಠರ್ ಚಿಟಗುಪ್ಪ, ಜೈಶೀಲ ಕಲವಾಡೆ, ವೀರಶೆಟ್ಟಿ ಬಂಬುಳಗಿ, ದಯಾನಂದ ರೇಕುಳಗಿ, ಯುವರಾಜ ಬೆಂಡೆ, ತುಕಾರಾಮ ಲಾಡೆ, ಯೋಹಾನ್ ಡಿಸೋಜಾ, ಜೀವನ ರಿಕ್ಕೆ ಸೇರಿದಂತೆ ವಿವಿಧ ತಾಲೂಕಾಗಳಿಂದ ಆಗಮಿಸಿದ ಸಾವಿರಾರು ಯುವಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# 354ನೇ ಆರಾಧನಾ ಮಹೋತ್ಸವಕ್ಕೆ ಆಗಮಿಸುವಂತೆ ಭೀಮರಾವ ಪಾಟೀಲರವರಿಗೆ ಅಮಂತ್ರಣ ಸಲ್ಲಿಕೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಶ್ರೀಗುರುರಾಜ್ ಸೇವಾ ಸಂಘ(ರಿ) ರಾಘವೇಂದ್ರ ಸ್ವಾಮಿಗಳ ಮಠ ಬೀದರ್ ಮತ್ತು ಶ್ರೀ ರಾಘವೇಂದ್ರ ವೃಂದಾವನ ಉತ್ತರಾದಿ ಮಠ ಚಿಟಗುಪ್ಪಾ ಹಾಗೂ ಬೀದರ ಜಿಲ್ಲೆಯ ಬ್ರಾಹ್ಮಣ ಸಮಾಜದ ಮುಖಂಡರು ಮತ್ತು ಪದಾಧಿಕಾರಿಗಳು ಇಂದು ಬೀದರ ವಿಧಾನ ಪರಿಷತ್ ಸದಸ್ಯರಾದ ಶ್ರೀ ಭೀಮರಾವ ಬಿ ಪಾಟೀಲ್ ರವರನ್ನು ಭೇಟಿ ಮಾಡಿ ಇದೇ ತಿಂಗಳ ಅಗಸ್ಟ್ 10, 11 ಮತ್ತು 12 ರಂದು ಬೀದರ ನಗರದಲ್ಲಿ ಮತ್ತು ಚಿಟಗುಪ್ಪಾ ಪಟ್ಟಣದಲ್ಲಿ ನಡೆಯಲಿರುವ ಶ್ರೀ ರಾಘವೇಂದ್ರ ಗುರು ಸಾರ್ವಭೌಮರ 354ನೇ ಆರಾಧನಾ ಮಹೋತ್ಸವಕ್ಕೆ ಆಗಮಿಸುವಂತೆ ಆಮಂತ್ರಿಸಿದರು.

ಇದೇ ವೇಳೆ ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಸನ್ಮಾನ್ಯ ಶ್ರೀ ಭೀಮರಾವ ಬಿ ಪಾಟೀಲ್ ಅವರು ಮಾತನಾಡಿ ಬೀದರ್ ನಗರದಲ್ಲಿರುವ ಶ್ರೀ ರಾಘವೇಂದ್ರ ಸ್ವಾಮಿ ರವರ ಮಠ ಬಹಳ ಪುರಾತನವಾದದ್ದು ರಾಯರ ದರ್ಶನಕ್ಕೆ ಸಾಕಷ್ಟು ಭಕ್ತರು ಆಗಮಿಸುತ್ತಿರುವ ಪ್ರಯುಕ್ತ ರಾಯರ ಮಠಕ್ಕೆ ನಮ್ಮ ಕರ್ನಾಟಕ ಸರ್ಕಾರದಿಂದ ಸುಮಾರು 10 ಲಕ್ಷ ರೂಪಾಯಿ ಮತ್ತು ತಮ್ಮ ಶಾಸಕರ ನಿಧಿಯಿಂದ 5 ಲಕ್ಷ ರೂಪಾಯಿ ಮಠದ ಅಭಿವೃದ್ಧಿಗಾಗಿ ನೀಡುವುದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ರಾಜ್ಯ ಬ್ರಾಹ್ಮಣ ಸಮಾಜದ ಉಪಾಧ್ಯಕ್ಷರು ಹಾಗೂ ಜಿಲ್ಲೆಯ ಅಧ್ಯಕ್ಷರಾದ ಶ್ರೀ ವೆಂಕಟರಾವ್ ಸುಧಾಕರ್ ರಾವ್ ಕುಲಕರ್ಣಿ, ಶ್ರೀ ಗುರು ಗುರುರಾಜ್ ಸೇವಾ ಸಂಘ ಬೀದರ ಅಧ್ಯಕ್ಷರು ಶ್ರೀ ಸುಧಾಕರ್ ಪಾಟೀಲ್, ಕೇಶರಾವ್ ತಳ್ಗಟ್ಕರ್, ರಾಜ್ಯ ಸಂಘಟನಾ ಕಾರ್ಯದರ್ಶಿಯಾದ ಸತೀಶ್ ಕುಲಕರ್ಣಿ, ಅರವಿಂದ್ ಕುಲಕರ್ಣಿ, ಸುನಿಲ್ ಕುಲಕರ್ಣಿ, ಶಲೇಂದ್ರ ಕುಲಕರ್ಣಿ ಭಾಲ್ಕಿ, ಉಲ್ಲಾಸ್ ಕುಲಕರ್ಣಿ ಬಸವಕಲ್ಯಾಣ, ಶ್ರೀಕಾಂತ್ ಮಹಾರಾಜ್ ಚಿಟಗುಪ್ಪಾ, ಉದಯ ಜೋಶಿ ಕಮಠಾಣ, ಭೀಮರಾವ್ ಕುಲಕರ್ಣಿ ಹುಮ್ನಾಬಾದ್, ಮನೋಹರ್ ದಂಡಿ ಬೀದರ, ಮಕರಂದ ಕುಲಕರ್ಣಿ ಸೇರಿದಂತೆ ಜಿಲ್ಲೆಯ ಬ್ರಾಹ್ಮಣ ಸಮಾಜದ ಮುಖಂಡರು ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಸಾಮಾಜಿಕ ಸ್ವಾಸ್ಥ್ಯ ಕಾಪಾಡುವಲ್ಲಿ ಪತ್ರಕರ್ತರ ಪಾತ್ರ ದೊಡ್ಡದು.ಕಾಂಬಳೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ದಿನದಿಂದ ದಿನಕ್ಕೆ ಬದಲಾಗುತ್ತಿರುವ ಕಾಲಘಟ್ಟದಲ್ಲಿ ಸಾಮಾಜಿಕ ಸ್ವಾಸ್ಥ್ಯ ಕಾಪಾಡುವಲ್ಲಿ ಪತ್ರಕರ್ತರ ಪಾತ್ರ ಬಹಳಷ್ಟು ದೊಡ್ಡದಿದೆ ಎಂದು ಪಟ್ಟಣದಲ್ಲಿ ರಾಹುಲ್ ಉದ್ಧಾರವರ ಅಧ್ಯಕ್ಷತೆಯಲ್ಲಿ ಇತ್ತಿಚೇಗೆ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಸಿದ್ಧಾರ್ಥ ಕಾಂಬಳೆ ಮಾತನಾಡುತ್ತಾ ನುಡಿದರು. ಸಾಮಾಜಿಕ ಸ್ವಾಸ್ಥ್ಯ ಕಾಪಾಡುವಲ್ಲಿ ಪತ್ರಕರ್ತರ ಪಾತ್ರ ದೊಡ್ಡದು. ಸಮಾಜದ ಸಮಸ್ಯೆಗಳನ್ನು ಬಿಂಬಿಸುವಲ್ಲಿ ಅವರ ಸತತ ಪರಿಶ್ರಮ ಶ್ಲಾಘನೀಯ ಎಂದು ಕಾಂಬಳೆ ಅಭಿಪ್ರಾಯ ಪಟ್ಟರು. ಬದುಕಿನಲ್ಲಿ ಜ್ಞಾನ ಅತಿ ಮುಖ್ಯವಾಗಿದೆ.

ಸಮಾಜದಲ್ಲಿರುವ ಅಂಕು ಡೊಂಕುಗಳನ್ನು ತಿದ್ದಿ, ಸುಂದರ ಸಮಾಜ ನಿರ್ಮಿಸುವಲ್ಲಿ ಪತ್ರಿಕೆಗಳ ಪತ್ರಾ ಅತ್ಯಂತ ಪ್ರಮುಖವಾಗಿದೆ ಎಂದರು. ದಲಿತ ಸಂಘರ್ಷ ಸಮಿತಿ ಅಂಬೇಡ್ಕರ್ ವಾದ ತಾಲ್ಲೂಕಾ ಸಂಚಾಲಕ ರಾಹುಲ್ ಉದ್ಧಾ ಮಾತನಾಡಿ, ಪತ್ರಕರ್ತರು ಯಾವಗಲೂ ಸತ್ಯದ ಪರವಾಗಿ ಇರಬೇಕಿದೆ. ಇದರಿಂದಾಗಿ ಸಮಾಜದಲ್ಲಿ ಬದಲಾವಣೆ ಕಾಣಲು ಸಾಧ್ಯವಾಗುತ್ತದೆ ಎಚಿದರು. ಪತ್ರಕರ್ತರು ಎಂದರೇ ವಿರೋಧ ಪಕ್ಷದ ನಾಯಕರು ಇದ್ದಹಾಗೆ, ಸಮಾಜ ತಿದ್ದುವ ಕೆಲಸದಲ್ಲಿ ಸದಾ ನಿರತರಾಗಿರುತ್ತಾರೆ. ಸಮಾಜ, ಆಡಳಿತದಲ್ಲಿ ಪಾರದಾರ್ಶಕತೆಗೆ ಪತ್ರಿಕೆಗಳ ಮಹತ್ವದ್ದು ಎಂದರು. ಪತ್ರಕರ್ತರು ಸಮಾಜಮುಖಿ ಕೆಲಸ ಮಾಡುವ ಮೂಲಕ ದೇಶದ ಬೆಳವಣಿಗೆ ಹಾಗೂ ಅಭಿವೃದ್ಧಿಗೆ ಸಹಕಾರ ನೀಡುತ್ತಿದ್ದಾರೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಈ ಸಂದರ್ಬದಲ್ಲಿ ಬಾಬು ಮಾಲೆ, ವೈಜಿನಾಥ ಶಿಂಧೆ, ಶಿವಕುಮಾರ್ ಮಾಡಗೂಳ, ಶಿವಾನಂದ್ ಕಟ್ಟಿಮನಿ, ಬಲಭಿಮ್ ಶಿಂಧೆ, ಶ್ರೀನಿವಾಸ್ ಕಟ್ಟಿಮನಿ, ನೀಲಕಂಠ ಶೆಟ್ಟಿ, ಮೋಹನ್ ಹುಡಗಿ, ವಿನೋದ್ ಮೆಲ್ಕೆರಿ, ಜೀವನ್ ಪೋಲೆ ಹಾಗೂ ಪತ್ರಕರ್ತರು ಇದ್ದರು.

# ಸಿರಕಟನಳ್ಳಿ: ಪಿಕೆಪಿಎಸ್ ಚುನಾವಣೆ ಫಲಿತಾಂಶ



(ಮಲ್ಲಮ್ಮ ನುಡಿ ವಾರ್ತೆ)

ಚಿಟಗುಪ್ಪ:– ಬೀದರ್ ತಾಲೂಕಿನ ಸಿರಕಟನಳ್ಳಿ ಗ್ರಾಮದ ಪಿಕೆಪಿಎಸ್ ಆಡಳಿತ ಮಂಡಳಿಯ ಚುನಾವಣೆ ರವಿವಾರ ಬೆಳಿಗ್ಗ 9 ಘಂಟೆಯಿಂದ 4 ಘಂಟೆಯ ವರೆಗೆ ಶಾಂತಿಯುತವಾಗಿ ಮತದಾನ ನಡೆಯಿತ್ತು. ಬಳಿಕ ಸಂಜೆ ಮತ ಎಣಿಕೆ ನಂತರ ಫಲಿತಾಂಶವನ್ನು ಚುನಾವಣಾಧಿಕಾರಿ ಗುಂಡಪ್ಪ ಘೋಷಣೆ ಮಾಡಿದರು.

ಸಾಮಾನ್ಯ ಸ್ಥಾನಕ್ಕೆ:– ಗ್ಯಾನರೆಡ್ಡಿ ಭೀಮರೆಡ್ಡಿ, ಜಗನಾಥ ಶಿವರಾಜ, ಧನರಾಜ ಶಂಕರೆಪ್ಪ, ಬಸವರಾಜ ಸಿದ್ದಪ್ಪ, ಶರಣಪ್ಪ ಶಿವಲಿಂಗಪ್ಪ, ಹಿಂದುಳಿದ ವರ್ಗ(ಎ) ಸ್ಥಾನಕ್ಕೆ:– ಮನ್ನಾನ ಪಟೇಲ್ ಅಮೀನೋದ್ದಿನ ಪಟೇಲ್, ಹಿಂದುಳಿದ ವರ್ಗ(ಬಿ) ಜಗನಾಥರೆಡ್ಡಿ ಭೀಮರೆಡ್ಡಿ, **ಮಹಿಳಾ ಸ್ಥಾನಕ್ಕೆ:**– ಮುನ್ನೇಮ್ಮಾ ಗ್ಯಾನರೆಡ್ಡಿ, ವೀರಮ್ಮಾ ಶಿವಾನಂದ, ಪರಿಶಿಷ್ಟ ಜಾತಿ ಸ್ಥಾನಕ್ಕೆ:– ಮಾಣಿಕಪ್ಪ ಗುಂಡಪ್ಪ, ಪರಿಶಿಷ್ಟ ಪಂಗಡ ಸ್ಥಾನಕ್ಕೆ:– ತುಕಾರಾಮ ಹಣಮಂತ, ಸಾಲಗರರಲ್ಲದ ಸ್ಥಾನಕ್ಕೆ:– ಸಂಜುಕುಮಾರ ಬಾಬುರಾವ ಆಯ್ಕೆಯಾಗಿದ್ದರೆ ಎಂದು ಚುನಾವಣಾಧಿಕಾರಿ ಗುಂಡಪ್ಪ ತಿಳಿಸಿದ್ದಾರೆ.

ಕಾರ್ಯ ನಿರ್ವಾಹಕ ಅಧಿಕಾರಿ ಮಲ್ಲಪ್ಪ ಡಾಕುಳಗಿ ಉಪಸ್ಥಿತರಿದ್ದರು.

# ರಟಕಲ್ ಗ್ರಾಮಸ್ಥರಿಂದ ಮಾಜಿ ಸಚಿವ ಪಾಟೀಲ್ ಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಭಕ್ತಾಧಿಗಳ ಕೋರಿಕೆ–ಯಂತೆ ರಟಕಲ್ ನಿಂದ ಹುಮನಾಬಾದ್ ಮತ್ತು ನೆರೆಯ ಮಹಾರಾಷ್ಟದ ಉದಗೀರ ಪಟ್ಟಣಕ್ಕೆ ಬಸ್ ಸಂಚಾರ ಸೌಲಭ್ಯ ಒಗಿಸಿದ ಹಿನ್ನಲೆ ಪಟ್ಟಣದ ಐತಿಹಾಸಿಕ ವೀರಭದ್ರೇಶ್ವರ ದೇವಸ್ಥಾನದಲ್ಲಿ ಮಾಜಿ ಸಚಿವ ರಾಜಶೇಖರ ಪಾಟೀಲ್ ಗೆ ರಟಕಲ್ ಗ್ರಾಮದ ಮುಖಂಡರು ಸನ್ಮಾನಿಸಿದರು.

> ರೇವಗ್ಗಿ ಕ್ಷೇತ್ರದ ಭಕ್ತರ ಬಹುದಿನಗಳ ಬೇಡಿಕೆಯಂತೆ ಗುಡ್ಡಕ್ಕೆ ವಿಶೇಷ ಬಸ್ ಸಂಚಾರದ ವ್ಯವಸ್ಥೆ ಕಲ್ಪಿಸಿಕೊಡಲಾಗಿದೆ. ಭಕ್ತರ ಇತರೆ ಬೇಡಿಕೆಗಳಿದ್ದರೆ ಈಡೇರಿಸುವ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು.
>
> **–ರಾಜಶೇಖರ ಪಾಟೀಲ್**
> **ಮಾಜಿ ಸಚಿವ ರಾಜಶೇಖರ ಪಾಟೀಲ್**

ಬಳಿಕ ರಟಕಲ್ ಗ್ರಾಮಸ್ಥರು ಮಾತನಾಡಿ, ಐತಿಹಾಸಿಕ ಹಿನ್ನೆಲೆಯುಳ್ಳ ರಟಕಲ್ ರೇವಣಸಿದ್ದೇಶ್ವರ ಗುಡ್ಡಕ್ಕೆ ಸುಗಮವಾಗಿ ಬಸ್ ಸಂಚಾರವಿಲ್ಲದೇ ಭಕ್ತರು ಪರದಾಡುವಂತ ಸ್ಥಿತಿ ನಿರ್ಮಾಣವಾಗಿತ್ತು. ಈ ಹಿಂದ ಬಸ್ ಸಂಚಾರ ಕುರಿತು ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರ ಗಮನಕ್ಕೆ ತರಲಾಗಿತ್ತು. ಹೀಗಾಗಿ ರಾಜಶೇಖರ ಪಾಟೀಲ್ ಅವರು ಹೆಚ್ಚಿನ ಕಾಳಜಿ ವಹಿಸಿ ರೇವಣಸಿದ್ದೇಶ್ವರ ಗುಡ್ಡ–ಕ್ಕೆ ನೂತನ ಬಸ್ ಸಂಚಾರ ವ್ಯವಸ್ಥೆ ಕಲ್ಪಿಸಿಕೊಟ್ಟಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ ಪಾಟೀಲ್, ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ್, ಜಿಪಂ. ಮಾಜಿ ಸದಸ್ಯ ವೀರಣ್ಣ ಪಾಟೀಲ್, ಕೆಪಿಸಿಸಿ ಸಹಕಾರ ವಿಭಾಗದ ರಾಜ್ಯಾಧ್ಯಕ್ಷ ಧನರಾಜ ತಾಳಂಪಳ್ಳಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಫ್ಸರಮಿಯ, ಗ್ರಾಮೀಣ ಕಾಂಗ್ರೆಸ್ ಅಧ್ಯಕ್ಷ ಓಂಕಾರ ತುಂಬಾ, ಮಲ್ಲಿಕಾರ್ಜುನ್ ಮಾಳಶಟ್ಟಿ, ಉಮೇಶ ಕುಲಕರ್ಣಿ, ಸುರೇಶ ಘಾಂಗ್ರೆ ಸೇರಿ ಅನೇಕರಿದ್ದರು.

# ಶ್ರಾವಣ ಮಾಸ ಪ್ರಯುಕ್ತ ಸಂಗಮೇಶ್ವರ ದೇವಾಲಯದಲ್ಲಿ ಭಜನೆ

ಮಲ್ಲಮ್ಮ ನುಡಿ ವಾರ್ತೆ

**(ವರದಿ:ಪರಮೇಶ ರಾಂಪುರೆ)**

ಕಮಲನಗರ:

ಶ್ರಾವಣ ಮಾಸ ನಿಮಿತ್ತ ತಾಲೂಕಿನ ಡಿಗ್ಗಿ ಗ್ರಾಮದ ಶ್ರೀ ಮಡಿವಾಳೇಶ್ವರ ಭಜನೆ ಮಂಡಳಿ ವತಿಯಿಂದ ಕಮಲನಗರ ಹೊರ ವಲಯದಲ್ಲಿ ಇರುವ ಸಂಗಮೇಶ್ವರ ದೇವಾಲಯದಲ್ಲಿ ಸೋಮವಾರ ಒಂದು ದಿನದ ಭಜನೆ ಕಾರ್ಯಕ್ರಮ ನಡೆಯಿತು.



ಸೋಮವಾರ ಬೆಳಗ್ಗೆ 9 ಗಂಟೆಗೆ ಆಟೋ,ಬೈಕ್, ಕಾಲ್ನಡಿಗೆ ಮೂಲಕ ಸಂಗಮೇಶ್ವರ ದೇವಾಲಯಕ್ಕೆ ಬಂದು ಭಕ್ತಿ ಭಾವದಿಂದ ಸುಮಾರು 3 ಗಂಟೆ ಕಾಲ ಭಜನೆ ಮಾಡಿದರು, ಈ ವೇಳೆ ಭಕ್ತರು ದೇವರಿಗೆ ಪೂಜೆ ಸಲ್ಲಿಸಿ ತೆಂಗಿನಕಾಯಿ ಒಡೆದರು.ಕಮಲನಗರ ಗ್ರಾಮ ಪಂಚಾಯತ ಮಾಜಿ ಅಧ್ಯಕ್ಷರಾದ ಶಿವಕುಮಾರ ಜುಲ್ಪೆ ಬಾಳೆ ಹಣ್ಣು ಪ್ರಸಾದ ಸೇವೆ ನೀಡಿದರು. ನಂತರ ಅನ್ನಾ, ಸಾರು, ಲಡ್ಡು ಪ್ರಸಾದವನ್ನು ಸೇವಿಸಿ ಸಂಜೆ ಮರಳಿ ಡಿಗ್ಗಿ ಗ್ರಾಮಕ್ಕೆ ತೆರಳಿದ್ದರು.

> " ಡಿಗ್ಗಿ ಗ್ರಾಮದ ಮಡಿವಾಳೇಶ್ವರ ದೇವರಿಗೂ ಮಡ್ಡಿ ಸಂಗ ದೇವರಿಗೂ ನಂಟು ಇದೆ, ಹೀಗೆ ನಮ್ಮ ಪೂರ್ವರೂ ನಂಬಿದ್ದರ, ಹಾಗಾಗಿ ನಾವು ಪ್ರತಿ ವರ್ಷ ಶ್ರಾವಣ ಮಾಸದಲ್ಲಿ ಒಂದು ಸೋಮವಾರ ಸಂಗದೇವರ ಸನ್ನಿದಿಯಲ್ಲಿ ಭಜನೆ ಮಾಡಿ ದೇವರ ಆರಾಧನೆ ಮಾಡುತ್ತೇವೆ."
>
> **–ಮಡಿವಾಳಪ್ಪ ಮುರ್ಕೆ**
> **ಡಿಗ್ಗಿ ಗ್ರಾಮದ ಹಿರಿಯರು**

ಈ ಕಾರ್ಯಕ್ರಮದಲ್ಲಿ ಮಡಿವಾಳೇಶ್ವರ ದೇವಾಲಯ ಟ್ರಸ್ಟ್'ನ ಅಧ್ಯಕ್ಷ ದೇವೇಂದ್ರ ಪಾಟೀಲ, ಶಿವಕುಮಾರ ರಾಂಪುರೆ, ವಿಜಯಕುಮಾರ ಪಾಟೀಲ, ಸೂರ್ಯಕಾಂತ ಬಿರಾದಾರ, ವೈಜೇನಾಥ ಕುಂಬಾರಗಿರೆ, ಸಂಗಮನಾಥ ಬಿರಾದಾರ,ಮಲ್ಲಿಕಾರ್ಜುನ ರಾಂಪುರೆ, ಮಹಾದಯ್ಯ ಸ್ವಾಮಿ, ಚಂದ್ರಕಾಂತ ಸ್ವಾಮಿ, ತಬಲಾ ವಾದ್ಯಕಾರದ ನಾಗಯ್ಯ ಸ್ವಾಮಿ, ಹಾರ್ಮೋನಿಮ್ ವಾದ್ಯ ಕಾರದ ಯುವರಾಜ ಚಾಂಡೇಶ್ವರೆ, ಕಾಶಿಬಾಯಿ ಪಾಂಚಾಳ, ಯುವಕಾರದ ರಾಜಕುಮಾರ ಕುಂಬಾರಗಿರೆ,ಪರಮೇಶ ರಾಂಪುರೆ,ಸಂಗಮೇಶ ಬನವಾಸೆ, ಮನೋಜ ರಾಂಪುರೆ, ನಾಗರಾಜ ಸ್ವಾಮಿ, ಅಭಿಜಿತ ರಾಂಪುರೆ, ಸಂದೀಪ ಬನವಾಸೆ, ಸೇರಿದಂತೆ ಅಕ್ಕನ ಬಳಗ ಹಾಗೂ ಅಣ್ಣ'ನ ಬಳಗದರು ಸುತ್ತ ಮುತ್ತಲಿನ ಗ್ರಾಮದ ಜನರು ಇದ್ದರು.

> "ಕಮಲನಗರ ಹೊರ ವಲಯದಲ್ಲಿ ಇರುವ ಈ ದೇವಸ್ಥಾನ ಸುಮಾರ ಶತಮಾನದ ಪುರಾತನ ದೇವಾಲಯವಾಗಿದೆ. ಮೊದಲು ನಮ್ಮ ತಂದೆ ಈ ದೇವಾಲಯದಲ್ಲಿ ಹಲವು ವರ್ಷದದಿಂದ ಪೂಜೆ ಮಾಡಿದ್ದರು. ಇದ್ದಿಗ ನಾನು ಸುಮಾರು 50 ವರ್ಷದ ದಿಂದ ದೇವಾಲಯದಲ್ಲಿ ಇದ್ದು ದೇವರ ಸೇವೆ ಮಾಡುತ್ತಿದ್ದೇನೆ."
>
> **–ಧನಾಜಿ ತಂದೆ ನಿವೃತ್ತಿರಾವ ಕದಂ, ಸಂಮೇಶ್ವರ ದೇವಾಲಯದ ಪೂಜಾರಿ**

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000

# ಗುಲಬರ್ಗಾ ದೂರದರ್ಶನ ಕೇಂದ್ರ ಉಳಿಸಿಕೊಡುವಂತೆ ಸಾಹಿತಿಗಳ ಒತ್ತಾಯ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಆ.4–ಗುಲಬರ್ಗಾ ದೂರದರ್ಶನ ಕೇಂದ್ರವು ಡಿಡಿ1 ಮುಚ್ಚಿಸದಂತೆ ಕೇಂದ್ರ ಸರ್ಕಾರಕ್ಕೆ ಇಲ್ಲಿನ ಸಾಹಿತಿಗಳು ಮತ್ತು ಕಲಾವಿದರು ಮನವಿ ಮಾಡಿದ್ದಾರೆ. ಇಂದಿಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಹಿರಿಯ ಸಾಹಿತಿ ಡಾ.ಸ್ವಾಮಿರಾವ ಕುಲಕರ್ಣಿ ಅವರು ಮೊಟ್ಟಮೊದಲು ಸೆಪ್ಟೆಂಬರ್ 3ನೇಯ 1977ರಲ್ಲಿ ಅಂದಿನ ಕೇಂದ್ರ ಸರ್ಕಾರದ ವಾರ್ತೆ ಮತ್ತು ಪ್ರಚಾರ ಇಲಾಖೆಯ ಸಚಿವರಾದ ಎಲ್.ಕೆ ಅಡ್ವಾಣಿ ಅವರು ಗುಲಬರ್ಗಾದ ದೂರದರ್ಶನ ಕೇಂದ್ರವನ್ನು ಉದ್ಘಾಟನೆ ಮಾಡಿ ಪ್ರಾರಂಭ ಮಾಡಿದರು.

ಈ ವಿಭಾಗಕ್ಕೆ ಇದೊಂದು ವರದಾನವಾಗಿದೆ, ಇಲ್ಲಿಯವರೆಗೆ ಅತ್ಯುತ್ತಮವಾಗಿ ಕೆಲಸ ನಿರ್ವಯಿಸಿಕೊಂಡು ಬಂದಿದೆ. ಮಾರ್ಚ 24, 2022ರಂದು ಭಾರತದ ಪ್ರಸಾರಕ್ಷೇತ್ರದ ಇತಿಹಾಸದಲ್ಲಿ ಒಂದು ಪ್ರಮುಖ ಮೈಲಿಗಲ್ಲಿಗೆ ಸಂಬಂಧಿಸಿದಂತೆ. ರಾಷ್ಟ್ರೀಯ ಪ್ರಸಾರಕರಾದ ದೂರದರ್ಶನವು ಬಳಕೆಯಲಿಲ್ಲದ ಆನ್‌ಲಾಗ್ ಟೆರೆಸ್ಟ್ರಿಯಲ್ ಟ್ರಾನ್ಸ್ಮೀಟರಗಳು ಕೊನೆಯ ಸೆಟ್‌ನ್ನು ಹಂತ ಹಂತವಾಗಿ ತೆಗೆದುಹಾಕಿತು.

ದೇಶವು ಡಿಜಿಟಲ್ ಸುಧಾರಣಗಳ ಹೊಸಯುಗಕ್ಕೆ ನಾಂದಿ ಹಾಡಿತು.ಪ್ರಸಾರ ಭಾರತೀಯ ಸಿ.ಇ.ಒ. ಶಶಿಶೇಖರ ಅವರು ಹೇಳುವಂತೆ ಹಂತ ಹಂತವಾಗಿ ತೆಗೆದು ಹಾಕುತ್ತಿದ್ದಾರೆ. ಆಯಸ್ಥಳಗಳಲ್ಲಿ ಇರಿಸಲಾಗಿರುವ 50 ಹಳೆಯ ಅಂಟೆನಾಗಳನ್ನು ಹೊರತುಪಡಿಸಿ ಹಳೆಯ ಎಲಾವ್ಲು ದೂರದರ್ಶನ ಕೇಂದ್ರಗಳು 2022ರಲ್ಲಿ ಮುಚ್ಚಿಸುವ ಪ್ರಯತ್ನ ಪ್ರಾರಂಭವಾಯಿತು. ದಿನಾಂಕ: 23–04–2022ಕ್ಕೆ ಗುಲಬರ್ಗಾ ದೂರದರ್ಶನ ಡಿಡಿ1ರ ಬಗ್ಗೆ ವಿಷಯ ತಿಳಿದುಕೊಳ್ಳಲು ಗುಲಬರ್ಗಾಕ್ಕೆ ನವದೆಹಲಿಯ ಪ್ರಸಾರ ಭಾರತೀಯ ಕೇಂದ್ರದ ನಿರ್ದೇಶಕರಾದ ಅಲೋಕಕುಮಾರ ಶರ್ಮಾರವರು ಗುಲಬರ್ಗಾಕ್ಕೆ ಬಂದಾಗ ಸುಮಾರು 2022ರಿಂದ ನಮ್ಮ ಕರ್ನಾಟಕ ಜಾನಪದ ಪರಿಷತ್ತು ಜಿಲ್ಲಾ ಕಲಬುರಗಿಯು ಈ ಭಾಗದ ಅನೇಕ ಕಲಾವಿದರ, ಸಾಹಿತಿಗಳ, ಹೋರಾಟಗಾರರೊಂದಿಗೆ ಪ್ರತಿಭಟಿಸುತ್ತಾ ಗುಲಬರ್ಗಾ ದೂರದರ್ಶನ ಕೇಂದ್ರವು ಉಳಿಸಿಕೊಡುವಂತೆ ಹೋರಾಟ ಮಾಡುತ್ತಾ ಬಂದಿದೆ. ಕಾರಣ ದೂರದರ್ಶನ ಕೇಂದ್ರವನ್ನು ಯಾವುದೇ ಕಾರಣಕ್ಕೆ ಮುಚ್ಚಬಾರದು ಎಂದು ಅವರು ಮನವಿ ಮಾಡಿದರು.

ಕರ್ನಾಟಕ ಜಾನಪದ ಪರಿಷತ್ ಜಿಲ್ಲಾ ಅಧ್ಯಕ್ಷ ಸಿ.ಎಸ್.ಮಾಲಿಪಾಟೀಲ, ಲಿಂಗರಾಜ ಸಿರಗಾಪೂರ ಸೇರಿದಂತೆ ಮತ್ತಿತರರು ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಡಾ.ಅಪ್ಪಾಜಿ ಅವರ ಚೇತರಿಕೆಗಾಗಿ ಪ್ರಾರ್ಥಿಸಿದ ಶಾಸಕಿ ಕನೀಜ್ ಫಾತಿಮಾ ಮತ್ತು ಕೆಪಿಸಿಸಿ ಸದಸ್ಯ ಫರಾಜ್ ಉಲ್ ಇಸ್ಲಾಂ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಆ.4– ಇಲ್ಲಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಶ್ರೀಶರಣಬಸವೇಶ್ವರ ಮಹಾದಾಸೋಹ ಸಂಸ್ಥಾನದ 8ನೇ ಪೀಠಾಧಿಪತಿ ಡಾ.ಶರಣಬಸಪ್ಪ ಅಪ್ಪಾಜಿ ಅವರನ್ನು ಕಲಬುರಗಿ ಉತ್ತರ ಕ್ಷೇತ್ರದ ಶಾಸಕಿ ಮತ್ತು ಕರ್ನಾಟಕರೇಷ್ಮೆಕೈಗಾರಿಕೆನಿಗಮದ (ಕೆಎಸ್‌ಐಸಿ) ಅಧ್ಯಕ್ಷೆ ಕನೀಜ್ ಫಾತಿಮಾ ಮತ್ತು ಮತ್ತು ಕೆಪಿಸಿಸಿ ಸದಸ್ಯ ಫರಾಜ್ ಉಲ್ ಇಸ್ಲಾಂ ಅವರು, ಭೇಟಿ ಮಾಡಿ ಪೂಜ್ಯರ ಆರೋಗ್ಯ ವಿಚಾರಿಸಿ ಅವರು ಶಿಘ್ರವೇ ಗುಣಮುಖರಾಗಲಿ ಎಂದು ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ಡಾ. ಅಪ್ಪಾಜಿ ಅವರ ಆರೋಗ್ಯದ ಕುರಿತು ಆಸ್ಪತ್ರೆ ಸಿಬ್ಬಂದಿ ಮತ್ತು ಕುಟುಂಬ ಸದಸ್ಯರೊಂದಿಗೆ ಸಮಾಲೋಚನೆನಡೆಸಿದರು, ಪೂಜ್ಯರ ಅವರ ತ್ವರಿತ ಮತ್ತು ಸಂಪೂರ್ಣ ಚೇತರಿಕೆಗಾಗಿ ಹೃತ್ಪೂರ್ವಕ ಪ್ರಾರ್ಥನೆಗಳನ್ನು ಸಲ್ಲಿಸಿದರು. ಕಲಬುರಗಿಯ ಜನರ ಪರವಾಗಿ ಅವರು, ಪ್ರಾರ್ಥನೆ, ಸದ್ಭಾವನೆಯ ಸಂದೇಶಗಳನ್ನು ನೀಡಿದರು, ಪೂಜ್ಯ ಆಧ್ಯಾತ್ಮಿಕ ನಾಯಕನ ಯೋಗಕ್ಷೇಮಕ್ಕಾಗಿ ಪ್ರಾರ್ಥಿಸುವಲ್ಲಿ ಇಡೀ ಪ್ರದೇಶವು ಒಗ್ಗಟ್ಟಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕನೀಜ್ ಫಾತಿಮಾ, ಈ ಪ್ರದೇಶದ ಆಧ್ಯಾತ್ಮಿಕ, ಶೈಕ್ಷಣಿಕ ಮತ್ತು ಸಾಮಾಜಿಕ ಚೌಕಟ್ಟನ್ನು ರೂಪಿಸುವಲ್ಲಿ ಡಾ. ಶರಣಬಸಪ್ಪ ಅಪ್ಪಾಜಿ ಅವರ ಅಪಾರ ಕೊಡುಗೆಗಳನ್ನು ಶ್ಲಾಘಿಸಿದರು. "ಡಾ. ಅಪ್ಪಾಜಿ ಅವರ ಸೇವೆ ಮತ್ತು ಸಂದೇಶ ಪೀಳಿಗೆಗೆ ಮಾರ್ಗದರ್ಶಕರು ಮತ್ತು ಬೆಳಕಾಗಿದ್ದಾರೆ. ಸಾಮರಸ್ಯ, ಶಿಕ್ಷಣ ಮತ್ತು ಸಮುದಾಯ ಕಲ್ಯಾಣವನ್ನು ಉತ್ತೇಜಿಸುವಲ್ಲಿ ಅವರ ಅವಿಶ್ರಾಂತ ಪ್ರಯತ್ನಗಳು ಅಸಂಖ್ಯಾತ ಜನರ ಜೀವನದಲ್ಲಿ ಅಳಿಸಲಾಗದ ಗುರುತು ಬಿಟ್ಟಿವೆ" ಎಂದು ಅವರು ಹೇಳಿದರು.

ಅವರ ಮುಂದಾಲೋಚನೆ ಬುದ್ಧಿವಂತಿಕೆ ಮತ್ತು ನಾಯಕತ್ವವು ಕಲಬುರಗಿಗೆ ಮಾತ್ರವಲ್ಲದೆ ಇಡೀ ರಾಜ್ಯಕ್ಕೆ ಶಕ್ತಿ ಮತ್ತು ಸ್ಫೂರ್ತಿಯ ಮೂಲವಾಗಿದೆ ಎಂದು ಅವರು ಒತ್ತಿ ಹೇಳಿದರು. "ಡಾ. ಅಪ್ಪಾಜಿ ಅವರ ಮೌಲ್ಯಗಳು ಮತ್ತು ಬೋಧನೆಗಳು ನಮ್ಮ ಯುವಕರನ್ನು ಸಬಲೀಕರಣಗೊಳಿಸಿವೆ ಮತ್ತು ದೀನದಲಿತರನ್ನು ಉನ್ನತೀಕರಿಸಿವೆ. ಅವರ ಉಪಸ್ಥಿತಿಯು ನಾವು ಆಳವಾಗಿ ಪಾಲಿಸುವ ಆಶೀರ್ವಾದವಾಗಿದೆ" ಎಂದು ಅವರು ಹೇಳಿದರು.

ಶಾಸಕರ ಭೇಟಿಯು ಕರ್ನಾಟಕದ ಅತ್ಯಂತ ಗೌರವಾನ್ವಿತ ಆಧ್ಯಾತ್ಮಿಕ ವ್ಯಕ್ತಿಗಳಲ್ಲಿ ಒಬ್ಬರ ಬಗ್ಗೆ ಒಗ್ಗಟ್ಟು ಮತ್ತು ಗೌರವದ ಸೂಚಕವಾಗಿತ್ತು. ಡಾ. ಅಪ್ಪಾಜಿ ಅವರ ಅನುಯಾಯಿಗಳು ಮತ್ತು ಭಕ್ತರು ಈ ನಿರ್ಣಾಯಕ ಸಮಯದಲ್ಲಿ ಶಾಸಕರ ಕಾಳಜಿ ಮತ್ತು ಬೆಂಬಲಕ್ಕೆ ಕೃತಜ್ಞತೆ ಸಲ್ಲಿಸಿದರು. ಡಾ. ಅಪ್ಪಾಜಿ ಅವರ ಆರೋಗ್ಯ ಸ್ಥಿತಿಯನ್ನು ನಿಕಟವಾಗಿ ಮೇಲ್ವಿಚಾರಣೆ ಮಾಡಲಾಗುತ್ತಿದೆ ಮತ್ತು ರಾಜ್ಯಾದ್ಯಂತದ ಹಿತೈಷಿಗಳು ಅವರ ಚೇತರಿಕೆಗಾಗಿ ತಮ್ಮ ಪ್ರಾರ್ಥನೆಯನ್ನು ಸಲ್ಲಿಸುತ್ತಿದ್ದಾರೆ ಎಂದು ಶಾಸಕರು ಹೇಳಿದರು.

# ಅಂಗಾಂಗ ದಾನದ ಬಗ್ಗೆ ಜಾಗೃತಿ ಅಗತ್ಯ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಅ.4:ವೈದ್ಯವಿಜ್ಞಾನ ಎಷ್ಟೇ ಮುಂದುವರೆದಿದ್ದರೂ ಕೂಡಾ ಮಾನವನ ದೇಹದ ಅಂಗಗಳು ಕೃತಕವಾಗಿ ತಯಾರಿಸಲು ಸಾಧ್ಯವಿಲ್ಲ. ರಕ್ತ, ಕಿಡ್ನಿ, ಹೃದಯ, ನೇತ್ರ, ಶ್ವಾಸಕೋಶ ಸೇರಿದಂತೆ ಅಂಗಾಂಗಗಳು ಮಾನವನಿಂದಲೇ ಪಡೆಯಬೇಕಾಗಿರುವುದರಿಂದ ಮರಣದ ನಂತರ ದೇಹ ಮಣ್ಣು, ಅಗ್ನಿ ಪಾಲಾಗುವ ಬದಲು, ಅಂಗಾಂಗ, ದೇಹ ದಾನ ಮಾಡುವುದರಿಂದ ಮತ್ತೊಬ್ಬರ ಜೀವ ಉಳಿಯುವುದರ ಜೊತೆಗೆ ದಾನಿ ಸತ್ತ ನಂತರವು ವ್ಯಕ್ತಿ ದಾನ ಮಾಡಿದ ಅಂಗಾಂಗಳ ಮೂಲಕ ಬದುಕಬಹುದಾಗಿದ್ದು, ಅಂಗಾಂಗ ದಾನಿಗಳಿಗೆ ಸಾವಿಲ್ಲ ಎಂದು ನೇತ್ರದಾನ ವಾಗ್ಮಾನಿ, ಪಿಎಫ್ ಕಚೇರಿಯ ಲೆಕ್ಕಾಧಿಕಾರಿ ಬಸವರಾಜ ಹೆಳವರ ಯಾಳಗಿ ಅಭಿಪ್ರಾಯಪಟ್ಟರು.

ನಗರದ ಆಳಂದ ರಸ್ತೆಯ ಜೆ.ಆರ್ ನಗರದಲ್ಲಿನ 'ಸಕ್ಸಸ್ ಕಂಪ್ಯೂಟರ ತರಬೇತಿ ಕೇಂದ್ರ'ದಲ್ಲಿ 'ಬಸಬೇಶ್ವರ ಸಮಾಜ ಸೇವಾ ಬಳಗದಿಂದ ಶನಿವಾರ ಜರುಗಿದ ಜರುಗಿದ 'ರಾಷ್ಟ್ರೀಯ ಅಂಗಾಂಗ ದಾನ ದಿನಾಚರಣೆ'ಯನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ನಮ್ಮ ದೇಶದಲ್ಲಿ ಅಂಗಾಂಗಗಳ ಬೇಡಿಕೆ ಹೆಚ್ಚಾಗಿದ್ದು, ದಾನಿಗಳ ಸಂಖ್ಯೆ ಕಡಿಮೆಯಿದೆ. ಅಂಗದಾನಗಳಿಂದ ಯಾವುದೇ ತೊಂದರೆಯಿಲ್ಲ ಎಂಬುದನ್ನು ಅರಿತು, ದಾನ ಮಾಡಲು ಮುಂದಾಗಬೇಕು. ಇದರ ಬಗ್ಗೆ ಚಳುವಳಿಯ ರೂಪದಲ್ಲಿ ಜಾಗೃತಿ ಮೂಡಿಸುವ ಕಾರ್ಯವಾಗಬೇಕಾಗಿದೆ. ಇತ್ತೀಚಿನ ದಿನಗಳಲ್ಲಿ ವಿವಿಧ ಕಾರಣಗಳಿಂದ ಅಂಗಾಂಗ ವೈಫಲ್ಯತೆ ಹೆಚ್ಚಾಗಿದ್ದು, ದಾನಿಗಳ ಸಂಖ್ಯೆ ಅಧಿಕವಾಗಬೇಕು. 'ಬದುಕಿರುವ ತನಕ ರಕ್ತದಾನ, ಬದುಕಿನ ನಂತರ ದೇಹದಾನ' ಮಾಡುವುದು ಅಗತ್ಯವಾಗಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಬಳಗದ ಅಧ್ಯಕ್ಷ ಎಚ್.ಬಿ.ಪಾಟೀಲ, ಮನುಷ್ಯ ಸ್ವಾರ್ಥಕ್ಕಾಗಿ ಬದುಕಿದರೆ, ಅಂತಹ ಜೀವನಕ್ಕೆ ಅರ್ಥವಿಲ್ಲ. ಕೈಲಾದಷ್ಟು ಸಮಾಜಕ್ಕೆ ಏನಾದರೂ ಕೊಡುಗೆಯನ್ನು ನೀಡಬೇಕು. ಹೆಳವರ ದಂಪತಿಗಳು ನೇತ್ರದಾನದ ಮೂಲಕ ಸಮಾಜಕ್ಕೆ ಮಾದರಿಯಾಗಿದ್ದಾರೆ. ಇಂತಹ ವ್ಯಕ್ತಿಗಳನ್ನು ಗುರುತಿಸಿ, ಅವರು ಮಾಡಿರುವ ಸಮಾಜಮುಖಿ ಕಾರ್ಯಕ್ಕೆ ಪ್ರೋತ್ಸಾಹ ನೀಡುವ ಕಾರ್ಯ ನಮ್ಮ ಬಸವೇಶ್ವರ ಸಮಾಜ ಸೇವಾ ಬಳಗವು ಮಾಡುತ್ತಿದೆ ಎಂದು ನುಡಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಅಸ್ಲಾಂ ಶೇಖ್, ಸಮಾಜ ಸೇವಕ ಶಿವಯೋಗೆಪ್ಪಾ ಎಸ್.ಬಿರಾದಾರ, ಶಿಕ್ಷಕಿಯರಾದ ಭಾಗ್ಯಶ್ರೀ ಕಾರಬಾರಿ, ಮುಸ್ಕಾನ್ ಶೇಖ್ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಶೋಷಿತ ಸಮುದಾಯಕ್ಕೆ ನ್ಯಾಯ ಕೊಡಿಸಿದ ಡಾ. ಬಾಬಾ ಸಾಹೇಬ್ ಅಂಬೇಡ್ಕರ್



ಮಲ್ಲಮ್ಮ ನುಡಿ ವಾರ್ತೆ

ಜೇವರ್ಗಿ :ಅ.4:ಶೋಷಿತ ಸಮುದಾಯಕ್ಕೆಸರ್ವ ಸಮುದಾಯಕ್ಕೆ ನ್ಯಾಯಾ ಒದಗಿಸಿದ ಭಾರತ ರತ್ನ ಸವಿಧಾನ ಶಿಲ್ಪಿ ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಎಂದು ಮಾಜಿ ಜಿಲ್ಲಾ ಪಂಚಾಯತ್ ಸದಸ್ಯ ಚಂದ್ರಶೇಖರ್ ಹರನಾಳ ಹೇಳಿದರು ಪಟ್ಟಣದ ಡಾಕ್ಟರ್ ಬಿ ಆರ್ ಅಂಬೇಡ್ಕರ್ ಮೂರ್ತಿ ಹತ್ತಿರ ಬಾಬಾ ಸಾಹೇಬ್ ಅಂಬೇಡ್ಕರ್ ವಕೀಲ ವೃತ್ತಿ ಆರಂಭಿಸಿದ ದಿನವನ್ನು ಆಚರಣೆ ಮಾಡಿ ಮಾತನಾಡಿದರು ಈ ಸಂದರ್ಭದಲ್ಲಿ ದಲಿತ ಸಂಘಟನೆಗಳ ಸಮನ್ವ ಸಮಿತಿ ಮುಖಂಡರಾದ ಭೀಮರಾಯನಗನೂರ್ ಮಲ್ಲಣ್ಣ ಕೊಡಚಿ ದೇವಿಂದ್ರವರ್ಮ ಮುದವಾಳ ಬಿ ಶರಣಬಸಪ್ಪ ರೇವನೂರ್ ಡೀಲರ್ ಶರಣಬಸಪ್ಪ ಲಕಣಪುರ್ ವಿಶ್ವರಾಧ್ಯ ಗವ್ಹಾರ್ ಶ್ರೀಮಂತ ಧನಕರ್ ಸಂಗಣ್ಣ ಗುಡೂರು ಸಿದ್ದಪ್ಪ ಆಲೂರು ಭಾಗಣ್ಣ ಸಿದ್ದನಾಳ್ ಭೀಮರಾಯ ಬಳಬಟ್ಟಿ ರವಿ ಕುಳಗೇರಿ ಸಿದ್ರಾಮಕಟ್ಟಿ ಬಾಬು ಹಿಪ್ಪರಗಿ ಬಾಲಪ್ಪ ಕೊಬ್ಬಿನ ಮಲ್ಲಮ್ಮ ಕೊಬ್ಬಿನ ಸಿದ್ದು ಜನಿವಾರ ಸಿದ್ದು ಕೆರೂರು ಯಶ್ವಂತ್ ಬಡಿಗೇರ್ ಶ್ರೀಮಂತ್ ಕಿಲ್ಲೆದಾರ್ ರಾಜು ಗುತ್ತೇದಾರ ಧರ್ಮಣ್ಣ ಮಾವನೂರು ಸೇರಿದಂತೆ ಅನೇಕರಿದ್ದರು.

# ಯುವಕ ಆತ್ಮಹತ್ಯೆ : 4 ಜನರ ವಿರುದ್ಧ ಪ್ರಕರಣ ದಾಖಲು



ಮಲ್ಲಮ್ಮ ನುಡಿ ವಾರ್ತೆ

ಜೇವರಗಿ,ಆ.4: ಹಣದ ಬೇಡಿಕೆ ಇಟ್ಟು ಕಿರುಕುಳ ನೀಡುತ್ತಿದ್ದ ಹಿನ್ನಲೆಯಲ್ಲಿ ಮನನೊಂದು ಯುವಕನೊಬ್ಬ ನೇಣು ಹಾಕಿಕೊಂಡು ಮೃತಪಟ್ಟ ಘಟನೆ ಜರುಗಿದೆ.

ರಘು ಗುಂಡಪ್ಪ ಚನ್ನೂರ (19 )ನೇಣಿಗೆ ಶರಣಾಗಿದ್ದು, ಜೇವರಗಿ ಪಟ್ಟಣದ ಬೇಕರಿಯೊಂದರಲ್ಲಿ ಕೆಲಸ ಮಾಡುತ್ತಿದ್ದ ಎಂದು ಹೇಳಲಾಗಿದೆ. ಪಟ್ಟಣದ ಬಸವೇಶ್ವರ ನಗರದ ವಿಜಯಲಕ್ಷ್ಮಿ ಹಣಮಂತ್ರಾಯ, ಮಲ್ಲಿಕಾರ್ಜುನ ಹಣಮಂತ್ರಾಯ, ಮಹಾದೇವಪ್ಪ ಹರವಾಳ, ಸಿದ್ದಾರೂಢ ಮಹಾದೇವಪ್ಪ ಹಾಗೂ ಉದಯ ಮಹಾದೇವಪ್ಪ ಅವರು ಯುವಕ ರಘು ಎಂಬುವನಿಗೆ ಪ್ರಕರಣವೊಂದಕ್ಕೆ ಸಂಬಂಧಿಸಿದಂತೆ ಹಣದ ಬೇಡಿಕೆ ಇಟ್ಟು ಕಿರುಕುಳ ನೀಡುತ್ತಿದ್ದರು. ಇವರ ಕಿರುಕುಳಕ್ಕೆ ಮನನೊಂದು ಯುವಕ ಪಟ್ಟಣದ ರಿಲ್ಯಾಯನ್ಸ್ ಪೆಟ್ರೋಲ್ ಬಂಕ್ ಹತ್ತಿರದ ಹೊಲವೊಂದರ ಶೆಡ್‌ನಲ್ಲಿ ನೇಣು ಹಾಕಿಕೊಂಡು ಮೃತಪಟ್ಟಿದ್ದಾನೆ ಎಂದು ದೂರು ನೀಡಲಾಗಿದೆ. ಘಟನೆಗೆ ಸಂಬಂಧಿಸಿದಂತೆ ಜೇವರಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ರಸ್ತೆ ತಡೆ ನಡೆಸಿ ಪ್ರತಿಭಟನೆ :

ಯುವಕ ಆತ್ಮಹತ್ಯೆ ಮಾಡಿಕೊಂಡ ಸುದ್ದಿ ಹರಡುತ್ತಿದ್ದಂತೆ ಕುರುಬ ಸಮಾಜದ ಮುಖಂಡರು ಪಟ್ಟಣದ ಅಖಂಡೇಶ್ವರ ವೃತ್ತದ ಬಳಿ ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸಿದರು.

ಯುವಕನಿಗೆ ಕಿರುಕುಳ ನೀಡಿದ 5 ಜನರನ್ನು ಕೂಡಲೇ ಬಂಧಿಸಿ ನ್ಯಾಯಾಂಗ ವಶಕ್ಕೆ ನೀಡಬೇಕು. ಮೃತ ಯುವಕನ ಕುಟುಂಬಕ್ಕೆ 25 ಲಕ್ಷ ರೂ ಪರಿಹಾರ ನೀಡುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸಿದರು. ಸ್ಥಳಕ್ಕಾಗಮಿಸಿದ ತಹಶೀಲ್ದಾರ್ ಮಲ್ಲಣ್ಣ ಯಲಗೋಡ ಸೂಕ್ತ ಭರವಸೆ ನೀಡಿದ ನಂತರ ಪ್ರತಿಭಟನೆ ಹಿಂಪಡೆಯಲಾಯಿತು. ಕುರುಬ ಸಮಾಜದ ತಾಲ್ಲೂಕು ಅಧ್ಯಕ್ಷ ಸಾಯಬಣ್ಣ ದೊಡ್ಮನಿ, ಶರಣಗೌಡ ಸರಡಗಿ, ನಿಂಗಣ್ಣ ರದ್ದೇವಾಡಗಿ, ಚಂದ್ರಶೇಖರ ನೇರಡಗಿ, ಲಿಂಗರಾಜ ಮಾಸ್ಟರ್, ರಾಜಶೇಖರ ಮುತ್ತಕೋಡ, ಸಿದ್ದು ಗಜ, ಭೀಮು ಖಾದ್ಯಾಪುರ ಸೇರಿದಂತೆ ಕುರುಬ ಸಮಾಜದ ಹಲವಾರು ಜನ ಭಾಗವಹಿಸಿದ್ದರು.

# ಮುಖ್ಯಮಂತ್ರಿ ಸಿದ್ದರಾಮಯ್ಯ ನವರ ಜನ್ಮದಿನ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಪಟ್ಟಣದಲ್ಲಿ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರ ಗೃಹ ಕಚೇರಿಯಲ್ಲಿ ಭಾನುವಾರ ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ್ ಅವರ ನೇತೃತ್ವದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನವರ ಜನ್ಮದಿನ ಕಾರ್ಯಕ್ರಮ ಅದ್ದೂರಿಯಾಗಿ ನಡೆಯಿತು. ನೆರೆದಿದ್ದ ಕಾಂಗ್ರೆಸ್ ಮುಖಂಡರ ಹಾಗೂ ನೂರಾರು ಕಾರ್ಯಕರ್ತರ ಮಧ್ಯೆ ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ್ ಕೇಕ್ ಕತ್ತರಿಸಿ ಜನ್ಮದಿನ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಬಳಿಕ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಪರಸ್ಪರ ಸಿಹಿ ವಿನಿಮಯ ಮಾಡಿಕೊಂಡು ಸಂಭ್ರಮಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಮಾಜಿ ಸದಸ್ಯ ವೀರಣ್ಣ ಪಾಟೀಲ್, ಮಲ್ಲಿಕಾರ್ಜುನ್ ಮಾಳಶೆಟ್ಟಿ, ಮಹೇಶ ಅಗಡಿ, ಸತೀಷ ರಾಂಪೂರೆ, ಪ್ರಕಾಶ ತಾಳಮಡಗಿ, ಸಂಜೀವಕುಮಾರ ವಡ್ಡನಕೇರಾ, ಸಚೀನ ದಾಡಗಿ, ಉಮೇಶ ದಾಡಗಿ, ಮಲ್ಲಿಕಾರ್ಜುನ್ ಇಟಗಿ, ವೈಜಿನಾಥ ಕುಮಾರಚಿಂಚೋಳಿ ಸೇರಿ ಅನೇಕರಿದ್ದರು.

# ಮಟಕಾ: ಓರ್ವನ ಬಂಧನ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಆ.4–ನಗರದ ಎಪಿಎಂಸಿ ಹತ್ತಿರವಿರುವ ಸಾರ್ವಜನಿಕ ರಸ್ತೆಯ ಮೇಲೆ ಮಟಕಾ ನಂಬರ್ ಬರೆದುಕೊಳ್ಳಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸಿಸಿಬಿ ಘಟಕದ ಪಿಐ ದಿಲೀಪಕುಮಾರ ಬಿ.ಸಾಗರ, ಸಿಬ್ಬಂದಿಗಳಾದ ಮೃತ್ಯುಂಜಯ, ಅಶೋಕ, ಯಲ್ಲಪ್ಪ, ಶಿವಕುಮಾರ, ನಾಗರಾಜ ಅವರು ದಾಳಿ ನಡೆಸಿ ರಾಮನಗರದ ಶಂಭುಲಿಂಗ ತಂದೆ ತಿಪ್ಪಣ್ಣ ಶೇರಿಕಾರ (40) ಎಂಬಾತನನ್ನು ಬಂಧಿಸಿ 4,200 ರೂ.ನಗದು, ಮಟಕಾ ಚೀಟಿ ಮತ್ತು ಒಂದು ಬಾಲ್‌ಪೆನ್ ಜಪ್ತಿ ಮಾಡಿದ್ದಾರೆ. ಚೌಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಉತ್ಕರ್ಷ ಶಾಸ್ತ್ರಿ ಇವರಿಗೆ ಗೌರವ ಡಾಕ್ಟರೇಟ್ ಪ್ರಶಸ್ತಿ ಪಡೆದದ್ದಕ್ಕಾಗಿ ಹಾರ್ದಿಕ ಅಭಿನಂದನೆಗಳು




ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 04 :– ಮೇ/ ವಶಿಷ್ಟ ಔಷಧ ಉದ್ಯಮ ಸಂಸ್ಥೆ ನಿಯಮಿತ ಬೆಂಗಳೂರಿನ ನಿರ್ದೇಶಕರಾಗಿರುವ ಡಾ. ಉತ್ಕರ್ಷ ಶಾಸ್ತ್ರಿದೇವಿ ಬಡಾವಣೆ ಬೀದರನ ಡಾ. ವೀರೆಂದ್ರ ಶಾಸ್ತ್ರಿ ರವರ ಜೇಷ್ಟ ಪುತ್ರ ರವರಿಗೆ ಬೆಂಗಳೂರಿನ ಕಾರ್ಪರೇಟ್ ವ್ಯವಹಾರಗಳ ಸಚಿವಾಲಯ ಹಾಗು ಕೌಶಲ್ಯ ಅಭಿವೃದ್ಧಿ ಮತ್ತು ವಾಣಿಜ್ಯ ಉದ್ಯಮ ಸಚಿವಾಲಯ ಭಾರತ ಸರ್ಕಾರ ದಿಂದ ಮಾನ್ಯತೆ ಪಡೆದ ಭಾರತ ಗೌರವ ರತ್ನ ಶ್ರೀ ಸಮ್ಮಾನ ಪ್ರಶಸ್ತಿ ಮಂಡಳಿ ವತಿಯಿಂದ ಪ್ರತಿ ವರ್ಷ ಸಾಮಾಜಿಕ ಮತ್ತು ಶಾಸ್ತ್ರಿ ನಿರ್ಮಾಣ ಕ್ಷೇತ್ರದಲ್ಲಿ ಮಹತ್ತರ ಸಾಧನೆ ಮಾಡಿದ ವ್ಯಕ್ತಿಗಳನ್ನು ಗುರುತಿಸಿ ಗೌರವಿಸುವ ಜೀವಮಾನ ಸಾಧನೆ ಪ್ರಶಸ್ತಿಯನ್ನು ಹಾಗು ಈ ಮೇಲಿನ ಉದ್ದಿಮೆಯಲ್ಲಿ ಅತೀ ಹೆಚ್ಚಿನ ಯುವ ಪ್ರತಿಭೆಗಳಿಗೆ ಉದ್ಯೋಗ ಸೃಷ್ಟಿ ಅಲ್ಲದೇ ವಿವಿಧ ಪ್ರಕಾರದ ಔಷಧಗಳನ್ನು ಮಾರುಕಟ್ಟೆಗೆ ಪರಿಚಯಿಸಿದವರು ಮತ್ತು ಔಷಧ ಕ್ಷೇತ್ರದಲ್ಲಿಯೇ ಸ್ನಾತಕ ಔಷಧ ಮತ್ತು ಸ್ನಾತಕ ವ್ಯಾಪಾರ ನಿರ್ವಹಣ ಮತ್ತು ಆಡಳಿತ ಪದವಿಯನ್ನು ಪಡೆದ ಪ್ರತಿಭಾವಂತ ಯುವ ಸಾಧಕರಾದ ಪ್ರಶಸ್ತಿ ಪುರುಸ್ಕೃತರು ಈ ವರ್ಷ ಬೀದರನ ಯುವ ಉದ್ಯಮಿ ಡಾ. ಉತ್ಕರ್ಷ ಶಾಸ್ತ್ರಿ ಬೀದರ ರವರ ಸಾಧನೆಯನ್ನು ಗುರುತಿಸಿ ಈ ಮೇಲಿನ ಸಂಸ್ಥೆಯಿಂದ ನೀಡುವ ಗೌರವ ಡಾಕ್ಟರೇಟ್ ಪ್ರಶಸ್ತಿಯನ್ನು ಇತ್ತೀಚೆಗೆ ಜರುಗಿದ 30ನೇ ಜುಲೈ 2025ರಂದು ಪ್ರಶಸ್ತಿ ವಿತರಣಾ ಸಮಾರಂಭದಲ್ಲಿ ನೀಡಿ ಸನ್ಮಾನಿಸಿದಕ್ಕಾಗಿ ಬೀದರ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಬೀದರ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಹರ್ಷ ವ್ಯಕ್ತಮಾಡಿ ಹಾರ್ದಿಕ ಅಭಿನಂದನೆಗಳು.

# ದಸರಾ ಉತ್ಸವ ಸಮಾರಂಭಕ್ಕೆ 5 ಲಕ್ಷ ರೂಪಾಯಿ ದೇಣಿಗೆಗೆ ಸಹಕಾರ ನೀಡುವೆ:ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ : ಜಗದ್ಗುರು ರಂಭಾಪುರಿ ಶ್ರೀಗಳ ನೇತೃತ್ವದಲ್ಲಿ ಬಸವಕಲ್ಯಾಣದಲ್ಲಿ ನಡೆಯುವ ದಸರಾ ಉತ್ಸವ ಸಮಾರಂಭಕ್ಕೆ 5 ಲಕ್ಷ ದೇಣಿಗೆ ನೀಡುವ ಜೊತೆಗೆ ತನು–ಮನದಿಂದ ಸಹಕರಿಸುವುದಾಗಿ ಮಾಜಿ ಸಚಿವ ರಾಜಶೇಖರ್ ಪಾಟೀಲ್ ತಿಳಿಸಿದರು.

ಪಟ್ಟಣದ ಮಾಜಿ ಸಚಿವ ರಾಜಶೇಖರ ಪಾಟೀಲ ನಿವಾಸಕ್ಕೆ ಬಸವ ಕಲ್ಯಾಣದ ದಸರ ಉತ್ಸವ ಸಮಿತಿಯ ಪದಾಧಿಕಾರಿಗಳು ಶನಿವಾರ ಸಂಜೆ ಭೇಟಿ ನೀಡಿದ ಸಂದರ್ಭದಲ್ಲಿ ಮಾತನಾಡಿದ ಅವರು, ಕಳೆದ ಕೆಲವು ವರ್ಷಗಳ ಹಿಂದೆ ಪಂಚಪೀಠದ ಐದು ಜಗದ್ಗುರುಗಳನ್ನು ಪಟ್ಟಣಕ್ಕೆ ಕರೆದು ಅದ್ದೂರಿಯಾಗಿ ಅಡ್ಡ ಪಲ್ಲಕ್ಕಿ ಉತ್ಸವ ನಡೆಸಲಾಗಿತ್ತು. ಇಲ್ಲಿನ ಕಾರ್ಯಕ್ರಮ ಪಂಚಪೀಠದ ಶ್ರೀಗಳು ಮೆಚ್ಚುಗೆ ವ್ಯಕ್ತಪಡಿಸಿದ್ದರು. ಬಸವಕಲ್ಯಾಣದ ಕಾರ್ಯಕ್ರಮ ಕುರಿತು ರಂಭಾಪುರಿ ಶ್ರೀಗಳು ನನ್ನ ಜೊತೆಗೆ ಮಾತನಾಡಿದ್ದಾರೆ. ಪಾಟೀಲ್ ಪರಿವಾರದಿಂದ ಕಾರ್ಯಕ್ರಮಕ್ಕೆ ಎಲ್ಲಾ ಸಹಾಯ ಸಹಕಾರ ನೀಡುವುದಾಗಿ ತಿಳಿಸಿದ್ದೇನೆ ಎಂದರು.

ಈ ಸಂದರ್ಭದಲ್ಲಿ ಬಸವಕಲ್ಯಾಣದ ಶಾಸಕರಾದ ಶರಣು ಸಲಗಾರ ಅವರು ಮಾಜಿ ಸಚಿವ ರಾಜಶೇಖರ್ ಪಾಟೀಲ್, ವಿಧಾನ ಪರಿಷತ್ ಸದಸ್ಯರಾದ ಭೀಮರಾವ್ ಪಾಟೀಲ್, ಚಂದ್ರಶೇಖರ್ ಪಾಟೀಲ್ ಅವರನ್ನು ಸನ್ಮಾನಿಸಿ ಕಾರ್ಯಕ್ರಮಕ್ಕೆ ಎಲ್ಲಾ ರೀತಿಯ ಸಹಾಯ ಸಹಕಾರ ನೀಡುವ ಮನವಿ ಮಾಡಿದರು.

ವೀರಭದ್ರೇಶ್ವರ ದೇವಸ್ಥಾನ ವ್ಯವಸ್ಥಾಪಕ ಸಮಿತಿಯ ಅಧ್ಯಕ್ಷರಾದ ವೀರಣ್ಣ ಪಾಟೀಲ್, ದಯಾನಂದ ಶಿಲವಂತ, ನಾಗರಾಜ ಮೆಗರಾಳೆ, ರಾಜಕುಮಾರ ಶಿರಗಾಪೂರ, ಎಂ.ಕೆ.ನಂದಿ, ಬಸವಂತ ಲವಾರೆ, ಸೂರ್ಯಕಾಂತ ಶೀಲವಂತ, ಸುನಿಲ ಪಾಟೀಲ್, ರೇವಸಿದ್ದಯ್ಯ ಸ್ವಾಮಿ, ಚಂದ್ರಶೇಖರ ಪಾಟೀಲ್ ಮುಡಬಿ, ವೀರಣ್ಣ ಶೀಲವಂತ, ಪ್ರಕಾಶ ರೆಡ್ಡಿ, ರುದ್ರೇಶ್ವರ ಗೋರ್ಟಾ, ಗುರುನಾಥ ಮುಲಗೆ, ಗೋವಿಂದ ರೆಡ್ಡಿ, ಸೂರ್ಯಕಾಂತ ಮಠ ಸ್ವಾಮಿ, ರಮೇಶ ರಾಜೋಳೆ, ನಾಮದೇವ ಜಗತಾಪೆ ಇದ್ದರು.

## ಬಳ್ಳಾರಿ: ತಲೆದೂಗಿಸಿದ “ಹಾಡಿರೇ ರಾಗಗಳ-ತೂಗಿರೇ ದೀಪಗಳ” ಸಂಗೀತ ಗಾಯನ ಕಾರ್ಯಕ್ರಮ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.04-ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಪರಿಶಿಷ್ಟಜಾತಿಉಪಯೋಜನೆಯಡಿ ನಗರದ ಡಾ.ರಾಜ್‌ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯದ ನಾಡೋಜಡಾ.ಸುಭದ್ರಮ್ಮಮನ್ಸೂರ್ ಬಯಲು ರಂಗಮಂದಿರದಲ್ಲಿ ಶನಿವಾರ ಆಯೋಜಿಸಿದ್ದ “ಹಾಡಿರೇ ರಾಗಗಳ-ತೂಗಿರೇ ದೀಪಗಳ” ಸಂಗೀತ ಗಾಯನ ಕಾರ್ಯಕ್ರಮವುನೆರೆದಿದ್ದ ಜನತೆಯ ತಲೆದೂಗಿಸಿತು.

ಕಾರ್ಯಕ್ರಮವನ್ನು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಉದ್ಘಾಟಿಸಿ, ಬಳಿಕ ಮಾತನಾಡಿದ ಅವರು ಜಾನಪದ, ತತ್ವಪದ, ಸುಗಮ ಸಂಗೀತ, ಶೋಭಾನೆ ಪದಗಳು, ರಂಗಗೀತೆ ಸೇರಿದಂತೆ ಈ ನೆಲ ಮೂಲದ ಕಲಾಪ್ರಕಾರಗಳನ್ನು ಪ್ರಸ್ತುತಪಡಿಸುವ ಕಲೆ ಮತ್ತು ಕಲಾವಿದರರ ಪ್ರೋತ್ಸಾಹಿಸುವ ಕೆಲಸವಾಗಬೇಕಿದೆ ಎಂದರು.

ಜಾನಪದ ಸಾಹಿತ್ಯ ಹಾಗೂ ತತ್ವಪದಗಳಿಗೆ ತನ್ನದೇ ಆದ ಇತಿಹಾಸ ಹೊಂದಿದೆ. ಈ ಹಿಂದೆ ಕೆಲಸದಿಂದ ದಣಿದು ಬಂದ ಹಿರಿಯರು ಪದಗಳನ್ನು ಹೇಳುತ್ತಾ ದಣಿವಾರಿಸಿಕೊಳ್ಳುತ್ತಿದ್ದರು. ಈ ಪ್ರಕಾರಗಳಕಲೆಮತ್ತುಕಲಾವಿದರನ್ನು ಗುರುತಿಸಿ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಉತ್ತಮ ಪ್ರಯತ್ನದ ಕಾರ್ಯಕ್ರಮ ಇದಾಗಿದ್ದು, ಇಂತಹ ಕಾರ್ಯಕ್ರಮ ರೂಪಿಸಿದ ರಾಜ್ಯ ಸರ್ಕಾರಕ್ಕೆ ಅಭಿನಂದನೆ ಅರ್ಪಿಸುತ್ತೇನೆ ಎಂದರು.

ಹಿಂದಿನ ಕಾಲದಲ್ಲಿ ತತ್ವಪದ, ಜಾನಪದ ಗೀತೆಗಳು ವ್ಯಕ್ತಿಯನ್ನು ಕೆಳಮಟ್ಟದಿಂದ ಮೇಲ್ಮಟ್ಟಕ್ಕೆ ಉತ್ತಮ ನಾಗರಿಕರನ್ನಾಗಿ ಬೆಳೆಸುತ್ತಿದ್ದವು. ಗ್ರಾಮೀಣ ಭಾಗದಲ್ಲಿ

ಜನಜೀವನ ಮತ್ತು ಉನ್ನತ ಸಾಂಸ್ಕೃತಿಕ ಪರಂಪರೆ ಬಿಂಬಿಸುವ ಜನಪದ ಕಲೆಗಳು ಹಳ್ಳಿಗಳಲ್ಲಿ ಹವ್ಯಾಸ ಜೀವನವಾಗಿದ್ದವು ಎಂದರು.

ತೊಗಲುಗೊಂಬೆಯ ಬೆಳಗಲ್ಲು ವೀರಣ್ಣ,ಕಲಾವಿದರಾದ ಮನ್ಸೂರ್ ಸುಭದ್ರಮ್ಮ ಸೇರಿದಂತೆ ಜಿಲ್ಲೆಯಲ್ಲಿ ಹಲವಾರು ರೀತಿಯ ಕಲಾವಿದರು ತಮ್ಮದೇ ಆದ ಕೊಡುಗೆ ನೀಡಿದ್ದಾರೆ ಎಂದು ಸ್ಮರಿಸಿದರು.

ಜಾನಪದಕಾರರು,ತತ್ವಪದಕಾರರು ಎಲೆ ಮರೆ ಕಾಯಿಯಂತೆ ಬಯಸುವವರು. ಯಾವುದೇ ಪ್ರಚಾರವನ್ನು ಬಯಸುವವರಲ್ಲ, ತಮ್ಮದೇ ಆದ ಸಾಹಿತ್ಯ ಲೋಕ, ತತ್ವಪದ ಲೋಕದಲ್ಲಿ ಬದುಕಿದವರು ಎಂದು ಬಿಂಬಿಸಿದರು.

*ಮನಸೂರೆಗೊಂಡ ಸಂಗೀತ ಗಾಯನ:*

ಬಳ್ಳಾರಿಯ ಎಸ್.ಎಂ ಹುಲುಗಪ್ಪ ತಂಡದಿಂದ ಜಾನಪದ ಗೀತೆಗಳು, ಸಿರುಗುಪ್ಪದ ಅಂಬಣ್ಣ ದಳವಾಯಿ ಅವರಿಂದ ಸುಗಮ ಸಂಗೀತ, ಬಳ್ಳಾರಿಯ ಕೆ.ಜಡೇಶ್ ಅವರಿಂದ ಭಾವ ಗೀತೆಗಳು, ಸಿರುಗುಪ್ಪ ತಾಲ್ಲೂಕಿನ ಉತ್ತನೂರಿನ ರಾಮಪ್ಪ ಅವರಿಂದ ರಂಗ ಗೀತೆಗಳು, ಕುರುಗೋಡು ತಾಲ್ಲೂಕಿನ ಕಲ್ಲುಕಂಬದ ಬಿ.ಆನಂದ ಅವರಿಂದ ಕ್ರಾಂತಿ ಗೀತೆಗಳು, ಸಂಗನಕಲ್ಲಿನ ಉಷಾ ಅವರಿಂದ ವಚನ ಗೀತೆಗಳು, ಯರ್ರಗುಡಿಯ ಸುಂಕಪ್ಪ ಹೆಚ್.ಜಿ ಅವರಿಂದ ಹೋರಾಟ ಗೀತೆಗಳು, ಇಬ್ರಾಹಿಂಪುರದ ಹೆಚ್.ಯರ್ರಿಸ್ವಾಮಿ ಅವರಿಂದ ಕ್ರಾಂತಿ ಗೀತೆಗಳು, ಕುರುಗೋಡಿನ ಕೆ.ಹನುಮಂತಪ್ಪ ಜೋಗಿ ಅವರಿಂದ ಕಿನ್ನರಿ ಜೋಗಿ ಪದಗಳು, ಕಂಪ್ಲಿ ತಾಲ್ಲೂಕಿನ ಮೆಟ್ರಿಯ ಸಿ.ಡಿ.ಮೌನೇಶ್ ಅವರಿಂದ ತತ್ವಪದ ಮತ್ತು ದಾಸರ ಪದಗಳು, ಸಂಡೂರು ತಾಲ್ಲೂಕಿನ ಭುಜಂಗನಗರದ ತಾಯಪ್ಪ ಅವರಿಂದ ಹಿಂದುಸ್ತಾನಿ ಶಾಸ್ತ್ರೀಯ ಸಂಗೀತ, ಸಂಗನಕಲ್ಲಿನ ಮಾರೆಮ್ಮ ಅವರಿಂದ ಸಂಪ್ರದಾಯ ಗೀತೆಗಳು, ಸಿರುಗುಪ್ಪ ತಾಲ್ಲೂಕಿನ ಅರಳಿಗನೂರಿನ ನೀಲಗಂಗಮ್ಮ ಅವರಿಂದ ಶೋಭಾನೆ ಪದಗಳು ಸೇರಿದಂತೆ ವಿವಿಧ ಸಂಗೀತ ಗಾಯನ ಕೇಳುಗರ ಮನಸೂರೆಗೊಂಡವು.

ಈ ವೇಳೆ ಕರ್ನಾಟಕ ಇತಿಹಾಸ ಅಕಾಡೆಮಿಯ ಅಧ್ಯಕ್ಷ ಟಿ.ಹೆಚ್.ಎಂ.ಬಸವರಾಜ, ಹಿರಿಯ ರಂಗಭೂಮಿ ಕಲಾವಿದರು ಹಾಗೂ ನೃತ್ಯ ಕಲಾವಿದರಾದ ಬಿ.ವೀಣಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ, ಹಿರಿಯ ತತ್ವಪದಗಳ ಕಲಾವಿದ ಸಿ.ಡಿ.ಮಾರೆಪ್ಪ, ಬಯಲಾಟದ ಹಿರಿಯ ಕಲಾವಿದರು ಹಾಗೂ ಕರ್ನಾಟಕ ಬಯಲಾಟ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಕೆ.ರಂಗಾರೆಡ್ಡಿ, ಕುರುಗೋಡಿನ ಕಿನ್ನರಿ ಜೋಗಿ ಪದಗಳ ಗಾಯಕ ಕೆ.ಹನುಮಂತಪ್ಪ ಸೇರಿದಂತೆ ಕಲಾವಿದರು, ಸಾರ್ವಜನಿಕರು ಇದ್ದರು.


## ವೃತ್ತಿಪರ ಸಮಾಜ ಕಾರ್ಯಕರ್ತರ ಅಸೋಸಿಯೇಷನ್ ದಿಂದ ಶಾಲಾ ಕಾಲೇಜುಗಳಲ್ಲಿ MSW /BSW ಪದವೀಧರರನ್ನು ಸಮಾಲೋಚಕರನ್ನಾಗಿ ನೇಮಿಸುವಂತೆ ಪತ್ರ ಚಳುವಳಿಯ ಮುಖಾಂತರ ಸರಕಾರಕ್ಕೆ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಕರ್ನಾಟಕ ರಾಜ್ಯ ಪ್ರೊಫೆಷನಲ್ ಸೋಶಿಯಲ್ ವರ್ಕರ್ಸ್ ವೆಲ್ಫೇರ್ ಅಸೋಸಿಯೇಷನ್ ನ ಜಿಲ್ಲಾಧ್ಯಕ್ಷರಾದ ಮೌನೇಶ ಪಾಟೀಲ್ ಬೆಳಗೇರಾ ಇವರ ನೇತೃತ್ವದಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಹಾಗೂ ಕಾಲೇಜ್ ಹಂತದಲ್ಲಿ ಮಕ್ಕಳ ಹಕ್ಕುಗಳ ರಕ್ಷಣೆ ಮತ್ತು ಆತ್ಮಹತ್ಯೆ, ಹಾಗೂ ಒತ್ತಡ ನಿರ್ವಹಣೆಯ ಮೂಲಕ ಮಕ್ಕಳ ಮಾನಸಿಕ ಆರೋಗ್ಯ ಕಾಪಾಡಲು, ಮಕ್ಕಳ ಮಾನಸಿಕ ಆರೋಗ್ಯ ವೃದ್ಧಿಗೆ ಶಾಲಾ ಕಾಲೇಜುಗಳಲ್ಲಿ ಎಂ ಎಸ್ ಡಬ್ಲ್ಯೂ/ಬಿ ಎಸ್ ಡಬ್ಲ್ಯೂ ಸ್ನಾತಕೋತರರು ಪದವಿಯಲ್ಲಿ ಪಠ್ಯವಲ್ಲದೆ ಮಾನಸಿಕ ಆರೋಗ್ಯ ಕ್ಷೇತ್ರದಲ್ಲಿ ಅನುಭವಿ ಹಾಗೂ ಪ್ರಯೋಗಿಕವಾಗಿಯೂ ಕೂಡ ನೈಪುಣತೆಯನ್ನು ಹೊಂದಿರುತ್ತಾರೆ. ಇವರ ಕಾರ್ಯವೈಖರಿಯು ವಿದ್ಯಾರ್ಥಿಗಳಿಗೆ ಶಾಲಾ ಹಂತದಲ್ಲಿ ಹರಿಹರಯ ಮಾನಸಿಕ ಆರೋಗ್ಯದ ಸಮಸ್ಯೆಗಳನ್ನು ಗುರುತಿಸಿ ಅವರಿಗೆ ಜೀವನ ಕೌಶಲ್ಯ ಶಿಕ್ಷಣ ಆಪ್ತ ಸಮಾಲೋಚನೆ ಸೇರಿದಂತೆ ತರಬೇತಿಯನ್ನು ನೀಡುವುದಲ್ಲದೆ ಸಮುದಾಯದಲ್ಲಿಯೂ ಕೂಡ ಮನೆ ಭೇಟಿ ಮಾಡಿ ಅವರ ಪೋಷಕರುಗಳಿಗೆ ಒತ್ತಡ ನಿವಾರಣೆ ಕಾರ್ಯಕ್ರಮ ಹಾಗೂ ಮಕ್ಕಳಲ್ಲಿರುವ ಮಾನಸಿಕ ತೊಂದರೆಗಳ ಬಗ್ಗೆ, ಆತ್ಮಹತ್ಯೆಯ ದುಷ್ಪರಿಣಾಮಗಳ ಬಗ್ಗೆ, ಇನ್ನಿತರ ಸಮಸ್ಯೆಗಳ ಬಗ್ಗೆ, ಮನೋವೈದ್ಯಕೀಯ ಶಿಕ್ಷಣ ನೀಡಿ ಜಾಗೃತಿ ಮೂಡಿಸುವುದಲ್ಲದೆ ಅವರ ಬಗ್ಗೆ ಅನುಸರಣೆಯನ್ನು ಕೂಡ ಮಾಡುವ ಕಾರ್ಯವನ್ನು ಮಾಡುತ್ತಾರೆ. ಆದ್ದರಿಂದ ಬಿ ಎಸ್ ಡಬ್ಲ್ಯೂ/ಎಂ ಎಸ್ ಡಬ್ಲ್ಯೂ ಸ್ನಾತಕೋತ್ತರ ಮುಗಿಸಿದ ಪದವೀಧರರನ್ನು ರಾಜ್ಯದಲ್ಲಿರುವ ಎಲ್ಲಾ ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಶೀಘ್ರವೇ ಮಾನಸಿಕ ಆರೋಗ್ಯ ಸಲಹೆಗಾರರನ್ನು/ಆಪ್ತ ಸಮಾಲೋಚಕರನ್ನು/ಸಾಮಾಜಿಕ ಕಾರ್ಯಕರ್ತರನ್ನು ನೇಮಕಾತಿ ಮಾಡಿಕೊಳ್ಳಲು ಆದೇಶವನ್ನು ಹೊರಡಿಸಬೇಕೆಂದು ಕರ್ನಾಟಕ ಸ್ಟೇಟ್ ಪ್ರೊಫೆಷನಲ್ ಸೋಶಿಯಲ್ ವರ್ಕರ್ಸ್ ವೇಲ್ಫೇರ್ ಅಸೋಸಿಯೇಷನ್ ರಾಜ್ಯಾದ್ಯಂತ ಪತ್ರ ಚಳುವಳಿ ಮೂಲಕ ಮುಖ್ಯಮಂತ್ರಿಗಳಿಗೆ, ಉಪ ನಿರ್ದೇಶಕರು ಶಿಕ್ಷಣ ಇಲಾಖೆ, ಆಯುಕ್ತರು, ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗಕ್ಕೆ ಹಾಗೂ ಶಿಕ್ಷಣ ಸಚಿವರಿಗೆ ಜಿಲ್ಲಾ ಘಟಕದಿಂದ ಪತ್ರಗಳು ಹಾಕುವ ಮುಖಾಂತರ ಒತ್ತಾಯ ಮಾಡಲಾಯಿತು. ಈ ಸಂದರ್ಭದಲ್ಲಿ ಅಸೋಸಿಯೇಷನ್ ನ ಮಹಿಳಾ ಜಿಲ್ಲಾ ಘಟಕದ ಅಧ್ಯಕ್ಷರಾದ ಶ್ವೇತಾ ನಾಯಕ ಹಾಗೂ ಸದಸ್ಯರುಗಳಾದ ಸತೀಶ್ ಕುಮಾರ್ ದುಪ್ಪಲ್ಲಿ, ಬಸವರಾಜ್, ತಿಮ್ಮಣ್ಣ, ಇರ್ಷದ್, ಬೇಬಿ ರಾಠೋಡ್, ತನುಜಾ, ಶರಣಮ್ಮ, ಪುಷ್ಪ ಉಪಸ್ಥಿತರಿದ್ದರು.

## ಬಸವ ಸಂಸ್ಕೃತಿ ಅಭಿಯಾನ ಸಮಿತಿಯ ಅಧ್ಯಕ್ಷರಾಗಿ ಶ್ರೀ ಬಸವರಾಜ ಧನ್ನೂರ ನೇಮಕ.



ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 04 :- ಲಿಂಗಾಯತ ಮಠಾಧಿಪತಿಗಳ ಒಕ್ಕೂಟದ ಅಧ್ಯಕ್ಷರಾದ ಪೂಜ್ಯಶ್ರೀ ಬಸವಲಿಂಗ ಪಟ್ಟದ್ದೇವರ ಸಾನಿಧ್ಯದಲ್ಲಿ ಇಂದು ಬೀದರನ ಚನ್ನಬಸವ ಪ್ರಸಾದ ನಿಲಯದಲ್ಲಿ “ಬಸವ ಸಂಸ್ಕೃತಿ ಅಭಿಯಾನ”ದ ಪೂರ್ವಭಾವಿ ಸಭೆ ಜರುಗಿತು. ಸಭೆಯಲ್ಲಿ ಅಪ್ಪಟ ಬಸವತತ್ವನಿಷ್ಠರಾದ ಜಾಗತಿಕ ಲಿಂಗಾಯತ ಮಹಾಸಭಾ ಬೀದರ ಜಿಲ್ಲಾಧ್ಯಕ್ಷ ಶರಣ ಬಸವರಾಜ ಧನ್ನೂರ ಅವರನ್ನು ಸರ್ವಾನುಮತದಿಂದ ಬಸವ ಸಂಸ್ಕೃತಿ ಅಭಿಯಾನ ಸಮಿತಿಯ ಅಧ್ಯಕ್ಷರಾಗಿ ನೇಮಕ ಮಾಡಲಾಯಿತು.

ಇಂದಿನ ಸಭೆಯಲ್ಲಿ ಹುಲಸೂರಿನ ಪೂಜ್ಯರಾದ ಶ್ರೀ ಶಿವಾನಂದ ಮಹಾಸ್ವಾಮಿಗಳು, ಭಾಲ್ಕಿ ಹಿರೇಮಠದ ಪೂಜ್ಯರಾದ ಶ್ರೀ ಗುರುಬಸವ ಪಟ್ಟದ್ದೇವರು, ಬಸವಧರ್ಮ ಪೀಠದ ಪೂಜ್ಯರಾದ ಶ್ರೀ ಸಿದ್ಧರಾಮೇಶ್ವರ ಮಹಾಸ್ವಾಮಿಗಳು, ಬಸವ ಸೇವಾ ಪ್ರತಿಷ್ಠಾನದ ಅಕ್ಕ ಡಾ, ಗಂಗಾಂಬಿಕೆ ಹಾಗು ಲಿಂಗಾಯತ ಮಹಾಮಠದ ಪೂಜ್ಯ ಶ್ರೀ ಪ್ರಭುದೇವ ಮಹಾಸ್ವಾಮಿಗಳು ಉಪಸ್ಥಿತರಿದ್ದರು.

ಇದೆ ಸಂಧರ್ಭದಲ್ಲಿ ಲಿಂಗಾಯತ ಸಮಾಜ ಅಧ್ಯಕ್ಷರಾದ ಕುಶಾಲರಾವ ಪಾಟೀಲ ಖಾಜಾಪುರ, ಬಸವ ಜಯಂತಿ ಉತ್ಸವ ಸಮಿತಿಯ ಅಧ್ಯಕ್ಷರಾದ ಜೈರಾಜ ಖಂಡ್ರೆ, ರಾಜೇಂದ್ರ ಗಂದಗೆ, ಸಿದ್ದಯ್ಯಾ ಕಾವಡಿ, ಮಲ್ಲಿಕಾರ್ಜುನ ಪಂಚಾಕ್ಷರಿ, ಚಂದ್ರಕಾಂತ ಮಿರ್ಚೆ, ಉಷಾ ಮಿರ್ಚೆ, ಜಯದೇವಿ ಯದಲಾಪೂರೆ, ಸುವರ್ಣಾ ಧನ್ನೂರ, ನಿರ್ಮಲಾ ಮಸೂದಿ ಮತ್ತಿತರರು ಇದ್ದರು. ಯೋಗೇಂದ್ರ ಯದಲಾಪೂರೆ ನಿರೂಪಿಸಿದರೆ ಉಮಾಕಾಂತ ಮೀಸೆ ಸ್ವಾಗತ ಕೋರಿದರು.


## ಕ್ಷೇತ್ರದಲ್ಲಿ ಬಯ್ಯಾಪುರ ಹಸ್ತಕ್ಷೇಪ ನಿಲ್ಲಿಸದಿದ್ದರೆ ತಕ್ಕ ಉತ್ತರ ನೀಡುತ್ತೇವೆ ಬ್ಲಾಕ್ ಅಧ್ಯಕ್ಷ : ಗೋವಿಂದ ನಾಯಕ್




ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು ತಾಲೂಕ ಮೀಸಲು ಕ್ಷೇತ್ರವಾಗಿದ್ದು ಇಲ್ಲಿ ವಿಧಾನ ಪರಿಷತ್ ಸದಸ್ಯರಾದ ಶರಣಗೌಡ ಪಾಟೀಲ್ ಬಯ್ಯಾಪುರ ಪಕ್ಷದ ಸಿದ್ಧಾಂತದ ವಿರುದ್ಧ, ಹಾಗೂ ಪಕ್ಷದ ವಿರೋಧ ವೇದಿಕೆ ಸಿದ್ಧಪಡಿಸಿ ಕ್ಷೇತ್ರದಲ್ಲಿ ನಿಷ್ಠಾವಂತ ಕಾರ್ಯಕರ್ತರಲ್ಲಿ ಗೊಂದಲ ಮೂಡಿಸಿ ಹಸ್ತಕ್ಷೇಪ ಮಾಡುತ್ತಿದ್ದು ಇದನ್ನು ಇಲ್ಲಿಗೆ ನಿಲ್ಲಿಸದಿದ್ದರೆ, ಮುಂದಿನ ದಿನಮಾನಗಳಲ್ಲಿ ಬ್ಲಾಕ್ ಕಾಂಗ್ರೆಸ್ ವತಿಯಿಂದ ನಿಮ್ಮ ವಿರುದ್ಧ ಶಿಸ್ತುಕ್ರಮಕ್ಕಾಗಿ ಯಾವುದೇ ಕಾರಣಕ್ಕೂ ಹಿಂಜರಿಯುವುದಿಲ್ಲವೆಂದು ಲಿಂಗಸುಗೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಗೋವಿಂದ ನಾಯಕ್ ಇಂದು ಲಿಂಗಸುಗೂರ ಪಟ್ಟಣದ ಪತ್ರಿಕ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದರು, ಈಗಾಗಲೇ ನಮ್ಮ ಕ್ಷೇತ್ರದಲ್ಲಿ ಎಸ್ಸಿ, ಎಸ್ಟಿ, ಮೈನಾರಿಟಿ, ಮಹಿಳಾ ಘಟಕ ಸೇರಿದಂತೆ ಎಲ್ಲಾ ಪದಾಧಿಕಾರಿಗಳನ್ನು ಈ ಕ್ಷೇತ್ರದ ಮಾಜಿ ಶಾಸಕರು ಕೆಪಿಸಿಸಿ ರಾಜ್ಯ ಉಪಾಧ್ಯಕ್ಷರಾದ ಡಿ ಎಸ್ ಹೂಲಗೇರಿ ಬಹುತೇಕ ಸರಕಾರದ ನಾಮ ನಿರ್ದೇಶಕ ಸದಸ್ಯರ ನೇಮಕ ಮಾಡಿಸಿದ್ದು, ಈಗ ಏಕ ಏಕೀ ಮಹಿಳಾ, ಎಸ್ಟಿ ಸೇಲ್, ಓಬಿಸಿ ಸೆಲ್ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಹಮ್ಮಿಕೊಂಡಿದ್ದು, ಇದು ಯಾವುದೇ ಕಾರಣಕ್ಕೂ ಅಧಿಕೃತವಲ್ಲ, ಪಕ್ಷದ ಚೌಕಟ್ಟು ಮೀರಿದ್ದು, ಇಲ್ಲಿ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾದ ನನಗೂ ಒಂದು ಮಾತು ತಿಳಿಸಿಲ್ಲ, ಈ ಕ್ಷೇತ್ರದ ಅಭಿವೃದ್ಧಿಗೆ ಸದಾ ಬೆನ್ನೆಲುಬಾಗಿ, ಎಲ್ಲಾ ಜಾತಿ ಜನಾಂಗದವರಿಗೆ ಅಧಿಕಾರ ಹಂಚಿಕೆಯಲ್ಲಿ ಸಮಪಾಲು ಎಂಬಂತೆ, ಪಕ್ಷಕ್ಕಾಗಿ ದುಡಿದವರನ್ನ ಗುರುತಿಸಿ, ಸರ್ಕಾರದ ಎಲ್ಲಾ ನಾಮನಿರ್ದೇಶನ ಸದಸ್ಯರನ್ನ ಅಧಿಕೃತವಾಗಿ ನೇಮಕ ಮಾಡಿಸಿದ್ದು ಕೆಪಿಸಿಸಿ ರಾಜ್ಯ ಉಪಾಧ್ಯಕ್ಷರಾದ ಡಿ ಎಸ್ ಹೂಲಗೇರಿ ಅವರು, ಇದು ಮೀಸಲು ಕ್ಷೇತ್ರವಾಗಿದ್ದು ಇಲ್ಲಿ ಸುಖ ಸಮ್ಮನೆ ಪಕ್ಷದ ಅಭ್ಯರ್ಥಿಯನ್ನು ಸೋಲಿಸೋದೆ ಇವರ ನಿಜವಾದ ಬಂಡವಾಳವಾಗಿದ್ದು, ಇದನ್ನು ಇಲ್ಲಿಗೆ ನಿಲ್ಲಿಸದಿದ್ದರೆ, ಮತ್ತು ಪಕ್ಷದ ಚೌಕಟ್ಟಿನಲ್ಲಿ ನೀವು ಕೂಡ ಈ ಅವಳಿ ಜಿಲ್ಲೆಯಲ್ಲಿ ಒಬ್ಬ ವಿಧಾನ ಪರಿಷತ್ ಸದಸ್ಯ ಅನ್ನುವುದನ್ನು ಮರೆತು, ಪಕ್ಷ ಒಡೆಯುವ ಕೆಲಸಕ್ಕೆ ಕೈ ಹಾಕುತ್ತಿದ್ದು ಮುಂದಿನ ದಿನಮಾನಗಳಲ್ಲಿ, ಇಲ್ಲಿನ ಜನ ನಿಮಗೆ ತಕ್ಕ ಉತ್ತರ ನೀಡುತ್ತಾರೆ, ನಾನು ಬ್ಲಾಕ್ ಅಧ್ಯಕ್ಷನಾಗಿ 2 ವರ್ಷ ಪೂರೈಸಿದ್ದು ನಾನು ಯಾವತ್ತಾದರೂ ಪಕ್ಷದ ವಿರೋಧಿ ಚಟುವಟಿಕೆ ಮಾಡಿದರೆ ನನ್ನ ವಿರುದ್ಧ ನೀವು ಷಡ್ಯಂತರ ಮಾಡಬಹುದು, ಅದನ್ನ ಬಿಟ್ಟು ಕ್ಷೇತ್ರದ ಜನಸಾಮಾನ್ಯರಿಗೆ ದಾರಿ ತಪ್ಪಿಸುವ ಕೆಲಸ ಮಾಡಬಾರದು ಎಂದು ನೇರವಾಗಿ ವಿಧಾನ ಪರಿಷತ್ ಸದಸ್ಯರಾದ ಶರಣು ಗೌಡ ಪಾಟೀಲ್ ಬಯ್ಯಾಪುರ ವಿರುದ್ಧ ಹರಿ ಹಾಯ್ದರು, ಈ ಕ್ಷೇತ್ರದಲ್ಲಿ ಡಿ ಎಸ್ ಹೂಲಗೇರಿ ಅವರನ್ನ ಅಲ್ಪ ಮತಗಳಿಂದ ಸೋಲಿಸಿ ಪಕ್ಷದ ಚೌಕಟ್ಟನ್ನು ಮೀರಿ ಈಗ ಪದಗ್ರಹಣ ಎಂಬ ನಾಟಕ ನಡೆಸುತ್ತಿದ್ದು ಇದ್ಯಾವುದೋ ಅಧಿಕೃತವಲ್ಲವೆಂದು, ಈ ಪದಾಧಿಕಾರಿಗಳ ಸಭೆ ಅನಧಿಕೃತವಾಗಿದ್ದು, ಈ ಕ್ಷೇತ್ರದಲ್ಲಿ ಪಕ್ಷದ ಎಲ್ಲಾ ಚಟುವಟಿಕೆಗಳನ್ನು ಜನಸಾಮಾನ್ಯರಿಗೆ ತಲುಪಿಸುವುದರ, ವಿರುದ್ಧ ಷಡ್ಯಂತ್ರ ಮಾಡುತ್ತಿರುವುದು, ಯಾರು ಎಂದು ತಿಳಿಯಬೇಕಾದರೆ, ಇದರ ಬಗ್ಗೆ ಬಹಿರಂಗ ಚರ್ಚೆಗೆ ಕರೆದರೆ ನಾವು ಸಿದ್ಧ, ಕ್ಷೇತ್ರದಲ್ಲಿ ಲಾಭದಾಯಕ ಹುದ್ದೆಯಲ್ಲಿ ನಿಮ್ಮವರೇ ನಗರ ಪ್ರಾಧಿಕಾರ ಯೋಜನೆ ಅಧ್ಯಕ್ಷರಾಗುತ್ತಾರೆ ಎನ್ನುವುದಾದರೆ ನೀವು ಸದಾ ಅವರ ಜೊತೆ ನಿಲ್ಲುತ್ತೀರಿ, ಕ್ಷೇತ್ರದಲ್ಲಿ ಬೇರೆ ಬೇರೆ ಜನಾಂಗದವರನ್ನ ಮೇಲ್ಮಟ್ಟದ ಅಧಿಕಾರ ಕೊಡಿಸಿದ್ದೀರಾ? ಹಾಗೂ ಕ್ಷೇತ್ರದಲ್ಲಿ ಪಕ್ಷದ ಸೋಲಿಗೆ ನಾವು ಕಾರಣ ಅಲ್ಲ ಎನ್ನುವುದಾದರೆ, ನೀವು ಶ್ರೀ ಗುರುಗುಂಟ ಅಮರೇಶ್ವರ ದೇವಸ್ಥಾನಕ್ಕೆ ಬಂದು ಪ್ರಮಾಣಿಕರಿಸಿ, ನಾವು ನಿಮ್ಮ ಚುನಾವಣೆಯಲ್ಲಿ ಪ್ರಾಮಾಣಿಕವಾಗಿ ನಿಮ್ಮ ಗೆಲುವಿಗೆ ಸದಾ ಬೆನ್ನೆಲುಬಾಗಿ ನಿಂತಿದ್ದೇವೆ ಇಲ್ಲವೂ ಎನ್ನುವುದಕ್ಕೆ ನಾವು ಸಿದ್ಧರಿದ್ದು ಅಮರೇಶ್ವರನ ಸನ್ನಿಧಿಯಲ್ಲಿ ಪ್ರಮಾಣಕರಿಸಿ, ಎಂದು ನೇರವಾಗಿ ವಿಧಾನ ಪರಿಷತ್ ಸದಸ್ಯರಾದ ಶರಣಗೌಡ ಬಯ್ಯಾಪುರಗೆ ಪತ್ರಿಕೆ ಮುಖಾಂತರ ಬಹಿರಂಗ ಚರ್ಚೆಗೆ ಬನ್ನಿ ಎಂದು ಕರೆ ನೀಡಿದರು, ಈ ಸಂದರ್ಭದಲ್ಲಿ ಪಕ್ಷದ ಹಿರಿಯರಾದ ಮುದುಕಪ್ಪ ವಕೀಲ್, ಪುರಸಭೆ ಸದಸ್ಯರಾದ ಮಹಮ್ಮದ್ ರಫಿ, ರುದ್ರಪ್ಪ ಬ್ಯಾಗಿ, ಸೇರಿದಂತೆ ಕೆಪಿಸಿಸಿ ಜಿಲ್ಲಾ ಪದವೀಧರ ಅಧ್ಯಕ್ಷರಾದ ಸಂಜೀವಪ್ಪ ಹುನಕುಂಟಿ, ಎಸ್ಸಿ ಸೇಲ್ ಅಧ್ಯಕ್ಷರಾದ ಉಮೇಶ್ ಐಹೊಳೆರ, ಎಸ್ ಟಿ ಸೆಲ್ ಅಧ್ಯಕ್ಷರಾದ ಸಂಗಮೇಶ್ ನಾಯಕ್, ನೀಲಪ್ಪ ಪವರ್, ಖಾಜಾ ಹುಸೇನ್ ಪೋಲವಾಲೆ, ಇದ್ದರು.

## ದುಗನೂರು, ಬಿಚ್ಚಾಲಿ, ಗಿಲ್ಲೇಸೂಗೂರ ಗ್ರಾಮಗಳಲ್ಲಿ ಶಾಸಕರಾದ ಬಸನಗೌಡ ದದ್ದಲ್ ಅವರಿಂದ ನಾನಾ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 04-ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರ ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಆಗಸ್ಟ್ 3ರಂದು ರಾಯಚೂರು ಗ್ರಾಮೀಣ ಕ್ಷೇತ್ರದ ವ್ಯಾಪ್ತಿಯ ದುಗನೂರು, ಬಿಚ್ಚಾಲಿ, ಗಿಲ್ಲೇಸೂಗುರ ಗ್ರಾಮಗಳಿಗೆ ಭೇಟಿ ನೀಡಿ ನಾನಾ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದರು.

ದುಗನೂರು ಗ್ರಾಮದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಮ್ಯಾಕ್ರೋ ಯೋಜನಡಿಯಲ್ಲಿ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು.

ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿಯಲ್ಲಿ ಶ್ರೀ ಮೈಲಾರಲಿಂಗೇಶ್ವರ ಗುಡಿ, ಶ್ರೀ ಕಡಬೂರು ಗುಡಿ, ಶ್ರೀ ಗುಡಿಕಲ್ ಅಲ್ಲಿಪೀರ್ ಮಂದಿರ ನಿರ್ಮಾಣ ಕಾಮಗಾರಿಗಳಿಗೂ ಸಹ ಇದೆ ವೇಳೆ ಶಾಸಕರು ಚಾಲನೆ ನೀಡಿದರು.

ಬಿಚ್ಚಾಲಿ ಗ್ರಾಮದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಮ್ಯಾಕ್ರೋ ಅನುದಾನದಡಿಯಲ್ಲಿ ಚರ್ಚ್ ಹತ್ತಿರ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಿದರು.

ಗಿಲ್ಲೇಸೂಗುರ ಗ್ರಾಮಕ್ಕೆ ತೆರಳಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಮ್ಯಾಕ್ರೋ ಅನುದಾನದಡಿಯಲ್ಲಿ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಶಾಸಕರು ಶಂಕುಸ್ಥಾಪನೆಯನ್ನು ನೆರವೇರಿಸಿದರು.

ಜೊತೆಗೆ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿಯಲ್ಲಿ ಶ್ರೀ ಮಾರೆಮ್ಮ ಗುಡಿ, ಶ್ರೀ ಗುಡಿಕಲ್ ಅಲ್ಲಿಪೀರ್ ಮಂದಿರ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಿದರು. ಅದೇ ರೀತಿ ಕೆಕೆರ್‌ಡಿಬಿಯ ಮ್ಯಾಕ್ರೋ ಯೋಜನೆಯಡಿ ಶ್ರೀ ಮಹರ್ಷಿ ವಾಲ್ಮೀಕಿ ಬುಡಕಟ್ಟು ವಸತಿ ಶಾಲೆಯ 4 ಕೊಠಡಿಗಳ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿದರು.

ಈ ಸಂಧರ್ಭದಲ್ಲಿ ದೇವಸೂಗುರ ಬ್ಲಾಕ್ ಅಧ್ಯಕ್ಷರು, ದುಗನೂರು, ಬಿಚ್ಚಾಲಿ, ಗಿಲ್ಲೇಸೂಗುರ ಗ್ರಾಮಗಳ ಹಿರಿಯ ಮುಖಂಡರು, ಸುತ್ತಲಿನ ಗ್ರಾಮಗಳ ಹಿರಿಯ ಮುಖಂಡರು, ನಾಮನಿರ್ದೇಶನ ಸದಸ್ಯರು, ಅಧಿಕಾರಿಗಳು, ಗ್ರಾಮ ಪಂಚಾಯತ್ ಅಧ್ಯಕ್ಷರು, ಸದಸ್ಯರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

## ಅಗಷ್ಟ 8 ರಂದು ಪಂಚವಟಿ ಆಯುರ್ವೇದ ಪಂಚಕರ್ಮ ಚಿಕಿತ್ಸಾ ಕೇಂದ್ರ ಉದ್ಘಾಟನೆ ಹಾಗೂ ಉಚಿತ ಆರೋಗ್ಯ ತಪಾಸಣಾ ಶಿಬಿರ- ಪವಿತ್ರ ವಿರಕ್ತಮಠ




ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು.ಅ.4.-ಪಟ್ಟಣದ ಬೆಂಗಳೂರು ಬೈಪಾಸ್ ರಸ್ತೆಯ ಮಾರ್ಗದ ಮಿನಿ ವಿಧಾನಸೌಧ ಮುಂಭಾಗದಲ್ಲಿ ಇದೇ ತಿಂಗಳು ಆಗಸ್ಟ್ 8 ರಂದು ನೂತನವಾಗಿ ಪಂಚವಟಿ ಆಯುರ್ವೇದ ಪಂಚಕರ್ಮ ಚಿಕಿತ್ಸಾ ಕೇಂದ್ರವು ಪ್ರಾರಂಭಗೊಳ್ಳಲಿದ್ದು ಮತ್ತು ಅಂದು ಉಚಿತ ಆರೋಗ್ಯ ಶಿಬಿರ ಏರ್ಪಡಿಸಲಾಗಿದೆ ಎಂದು ಪವಿತ್ರ ವಿರಕ್ತಮಠ ಪಂಚಕರ್ಮ ತಿಳಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನು ಉದ್ದೇಶಿ ಮಾತನಾಡಿದ ಅವರು ನಮ್ಮ ಸುತ್ತಮುತ್ತಲಿನ ಒಂದಷ್ಟು ಜಿಲ್ಲೆಗಳಲ್ಲಿಯೇ ವಿಶೇಷತೆಯನ್ನ ಹೊಂದಿರುವ ಪಂಚಕರ್ಮ ಚಿಕಿತ್ಸಾ ಕೇಂದ್ರವಾಗಿದ್ದು ಆಯುರ್ವೇದ ಪಂಚಕರ್ಮ ಪದ್ಧತಿಯು. ತನ್ನದೇ ಆದ ವೈಶಿಷ್ಟತೆಯನ್ನು ಹೊಂದಿದ್ದು ಅಸಾಧ್ಯ ರೋಗಗಳನ್ನು ಪಂಚಕರ್ಮ ವಿಶೇಷಪದ್ಧತಿಯಲ್ಲಿ ಗುಣಪಡಿಸುವ ಶಕ್ತಿಯನ್ನು ಹೊಂದಿದೆ.

ಅದನ್ನು ನಮ್ಮ ಭಾಗದ ಎಲ್ಲಾ ನಾಗರಿಕರು ಅಳವಡಿಸಿಕೊಂಡು ಆಹಾರಪದ್ಧತಿಯನ್ನು ಅನುಸರಿಸಿದಲ್ಲಿ ಸಂಪೂರ್ಣ ಆರೋಗ್ಯಕರ ಜೀವನವನ್ನು ನಡೆಸಬಹುದು ಶುದ್ಧವಾದ ಪರಿಪೂರ್ಣ ಆಯುರ್ವೇದ ಸೇವೆಯನ್ನು ನೀಡಲು ಲಿಂಗಸುಗೂರು ಪಂಚವಟಿ ಆಯುರ್ವೇದ ವೈದ್ಯರ ತಂಡವು ಶ್ರಮಿಸುತ್ತದೆ. ಇದರ ಉದ್ಘಾಟನಾ ಕಾರ್ಯಕ್ರಮವನ್ನು ನಮ್ಮ ಭಾಗದ ಪೂಜ್ಯರು ,ಹಾಗೂ ಗುರುಹಿರಿಯರು ವಿವಿಧ ಪಕ್ಷಗಳ ರಾಜಕೀಯನಾಯಕರುಅಧಿಕಾರಿಗಳು ಭಾಗವಹಿಸಿ ,ಉದ್ಘಾಟಿಸಲಿದ್ದಾರೆ. ಹಾಗಾಗಿ ಇದರ ಅಂಗವಾಗಿ, ಹಲವಾರು ರೋಗಗಳಿಗೆ ಉಚಿತ ಆರೋಗ್ಯ ತಪಾಸಣೆ ಮತ್ತು ಔಷಧಿ ವಿತರಣೆ ಶಿಬಿರ ಹಾಗೂ ಪತ್ರಿಕಾ ರಂಗದಲ್ಲಿ ವಿಶೇಷ ಸಾಧನೆ ಮಾಡಿ ಪ್ರಶಸ್ತಿ ಪಡೆದ ಪತ್ರಕರ್ತರಿಗೆ ಗೌರವ ಸಮರ್ಪಣೆ ಸಮಾರಂಭವನ್ನು ಆಯೋಜಿಸಲಾಗಿದೆ.

ಈ ಶಿಬಿರದಲ್ಲಿ ಖ್ಯಾತ ಆಯುರ್ವೇದ ವೈದ್ಯರು ತಪಾಸಣೆ ನಡೆಸಿ, ಅಗತ್ಯ ಚಿಕಿತ್ಸೆ ಹಾಗೂ ಔಷಧಿ ವಿತರಣೆ ಮಾಡಲಿದ್ದಾರೆ .

ಆಯುರ್ವೇದ ಚಿಕಿತ್ಸೆ, ಹಾಗೂ ವಿಶೇಷವಾಗಿ ಪಂಚಕರ್ಮ ಚಿಕಿತ್ಸೆಯ ಮಹತ್ವವನ್ನು ಸಾರ್ವಜನಿಕರಿಗೆ ಪರಿಚಯಿಸುವ ಉದ್ದೇಶವನ್ನು ಹೊಂದಿದೆ ಸುತ್ತಮುತ್ತಲಿನ ನಾಗರಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಅವರು ಹೇಳಿದರು.


ಈ ಸಂಧರ್ಭದಲ್ಲಿ ಡಾ ಪವಿತ್ರ ವಿರಕ್ತಮಠ MD ( Ayu ) ಪಂಚಕರ್ಮ, ಮುತ್ಯುಂಜಯ ಹಿರೇಮಠ, ಜಗನ್ನಾಥ ಚಿತ್ತಾಪುರ, ವೈದ್ಯ ಕುಮಾರಸ್ವಾಮಿ, ಪ್ರವೀಣ ಕುಮಾರ, ಚಂದ್ರಶೇಖರ ಇದ್ದರು.

## ಆಲಮೇಲ ತಹಶೀಲ್ದಾರ್ ಕಛೇರಿಯಲ್ಲಿ ವ್ಯಸನ ಮುಕ್ತ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಆಲಮೇಲ:ಅ.4:ರಾಜ್ಯ ಮದ್ಯಪಾನ ಸಂಯಮ ಮಂಡಳಿ ಡಾ. ಮಹಾಂತ ಶಿವಯೋಗಿಗಳ ಜನ್ಮ ದಿನ ನಿಮಿತ್ತ. ತಹಸಿಲ್ದಾರ ಕಛೇರಿಯಲ್ಲಿ ವ್ಯಸನ ಮುಕ್ತ ದಿನ ಕಾರ್ಯಕ್ರಮ ಆ.1ರಂದು ದಿನಾಚರಣೆ ಮಾಡಲಾಯಿತು. ಬೆಳಗ್ಗೆ 11 ಗಂಟೆ ಕೆ ವಿಜಯಕುಮಾರ ಡಾ. ಮಹಾಂತ ಶಿವಯೋಗಿಗಳ ದಿನಾಚರಣೆ ನೆರವೇರಿಸಿ ಮಾತನಾಡಿದರು ಗುಟ್ಕಾ ಮದ್ಯಪಾನ ಇನ್ನಿತರ ದುಷ್ಟಚಟಗಳಿಗೆ ಅಂಟಿಕೊಳ್ಳಬೇಡಿ ಎನ್ನುವದೇ ಶಿವಯೋಗಿಗಳ ಆಶಯವಾಗಿತ್ತು ಎಂದು ಹೇಳಿದರು. ಇದೇ ಸಂದರ್ಭದಲ್ಲಿ ನಂದೀಶ್ ದಶವಂತ ಸಂತೋಷ ಆಲಮೇಲ ಮಡಿವಾಳ ಬಿರಾದರ ಎಂ ಎ ಅವರಾದಿ ರಾಜು ಮೇತ್ರಿ. ರಮ್ಯಾಶ್ರೀ ಕುಚಬಾಳ ವಿಶ್ವ ಪೂಜಾರಿ ಸಿಬ್ಬಂದಿಗಳು ಉಪಸ್ಥಿತರಿದ್ದರು ಶಿವಕುಮಾರ್ ಮೇಲಿನಮನಿ ಪ್ರತಿಜ್ಞೆ ವಿಧಿ ಬೋಧನೆ ಮಾಡಿದರು.

## ಸೈದಾಪುರ:ರಸಗೊಬ್ಬರಗಳ ದಾಸ್ತಾನು ಪರಿಶೀಲನೆ



ಸೈದಾಪುರ:ಅ.4:ಪಟ್ಟಣದ ವೆಂಕಟೇಶ್ವರ ಟ್ರೇಡರ್ಸ್, ಬನದೇಶ್ವರ ಕೃಷಿ ಕೇಂದ್ರ, ಶ್ರೀಪಾಲಾದಿ ಫರ್ಟಿಲೈಜರ್, ಮಲ್ಲಿಕಾರ್ಜುನ ಫರ್ಟಿಲೈಜರ್, ಎಸ್.ಬಿ.ಪಾಟೀಲ್ ಅಗ್ರೋ ಏಜೆನ್ಸಿ ಮುಂತಾದ ಗೋದಾಮುಗಳಿಗೆ ರಾತ್ರಿ ವೇಳೆ ಕೃಷಿ ಅಧಿಕಾರಿ ಮಲ್ಲಿಕಾರ್ಜುನ ವಾರದ, ಕಂದಾಯ ನಿರೀಕ್ಷಕ ದಸ್ತಗೀರ್ ಹಾಗೂ ಪೊಲೀಸ್ ಆರಕ್ಷಕ ಉಪನಿರೀಕ್ಷಕರಾದ ಭೀಮರಾಯ ಅವರು ದಿಡೀರ ಭೇಟಿ ನೀಡಿ ರಸಗೊಬ್ಬರಗಳ ದಾಸ್ತಾನು ಕುರಿತು ಪರಿಶೀಲನೆಯನ್ನು ಮಾಡಿದರು. ಯಾವುದೇ ಹೆಚ್ಚುವರಿ ದಾಸ್ತಾನು ಕಂಡು ಬಂದಿಲ್ಲ ಎಂದು ತಿಳಿಸಿದ್ದಾರೆ.

# ಬಡ ವಿದ್ಯಾರ್ಥಿಗಳಿಗೆ ಶಿಕ್ಷಕಿ ಧನ ಸಹಾಯ!



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.4–ನಗರದ ವಿದ್ಯಾಗಿರಿ ಏರಿಯಾದಲ್ಲಿರುವ ಸರಕಾರಿ ಕಿರಿಯ ಪ್ರಾಥಮಿಕ ಶಾಲೆ(ನಂ.14)ಯ ಸಹ ಶಿಕ್ಷಕಿ ಶೈಲಜಾ ಬೆಳ್ಳೂರ ಶಾಲೆಯ ಐವರು ಬಡ ವಿದ್ಯಾರ್ಥಿಗಳಿಗೆ ಧನ ಸಹಾಯ ಮಾಡಿದ್ದು, ಅವರ ಹೆಸರಿನಲ್ಲಿ ತಲಾ 5 ಸಾವಿರ ರೂ.ಗಳನ್ನು ಠೇವಣಿ ಇರಿಸಿದ್ದಾರೆ.

ಕಳೆದ 31 ವರ್ಷ ಇದೇ ಶಾಲೆಯಲ್ಲಿ ಸೇವೆ ಸಲ್ಲಿಸಿ ಜುಲೈ 31 ರಂದು ಸೇವಾ ನಿವೃತ್ತಿ ಹೊಂದಿದ ಶೈಲಜಾ ಬೆಳ್ಳೂರ ತಮ್ಮ ಬೀಳ್ಕೊಡುಗೆ ಸಮಾರಂಭದಲ್ಲಿ ಈ ವಿಷಯ ಪ್ರಕಟಿಸಿ, 5 ನೇ ತರಗತಿಯ ಸುರೇಖಾ ಚೌಡಿ, ನೇಮಚಂದ ಕಶಪ ಹಾಗೂ ಗಣೇಶ ಕಶಪ, 4 ನೇ ತರಗತಿಯ ಸ್ನೇಹಾ ಮಂಕಣಿ ಮತ್ತು 3 ನೇ ತರಗತಿಯ ಸರ್ವೇಶ ಮಿರ್ಜಿ ಅವರ ಹೆಸರಿನಲ್ಲಿ ತಲಾ 5 ಸಾವಿರ ರೂ.ಗಳನ್ನು ನಗರದ ಪ್ರಧಾನ ಅಂಚೆ ಕಚೇರಿಯಲ್ಲಿ 5 ವರ್ಷಗಳ ಠೇವಣಿ ಇರಿಸಿರುವ ಪಾಸ್ ಬುಕ್ ವಿತರಿಸಿದರು.

ಬಡ ಮಕ್ಕಳ ವಿದ್ಯಾಭ್ಯಾಸಕ್ಕೆ ನೆರವಾಗಲಿ ಎಂಬ ಉದ್ದೇಶದಿಂದ ಅವರ ಹೆಸರಿನಲ್ಲಿ ಠೇವಣಿ ಮಾಡಿರುವುದಾಗಿ ಶಿಕ್ಷಕಿ ಶೈಲಜಾ ಬೆಳ್ಳೂರ ತಿಳಿಸಿದರು. ಶಿಕ್ಷಕಿಯ ಈ ಕಾರ್ಯಕ್ಕೆ ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಸ್.ಬಡದಾನಿ, ಕಚೇರಿಯ ಪ್ರಥಮ ದರ್ಜೆ ಸಹಾಯಕಿ ಸುವರ್ಣಾ ಕೊಳಚಿ, ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರು, ಶಿಕ್ಷಣ ಸಂಯೋಜಕ ಪಿ.ಬಿ.ಪಾಟೀಲ, ಸಿಆರ್‌ಪಿ ಎಚ್.ಎಸ್.ಗೂಳಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

# ಉತ್ತಮ ಸಮಾಜ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದು:ಮಿರ್ಜಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.4– ಉತ್ತಮ ಸಮಾಜ ನಿರ್ಮಾಣದಲ್ಲಿ ಶಿಕ್ಷಕನ ಪಾತ್ರ ಅತ್ಯಂತ ಮಹತ್ವವಾಗಿದ್ದು, ಶಿಕ್ಷಕ ತನ್ನ ಜವಾಬ್ದಾರಿ ಅರಿತು ಕೆಲಸ ಮಾಡಿ ಮಕ್ಕಳ ಭವಿಷ್ಯ ರೂಪಿಸಿದರೆ ಉತ್ತಮ ಸಮಾಜ ನಿರ್ಮಾಣವಾಗುತ್ತದೆ ಎಂದು ಜಿಲ್ಲಾ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಚ್.ಜಿ.ಮಿರ್ಜಿ ಹೇಳಿದರು.

ಪ್ರಾಥಮಿಕ ಶಾಲಾ ಶಿಕ್ಷಕರಾಗಿ ಸೇವೆ ಸಲ್ಲಿಸಿ ನಿವೃತ್ತಿಯಾದ ವೈ.ಎಚ್. ವಗ್ಯಾನವರ ಅವರಿಗೆ ಕಲಾದಗಿ ಸರ್ಕಾರಿ ಕನ್ನಡ ಗಂಡು ಮಕ್ಕಳ ಮಾದರಿ ಹಿರಿಯ ಪ್ರಾಥಮಿಕ ಶಾಲಾ ಶಿಕ್ಷಕರ ಬಳಗದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

36 ವರ್ಷಗಳ ಕಾಲ ಶಿಕ್ಷಕ ವೃತ್ತಿಯಲ್ಲಿ ಸೇವಿ ಸಲ್ಲಿಸಿ ನಿವೃತ್ತಿಯಾಗುತ್ತಿರುವದು ಸುಲಭದ ಮಾತಲ್ಲ. ವಗ್ಯಾನವರ ಸೇವೆ, ಸಾಧನೆ ಹೆಚ್ಚಿದೆ. ಮುಂದೆಯೂ ಮಕ್ಕಳಿಗೆ ಅವರು ಮಾರ್ಗದರ್ಶನ ಮಾಡುವುದನ್ನು ಮುಂದುವರಿಸಬೇಕು. ನಿವೃತ್ತಿ ಜೀವನವನ್ನು ಉತ್ತಮವಾಗಿ ಕಳೆಯಬೇಕು ಎಂದು ಮಿರ್ಜಿ ಹೇಳಿದರು.

ನಿವೃತ್ತ ಸಹಾಯಕ ಸಮನ್ವಯ ಅಧಿಕಾರಿ ಗೋಪಾಲ ಮುಂಡೇವಾಡಿ ಮಾತನಾಡಿ, ಉತ್ತಮ ಸೇವೆ ಸಲ್ಲಿಸುವ ಮೂಲಕ ವಗ್ಯಾನವರ ಮಕ್ಕಳು, ಸಮುದಾಯದ ಪ್ರೀತಿ, ಅಭಿಮಾನಕ್ಕೆ ಪಾತ್ರರಾಗಿದ್ದಾರೆ. ಅಂತೆಯೇ ಇಷ್ಟು ದೊಡ್ಡ ಮಟ್ಟದಲ್ಲಿ ಅವರಿಗೆ ಬೀಳ್ಕೊಡುಗೆ ಮಾಡಲಾಗುತ್ತಿದೆ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಶಿಕ್ಷಕ ವೈ.ಎಚ್.ವಗ್ಯಾನವರ, ಸ್ಥಳೀಯ ಸರಕಾರಿ ಕನ್ನಡ ಗಂಡು ಮಕ್ಕಳ ಮಾದರಿ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಸರ್ಕಾರಿ ಬಾಲಕಿಯರ ಹಿರಿಯ ಪ್ರಾಥಮಿಕ ಶಾಲೆಗೆ 10 ಸಾವಿರ ರೂಪಾಯಿ ದೇಣಿಗೆ ನೀಡುವುದಾಗಿ ಭರವಸೆ ನೀಡಿದರು.

ಸಮೂಹ ಸಂಪನ್ಮೂಲ ವ್ಯಕ್ತಿ ಮಂಜುನಾಥ ಹೆಡಗಿ, ಎಸ್ಡಿಎಂಸಿ ಅಧ್ಯಕ್ಷ ಸುಭಾಷ ದುರ್ವೆ, ಅಶೋಕ ಉಮದಿ, ಸಂಗಣ್ಣ ಛಬ್ಬಿ, ಬಸಪ್ಪ ಪಾಣಿಶೆಟ್ಟಿ, ದುಂಡಪ್ಪ ನಾಯ್ಕರ, ಕಟಗೇರಿ ಟೀಚರ್, ಶಾಲಾ ಮುಖ್ಯ ಶಿಕ್ಷಕ ಸಿ.ಎಲ್.ಹೂಗಾರ, ಶಿಕ್ಷಕಿಯರಾದ ಎಮ್.ಬಿ.ಪ್ಯಾಟಿಶೆಟ್ಟರ, ಎಸ್.ವಿ.ಕೋನಪ್ಪನವರ ವೇದಿಕೆಯಲ್ಲಿದ್ದರು.

ಎ.ಬಿ.ಗುರುವಿನ ಸ್ವಾಗತಿಸಿದರು. ಎಸ್.ಎಸ್.ಬಿರಾದಾರ ನಿರೂಪಿಸಿದರು. ಎನ್.ಬಿ.ಮೈಸೂರ ವಂದಿಸಿದರು.

# ಪತ್ನಿಗೆ ಹಿಂಸೆ ನೀಡಿ ಸಾಯಿಸಿದ್ದ ಪತಿಗೆ 10 ವರ್ಷ ಶಿಕ್ಷೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.4–ಪತ್ನಿಗೆ ಮಾನಸಿಕ ಹಾಗೂ ದೈಹಿಕ ಹಿಂಸೆ ನೀಡಿ ಅವಳ ಸಾವಿಗೆ ಕಾರಣನಾಗಿದ್ದ ಆಕೆಯ ಪತಿಗೆ ನ್ಯಾಯಾಲಯ 10 ವರ್ಷಗಳ ಶಿಕ್ಷೆ ವಿಧಿಸಿ ತೀರ್ಪು ನೀಡಿದೆ.

ಬಾಗಲಕೋಟೆ ನವನಗರದ ಸೆಕ್ಟರ್ 3 ರ ನಿವಾಸಿ ರೂಪಾ ಊರ್ಫ್ ಕಾವ್ಯಾ ಮಂಜುನಾಥ ಹಡಪದ(27)ಇವಳಿಗೆ ಗಂಡ ಹಾಗೂ ಆತನ ತಂದೆ – ತಾಯಿ ಸೇರಿ ಐವರು ದೈಹಿಕ ಮತ್ತು ಮಾನಸಿಕ ಹಿಂಸೆ ನೀಡಿದ್ದು, ಕಿರುಕುಳ ತಾಳದೇ ಕಾವ್ಯಾ 2018 ರ ಮಾರ್ಚ್ 27 ರಂದು ಮನೆಯಲ್ಲಿ ನೇಣು ಬಿಗಿದುಕೊಂಡು ಸಾವನ್ನಪ್ಪಿದ್ದಳು.

ಈ ಕುರಿತು ನವನಗರ ಪೊಲೀಸ್ ಠಾಣೆಯಲ್ಲಿ ಗಂಡ ಸೇರಿ 5 ಜನರ ವಿರುದ್ಧ ಪ್ರಕರಣ ದಾಖಲಾಗಿ, ಅಂದಿನ ಪಿ.ಎಸ್.ಐ ಪಿ.ಎಸ್.ಪೂಜೇರಿ ತನಿಖೆ ಕೈಗೊಂಡು ಆರೋಪಿಗಳ ವಿರುದ್ಧ ನ್ಯಾಯಾಲಯಕ್ಕೆ ಚಾರ್ಜಶೀಟ್ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ಬಾಗಲಕೋಟೆಯ 5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಮೇಶ ಏಕಬೋಟೆ ಎಲ್ಲ ಸಾಕ್ಷಿ, ಪುರಾವೆಗಳನ್ನು ಅವಲೋಕಿಸಿ ಮೃತ ಕಾವ್ಯಳ ಪತಿ ಮಂಜುನಾಥ ನಾಗಪ್ಪ ಹಡಪದ ಈತನಿಗೆ ಕಲಂ 498 ರಡಿ 3 ವರ್ಷ ಶಿಕ್ಷೆ, 15 ಸಾವಿರ ರೂ. ದಂಡ ಹಾಗೂ ಕಲಂ 306 ರಡಿ 10 ವರ್ಷ ಶಿಕ್ಷೆ ಮತ್ತು 50 ಸಾವಿರ ರೂ.ದಂಡ ವಿಧಿಸಿ ತೀರ್ಪು ನೀಡಿದ್ದಾರೆ. ಸರ್ಕಾರದ ಪರವಾಗಿ ಅಭಿಯೋಜಕ ಎಸ್.ಎಂ.ಹಂಜಿ ವಾದ ಮಂಡಿಸಿದ್ದರು.

# ಶೀಲ ಶಂಕಿಸಿ ಪತ್ನಿಯ ಕೊಲೆಗೈದ ಆರೋಪಿ ಪತಿಗೆ ಜೀವಾವಧಿ ಶಿಕ್ಷೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.4–ಶೀಲ ಶಂಕಿಸಿ ಗರ್ಭಿಣಿ ಪತ್ನಿಯನ್ನು ಕೊಲೆ ಮಾಡಿದ್ದ ಆಕೆಯ ಪತಿಗೆ ನ್ಯಾಯಾಲಯ ಜೀವಾವಧಿ ಶಿಕ್ಷೆ ವಿಧಿಸಿದೆ.

ಜಿಲ್ಲೆಯ ಬಾದಾಮಿ ಪಟ್ಟಣದ ರಂಗನಾಥ ನಗರದ ನಿವಾಸಿ ಮಂಜುಳಾಳನ್ನು ಮಹಾರಾಷ್ಟ್ರ ರಾಜ್ಯದ ಸೊಲ್ಲಾಪುರದ ಸಂದೀಪ ಅರ್ಜುನ ಬಂದಪಟ್ಟೆ ಮದುವೆಯಾಗಿದ್ದ. ಇವರಿಗೆ ಇಬ್ಬರು ಮಕ್ಕಳೂ ಇದ್ದಾರೆ. ಮಂಜುಳಾ ಆಪರೇಶನ್ ಮಾಡಿಸಿಕೊಂಡು ತವರು ಮನೆಗೆ ಬಂದಿದ್ದು, ನಂತರ ಆಕೆಯ ಪತಿ ಸಂದೀಪ ಕೂಡ ಬಾದಾಮಿಗೆ ಬಂದು ಆಕೆಯ ಜೊತೆಗೆ ನೆಲೆಸಿದ್ದ.

ಕೆಲ ದಿನಗಳ ನಂತರ ಆಕೆಯ ಶೀಲದ ಬಗ್ಗೆ ಶಂಕೆ ತಾಳಿ ನಿತ್ಯ ಜಗಳ ಮಾಡುತ್ತಿದ್ದ. 2020 ರ ಜುಲೈ 24 ರಂದು ಆಕೆಯನ್ನು ಕೊಲೆ ಮಾಡುವ ಉದ್ದೇಶದಿಂದ ಚಾಕು ಖರೀದಿಸಿ ತಂದು ಮನೆಯ ಮಹಡಿಯ ಬೆಡ್ ರೂಮಿಗೆ ಪತ್ನಿಯನ್ನು ಕರೆಸಿಕೊಂಡು 7 ತಿಂಗಳ ಗರ್ಭಿಣಿಯಾಗಿದ್ದ ಅವಳ ಕುತ್ತಿಗೆಗೆ ಇರಿದು ಸಾಯಿಸಿದ್ದನು.

ಈ ಕುರಿತು ಬಾದಾಮಿ ಠಾಣೆಯ ಅಂದಿನ ಸಿಪಿಐ ರಮೇಶ ಹನಾಪೂರ ತನಿಖೆ ನಡೆಸಿ ನ್ಯಾಯಾಲಯಕ್ಕೆ ವರದಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ಬಾಗಲಕೋಟೆಯ 5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ರಮೇಶ ಏಕಬೋಟೆ ಅಭಿಯೋಗದ ಪರ ಹಾಜರು ಪಡಿಸಿದ ಎಲ್ಲ ಸಾಕ್ಷಿ, ಪುರಾವೆಗಳನ್ನು ಅವಲೋಕಿಸಿ ಆರೋಪಿ ಸಂದೀಪನಿಗೆ ಕಲಂ 302 ರಡಿ ಜೀವಾವಧಿ ಶಿಕ್ಷೆ ಹಾಗೂ 1ಲಕ್ಷ ರೂ.ದಂಡ ಮತ್ತು 316 ರಡಿ 10 ವರ್ಷ ಶಿಕ್ಷೆ, 50 ಸಾವಿರ ರೂ. ದಂಡ ವಿಧಿಸಿ ತೀರ್ಪು ನೀಡಿದ್ದಾರೆ. ಸರ್ಕಾರದ ಪರವಾಗಿ ಅಭಿಯೋಜಕ ಎಸ್.ಎಂ.ಹಂಜಿ ವಾದ ಮಂಡಿಸಿದ್ದರು.

# ಕೋಟಾ ಶೈಲಿಯ ತರಬೇತಿಗೆ ಚಾಲನೆ




ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟೆ:ಅ.3: ಭಾರತದ ಪ್ರತಿಷ್ಠಿತ ವಿದ್ಯಾ ಕೇಂದ್ರ ಕೋಟಾ ನಗರ, ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿಯಲ್ಲಿ ದೇಶದ ನೇತೃತ್ವ ವಹಿಸಿಕೊಂಡಿದೆ. ಇದೀಗ ಇದೇ ಶೈಲಿಯ ಐಐಟಿ ಫೌಂಡೇಶನ್ ತರಬೇತಿಯು ತಾಳಿಕೋಟೆಯ ಮಿಣಜಗಿ ಕ್ರಾಸ್‌ನಲ್ಲಿರುವ ಶ್ರೀ ಘನಮಠೇಶ್ವರ ಇಂಟರನ್ಯಾಷನಲ್ ಪಬ್ಲಿಕ ಶಾಲೆಯಲ್ಲಿ(ಸಿಬಿಎಸ್‌ಇ)ವಿದ್ಯಾರ್ಥಿಗಳಿಗೆ ದೊರೆಯುತ್ತಿದೆ ಎಂದು ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ.ಎಸ್.ಎಂ.ಸಜ್ಜನ ಅವರು ಹೇಳಿದರು.

ಶನಿವಾರರಂದು ಶ್ರೀ ಘನಮಠೇಶ್ವರ ಶಿಕ್ಷಣ ಸಂಸ್ಥೆಯಲ್ಲಿ ಸ್ಪರ್ಧಾತ್ಮಕ ಪರಿಕ್ಷೆಗಳ ತಯಾರಿಯ ತರಬೇತಿಗೆ ಚಾಲನೆ ನೀಡಿ ಮಾತನಾಡುತ್ತಿದ್ದ ಅವರು ಈ ಭಾಗದಲ್ಲಿ ಸಾಕಷ್ಟು ಶಿಕ್ಷಣ ಸಂಸ್ಥೆಗಳು ಹುಟ್ಟಿಕೊಮಡಿದ್ದರೂ ಸಹ ಸ್ಪರ್ಧಾತ್ಮಕ ಪರಿಕ್ಷೆ ಎದುರಿಸುವ ಕೌಶಲ್ಯ ತುಂಬುವ ತರಬೇತಿ ಶಿಬಿರಗಳನ್ನು ಹಮ್ಮಿಕೊಂಡಿಲ್ಲಾ ಈ ಭಾಗದ ಸಿಬಿಎಸ್‌ಇ ವಿದ್ಯಾರ್ಥಿಗಳಿಗಾಗಿ ಶ್ರೀ ಘನಮಠೇಶ್ವರ ಶಿಕ್ಷಣ ಸಂಸ್ಥೆಯಲ್ಲಿ ಪ್ರಾರಂಬಿಸಿದ್ದೇವೆ ಇದು ವಿದ್ಯಾರ್ಥಿಗಳ ಜೀವನಕ್ಕೆ ಅತ್ಯಮುಲ್ಯವಾಗಿದೆ ಎಂಬುದು ಹೆಮ್ಮೆಪಡುವ ಸಂಗತಿಯಾಗಿದೆ ಎಂದ ಅವರು 7ನೇ, 8ನೇ ಹಾಗೂ 9ನೇ ತರಗತಿಯ ವಿದ್ಯಾರ್ಥಿಗಳು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕೆಂದ ಅವರು ರಾಜಸ್ಥಾನದ ಕೋಟಾದಿಂದ ಆಯ್ದ ಅತ್ಯುನ್ನತ ಮಟ್ಟದ ಪುಸ್ತಕಗಳು ಹಾಗೂ ಅಧ್ಯಯನ ಸಾಮಗ್ರಿಗಳನ್ನು ತರಿಸಿ, ಸ್ಥಳೀಯ ವಿದ್ಯಾರ್ಥಿಗಳಿಗೆ ಅತಿದೊಡ್ಡ ಸ್ಪರ್ಧಾತ್ಮಕ ಪಠ್ಯಾನುಭವವನ್ನು ನೀಡುತ್ತಿದ್ದೇವೆ ಈ ಕೋರ್ಸ್‌ನಲ್ಲಿ ವಿದ್ಯಾರ್ಥಿಗಳಿಗೆ ಐಐಟಿ, ಜೆಇಇ, ನಿಟ್, ಎನ್‌ಟಿಎಸ್‌ಇ, ಮತ್ತು ಒಲಂಪಿಯಾಡ್ ಪರೀಕ್ಷೆಗಳ ಪೂರ್ವ ತಯಾರಿ ಹಾಗೂ ವಿಜ್ಞಾನ ಮತ್ತು ಗಣಿತ ವಿಷಯಗಳ ಆಳವಾದ ತರಬೇತಿಯನ್ನು ಆಂದ್ರ ಮತ್ತು ಕೇರಳ ಅನುಭವಿ ಶಿಕ್ಷಕರಿಂದ ಬೋಧಿಸಲಾಗುತ್ತಿದೆ ಎಂದರು.

ಈ ಸಮಯದಲ್ಲಿ ಸಂಸ್ಥೆಯ ಕಾರ್ಯದರ್ಶಿ ವಿವೇಕಾನಂದ ಸಜ್ಜನ, ಮುಖ್ಯಗುರುಗಳಾದ ಬಿ.ಜಿ.ಸಜ್ಜನ, ಸಿಬಿಎಸ್‌ಇ ಪ್ರಾಚಾರ್ಯರಾದ ಜಯಚಂದ್ರ, ಮುಖ್ಯಗುರುಮಾತೆಯರಾದ ಶ್ರೀಮತಿ ಆರ್ ಎಸ್ ದೇಸಾಯಿ, ವಿಜ್ಞಾನ ಹಾಗೂ ಗಣಿತ ಉಪನ್ಯಾಸಕ ವರ್ಗ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಜಮಖಂಡಿ ನಗರಸಭೆ ಅಧ್ಯಕ್ಷರಾಗಿ ಈಶ್ವರ ವಾಳೆನ್ನವರ ಅವಿರೋಧ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.4–ಜಿಲ್ಲೆಯ ಜಮಖಂಡಿ ನಗರಸಭೆಯ ನೂತನ ಅಧ್ಯಕ್ಷರಾಗಿ ಈಶ್ವರ ವಾಳೆನ್ನವರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ್ ತಿಳಿಸಿದರು.

ಸಾಮಾನ್ಯ ವರ್ಗಕ್ಕೆ ಮೀಸಲಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ವಾರ್ಡ್ 10ರ ಹಿರಿಯ ಸದಸ್ಯ ಈಶ್ವರ ವಾಳೆನ್ನವರ ಒಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ಅವಿರೋಧವಾಗಿ ಆಯ್ಕೆಯಾದರು. ನಗರಸಭೆ ಪೌರಾಯುಕ್ತ ಜ್ಯೋತಿ ಗಿರೀಶ್.ಎಸ್ ನೂತನ ಅಧ್ಯಕ್ಷರನ್ನು ಹೂ ಅಭಿನಂದಿಸಿದರು.

ಬೆಂಬಲಿಗರು ನಗರಸಭೆ ಆವರಣದಲ್ಲಿ ಭಂಡಾರ ಹಾಗೂ ಪಟಾಕಿ ಸಿಡಿಸಿ ಮತ್ತು ಡಿಜೆ ಸೌಂಡ್ ಮೂಲಕ ನಗರದ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ನಡೆಸಿ ಸಂಭ್ರಮಿಸಿದರು.

# ಸರ್ವಜ್ಞ ಶಿಕ್ಷಣ ಸಂಸ್ಥೆಯಲ್ಲಿ ಡಾ. ಮಹಾಂತಶ್ರೀಗಳ ಜನ್ಮದಿನ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟೆ:ಅ.4: ಪಟ್ಟಣದ ಸರ್ವಜ್ಞ ವಿದ್ಯಾಪೀಠ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಡಾ|| ಮಹಾಂತ ಶಿವಯೋಗಿರವರ ಜನ್ಮದಿನೋತ್ಸವವನ್ನು ವ್ಯಸನ ಮುಕ್ತ ದಿನಾಚರಣೆಯನ್ನಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಸಂಸ್ಥಾಪಕ ಅಧ್ಯಕ್ಷರಾದ ಸಿದ್ದನಗೌಡ ಮಂಗಳೂರ. ಮುಖ್ಯಗುರುಗಳಾದ ಸಂತೋಷ ಪವಾರ, ರಾಜು ಜವಳಗೇರಿ, ದೈಹಿಕ ಶಿಕ್ಷಕರಾದ ಬಸವರಾಜ ಚಳಗಿ, ಶಾಂತಗೌಡ ಬಿರಾದಾರ, ಭೀಮನಗೌಡ ಸಾಸನೂರ, ರಸೂಲಸಾ ತುರ್ಕನಗೇರಿ, ರವಿಕುಮಾರ ಮಲ್ಲಾಬಾದಿ, ಬಸವರಾಜ ಸವದತ್ತಿ, ಸಿದ್ದನಗೌಡ ಮೂದನೂರು, ಸಂಗಮೇಶ ಬಿರಾದಾರ, ಶರಣಗೌಡ ಕಾಚಾಪುರ, ಸಂಜೀವಕುಮಾರ ರಾಠೋಡ. ರೂಪಾ ಪಾಟೀಲ, ಶಿವಲೀಲಾ ಚುಂಚನೂರ, ದೇವಿಂದ್ರ ಗುಳೆದ, ಅನಿತಾ ಚೌದ್ರಿ, ಸಂಗೀತ ಬಿರಾದಾರ, ಶಿವಕುಮಾರ ಕುಂಬಾರ, ಮೇಘ ಪಾಟೀಲ, ರಾಜಬಿ ಬಿದರಿ, ತನುಶ್ರೀ ಮಹೇಂದ್ರಕರ್, ಮಾರುತಿ ಕಾರ್ಬಾರಿ, ದೇವರಾಜ್ ದೇಸಾಯಿ, ನಾಗರತ್ನ ಮೈಲೇಶ್ವರ, ಬೋರಮ್ಮ ಜ್ಯೋತಿ ಪೊಲೀಸಪಾಟೀಲ, ಶೃತಿ ಚೌದರಿ, ರವಿಕುಮಾರ ಅನದಿನ್ನಿ, ಹೀನಾಕೌಸರ ಸನದಿ, ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಬಸವರಾಜ ಸಂಶಿಗೆ ನಿಗಮ ಮಂಡಳಿ ಸ್ಥಾನ ನೀಡಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.4–ಕಾಂಗ್ರೆಸ್ ಪಕ್ಷದ ಸಂಘಟನೆ, ಬಲವರ್ಧನೆಗಾಗಿ ಹಗಲಿರುಳು ಶ್ರಮಿಸಿದ ಕಲಾದಗಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಸವರಾಜ ಸಂಶಿ ಅವರಿಗೆ ನಿಗಮ ಮಂಡಳಿಯಲ್ಲಿ ಸ್ಥಾನಮಾನ ನೀಡಬೇಕೆಂದು ಪಿಕೆಪಿಎಸ್ ಮಾಜಿ ಅಧ್ಯಕ್ಷ ಕಾಂಗ್ರೆಸ್ ಮುಖಂಡ ನಿಂಗಪ್ಪ ಕೊಕ್ಕನವರ ಆಗ್ರಹಿಸಿದ್ದಾರೆ.

ಕಲಾದಗಿ ಗ್ರಾಮದ ಪ್ರವಾಸಿ ಮಂದಿರದಲ್ಲಿ ಶಾರದಾಳ ಗ್ರಾಮದ ಕಾಂಗ್ರೆಸ್ ಮುಖಂಡರು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾಗಿ ಸಂಶಿ ಕಾಂಗ್ರೆಸ್ ಪಕ್ಷಕ್ಕಾಗಿ ಹಗಲಿರುಳು ಶ್ರಮಿಸಿದ್ದಾರೆ. ಕಲಾದಗಿ ಬ್ಲಾಕ್ ಕಾಂಗ್ರೆಸ್ ವ್ಯಾಪ್ತಿಯಲ್ಲಿ ಪಕ್ಷ ಸಂಘಟಿಸಿ ಕಾಂಗ್ರೆಸ್ ಪಕ್ಷವನ್ನು ಬಲಿಷ್ಠಗೊಳಿಸಿದ್ದಾರೆ. ಅದರ ಪರಿಶ್ರಮವೇ ವಿಧಾನಸಭಾ ಚುನಾವಣೆಯಲ್ಲಿ ಶಾಸಕ ಜೆ.ಟಿ. ಪಾಟೀಲ ಅವರಿಗೆ ಕಲಾದಗಿ ಭಾಗದಲ್ಲಿ ಹೆಚ್ಚಿನ ಮತಗಳು ಬಂದಿದ್ದು ಸಾಕ್ಷಿ ಎಂದರು.

ಕಾಂಗ್ರೆಸ್ ಮುಖಂಡ ಶಿವಪ್ಪ ಅರಕೇರಿ ಮಾತನಾಡಿ, ಪಕ್ಷಕ್ಕಾಗಿ ದುಡಿದವರಿಗೆ ಪಗಾರ ನೀಡುವುದು ನ್ಯಾಯಯುತವಾಗಿದೆ. ಆದ್ದರಿಂದ ಬಸವರಾಜ ಸಂಶಿ ಅವರಿಗೆ ನಿಗಮ ಮಂಡಳಿಯಲ್ಲಿ ವಿಶೇಷ ಸ್ಥಾನಮಾನ ನೀಡಬೇಕು ಎಂದು ಪಕ್ಷದ ಹೈಕಮಾಂಡಗೆ ಒತ್ತಾಯಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮುಖಂಡರಾದ ಈರಪ್ಪ ಕೊಕ್ಕನವರ, ರಮೇಶ ಅರಕೇರಿ, ಮಕ್ತುಮಸಾಬ ಬಾವಾಖಾನ ಇದ್ದರು.

# ವೇಮನ ಮೂರ್ತಿ ಪ್ರಾಣ ಪ್ರತಿಷ್ಠಾಪನ ಮಾಡಿದ ಡಾ.ಚೆನ್ನಬಸವ ಶಿವಾಚಾರ್ಯರು



ಮಲ್ಲಮ್ಮ ನುಡಿ ವಾರ್ತೆ

ಇಳಕಲ್–ಇಲ್ಲಿನ ಎಪಿಎಂಸಿ ಸಮೀಪದ ಪಂಚಲಿಂಗೇಶ್ವರ ಗುಡಿಯ ಆವರಣದ ಮಲ್ಲಮ್ಮನ ದೇವಸ್ಥಾನದಲ್ಲಿ ಮಹಾಯೋಗಿ ವೇಮನ ಮೂರ್ತಿಯನ್ನು ನಂದವಾಡಗಿಯ ಡಾ//ಚನ್ನಬಸವ ಶಿವಾಚಾರ್ಯರು ಪ್ರಾಣ ಪ್ರತಿಷ್ಠಾನ ಮಾಡಿದರು.

ಪ್ರತಿಷ್ಠಾಪನದ ನಂತರ ಭಕ್ತರ ಕುರಿತು ಆಶೀರ್ವಚನ ನೀಡಿದ ಪೂಜ್ಯರು ಮಹಾ ಯೋಗಿ ವೇಮನ ಒಬ್ಬ ಸಾಮಾನ್ಯ ಮನುಷ್ಯನಾಗಿ ವ್ಯಸನಿ ಆಗಿದ್ದನು ಸಂದರ್ಭಾನು ಸಾರವಾಗಿ ಮಹಾಮಾತೆ ಮಲ್ಲಮ್ಮನ ತತ್ವಾದರ್ಶಗಳನ್ನು ಪಾಲನೆ ಮಾಡಿ ಒಬ್ಬ ಮಹಾ ವ್ಯಸನಿ ಮಹಾ ಯೋಗಿಯಾಗಿ ಪರಿವರ್ತನೆ ಮಾಡಿದ್ದರ ಫಲವಾಗಿ ಸಾಕಷ್ಟು ವಚನಗಳನ್ನು ಬರೆಯುವುದರ ಮೂಲಕ ಸಮಾಜ ಪರಿವರ್ತನೆ ಮಾಡುವ ಕೆಲಸವನ್ನು ಮಹಾಯೋಗಿ ವೇಮನ ಮಾಡಿದ್ದನು ಅಂತಹ ಮಹಾ ಯೋಗಿಯ ಮೂರ್ತಿಯ ಪ್ರತಿಷ್ಠಾಪನೆ ಮಾಡುವುದರ ಮೂಲಕ ಇಲಕಲ್ಲಿನ ಶ್ರೀ ಪಂಚಲಿಂಗೇಶ್ವರ ಹಾಗೂ ಹೇಮರೆಡ್ಡಿ ಮಲ್ಲಮ್ಮ ಸೇವಾ ಸಮಿತಿಯವರು ಪುಣ್ಯ ಕಟ್ಟಿಕೊಂಡಿದ್ದಾರೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಶ್ರೀ ಪಂಚಲಿಂಗೇಶ್ವರ ಹೇಮರೆಡ್ಡಿ ಮಲ್ಲಮ್ಮ ಸೇವಾ ಸಮಿತಿಯ ಅಧ್ಯಕ್ಷರು ಉಪಾಧ್ಯಕ್ಷರು ಕಾರ್ಯದರ್ಶಿ ಹಾಗೂ ಸರ್ವ ಸದಸ್ಯರು ಹಾಜರಿದ್ದರು.

ಜಾಹೀರಾತಿಗಾಗಿ ಇಂದೇ
ಸಂಪರ್ಕಿಸಿ:8073731722

# ಶಾಲಾ ಸಂಸತ್ ಕಾರ್ಯಕ್ರಮ




ಧಾರವಾಡ, ಆ4: ದಕ್ಷಿಣ ಭಾರತ ಹಿಂದಿ ಪ್ರಚಾರ ಸಭೆಯ ಅಂಗ–ಸಂಸ್ಥೆಯಾದ ರಾಜೀವ ಗಾಂಧಿ ಆಂಗ್ಲ ಮಾಧ್ಯಮ ಪ್ರೌಢಶಾಲೆಯಲ್ಲಿ ಶಾಲಾ ಸಂಸತ್ತಿನ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ದಕ್ಷಿಣ ಭಾರತ ಹಿಂದಿ ಪ್ರಚಾರ ಸಭೆಯ ಅಧ್ಯಕ್ಷರಾದ ಈರೇಶ್ ಅಂಚಟಗೇರಿ, ಕಾರ್ಯದರ್ಶಿ ಎಸ್. ರಾಧಾಕೃಷ್ಣನ್, ಜಿ.ಜಿ. ಹಿರೇಮಠ, ಬಸವರಾಜ ತಾಳಿಕೋಟಿ, ವಸ್ತ್ರದ, ಅತಿಥಿಗಳಾಗಿ ಆಗಮಿಸಿದ್ದ ರುದ್ರೇಶ ಹಾಗೂ ಉಮಾ ಚೌಹಾನ್, ವೀಣಾ ತುಪ್ಪದ, ಸುಧಾ ಕಾಳೆ ಕಾರ್ಯಕ್ರಮವನ್ನು ಉದ್ಘಾಟಿಸಿದರು. ರುದ್ರೇಶ ಅವರು ಬೇರೆಯವರನ್ನು ಅನುಕರಿಸದೆ ನಿಮ್ಮಂತೆ ನೀವು ಆಗಬೇಕು, ಶಿಕ್ಷಣದ ಗುರಿ ಮತ್ತು ಮಾರ್ಗ ಒಂದೇ ಆಗಿರಬೇಕು ಜೊತೆಗೆ ನಿಮ್ಮ ಆಲೋಚನೆಗಳು ಉತ್ತಮವಾಗಿರಬೇಕು, ಕ್ರಿಯಾಶೀಲ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಬೇಕು ಎಂದು ಮಕ್ಕಳನ್ನು ಉದ್ದೇಶಿಸಿ ಮಾತನಾಡಿದರು. ಪ್ರಾಂಶುಪಾಲರಾದ ಶ್ರೀಮತಿ ವೀಣಾ ತುಪ್ಪದ ಅವರ ನೇತೃತ್ವದಲ್ಲಿ ಸಂಸತ್ತಿನ ಮಂತ್ರಿಗಳು ಹಾಗೂ ಇತರೆ ಸದಸ್ಯರು ಪ್ರಮಾಣವಚನ ಸ್ವೀಕರಿಸಿದರು. ಕಾರ್ಯಕ್ರಮದ ನಿರೂಪಣೆಯನ್ನು ವಿಜಯಲಕ್ಷ್ಮಿ ಕುಲಕರ್ಣಿ, ಶ್ರೀದೇವಿ ಕುಂದಣಗಾರ ನೆರವೇರಿಸಿದರು. ಜಯಶ್ರೀ ಪುರೋಹಿತ್ ಅವರು ಅತಿಥಿಗಳ ಪರಿಚಯ ಮಾಡಿಕೊಟ್ಟರು.

# ಡಿ.ದೇವರಾಜ ಅರಸು ಅವರ 110ನೇ ಜನ್ಮದಿನಾಚರಣೆ ಆಚರಿಸಲು ಪೂರ್ವಸಿದ್ಧತಾ ಸಭೆಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಆಗಸ್ಟ್ 04, : 2025ರ ಆಗಸ್ಟ್ 20 ರಂದು ಡಿ.ದೇವರಾಜ ಅರಸು ಅವರ 110ನೇ ಜನ್ಮದಿನಾಚರಣೆ ಆಚರಣೆ–ಯ ಹಿನ್ನೆಲೆ ಪೂರ್ವಸಿದ್ಧತಾ ಸಭೆಯು ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರ ಅಧ್ಯಕ್ಷತೆಯಲ್ಲಿ 2025ರ ಆಗಸ್ಟ್ 8 ರಂದು ಮಧ್ಯಾಹ್ನ 3 ಗಂಟೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಅವರು ತಿಳಿಸಿದ್ದಾರೆ.

ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿಗಳಾದ ಡಿ.ದೇವರಾಜ ಅರಸು ಅವರ 110ನೇ ಜನ್ಮ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲು ಪೂರ್ವಸಿದ್ಧತಾ ಸಭೆಗೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಜನಪ್ರತಿನಿಧಿಗಳು ಸಂಘ ಸಂಸ್ಥೆಗಳ ಪದಾಧಿಕಾರಿಗಳ, ವಿವಿಧ ಸಮುದಾಯಗಳ ಮುಖಂಡರು ಡಿ.ದೇವರಾಜ ಅರಸು ರವರ ಅಭಿಮಾನಿಗಳು ಸಭೆಗೆ ಹಾಜರಾಗಿ ತಮ್ಮ ಅಮೂಲ್ಯ ಸಲಹೆ ಸೂಚನೆಗಳನ್ನು ನೀಡಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ಬಾಗಲಕೋಟೆಯಲ್ಲಿ ಭಾರತೀಯ ರೆಡ್ಡಿ ಸಮಾಜದವರ ಸಮಾವೇಶ ಶೀಘ್ರ – ಪ್ರಭಾಕರರೆಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕರ್ನಾಟಕ, ತಮಿಳನಾಡು,ಆಂಧ್ರ, ಕೇರಳ ಸೇರಿದಂತೆ ಉತ್ತರ ಭಾರತದ ರಾಜ್ಯಗಳಲ್ಲಿರುವ ರೆಡ್ಡಿ ಸಮಾಜವರನ್ನು ಒಗ್ಗೂಡಿಸಿ ಬಾಗಲಕೋಟೆಯಲ್ಲಿ ಶೀಘ್ರದಲ್ಲಿಯೇ ಭಾರತೀಯ ರೆಡ್ಡಿ ಸಮಾಜದವರ ಸಮಾವೇಶವನ್ನು ಹಮ್ಮಿಕೊಳ್ಳಲಾಗುವುದು ಎಂದು ಬೆಂಗಳೂರು ರೆಡ್ಡಿ ಜನಸಂಘದ ರಾಜ್ಯ ಸಂಘಟನಾ ಅಧ್ಯಕ್ಷ ಪ್ರಭಾಕರರೆಡ್ಡಿ ಹೇಳಿದ್ದಾರೆ.

ಕೊಪ್ಪಳ ನಗರದ ಶ್ರೀ ಶಿವಶರಣೇಹೇಮರಡ್ಡಿ ಮಲ್ಲಮ್ಮ ದೇವಸ್ಥಾನದಲ್ಲಿ ಭಾನುವಾರ ಸಂಜೆ ಈ ಕುರಿತು ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು ಈ ಮಾಹಿತಿ ನೀಡಿದರು.

ರಾಜ್ಯಾದ್ಯಂತ ರಡ್ಡಿಸಮಾಜನ್ನು ಒಗ್ಗೂಡಿಸುವ ಕಾರ್ಯವಾಗಿದೆ. ನಾನಾ ಕಾರಣಗಳಿಗಾಗಿ ಹರಿದುಹಂಚಿಹೋಗಿರುವ ರಡ್ಡಿ ಮತ್ತು ರೆಡ್ಡಿ ಸಮಾಜವನ್ನು ಒಗ್ಗೂಡಿಸದೆ ಇದ್ದರೇ ನಮ್ಮ ಮಕ್ಕಳ ಭವಿಷ್ಯಕ್ಕೆ ದೊಡ್ಡ ಪೆಟ್ಟಾಗಲಿದೆ ಎಂದರು.

ಈ ಹಿನ್ನೆಲೆಯಲ್ಲಿ ಕೇವಲ ರಾಜ್ಯಾದ್ಯಂತ ಸಂಘಟನೆ ಮಾಡುವುದು ಅಷ್ಟೇ ಅಲ್ಲಾ, ದೇಶದಾದ್ಯಂತವೂ ರೆಡ್ಡಿ ಸಮಾಜವನ್ನು ಒಗ್ಗೂಡಿಸುವುದಕ್ಕಾಗಿಯೇ ಬಾಗಲಕೋಟೆಯಲ್ಲಿ ಶೀಘ್ರದಲ್ಲಿಯೇ ಭಾರತೀಯ ರಡ್ಡಿ ಮತ್ತು ರೆಡ್ಡಿ ಸಮಾಜವರ ಸಮಾವೇಶವನ್ನು ನಡೆಸಲಾಗುವುದು. ಲಕ್ಷಾಂತರ ಸಂಖ್ಯೆಯಲ್ಲಿ ಅಂ–ದು ಭಾಗವಹಿಸುವ ಮೂಲಕ ನಮ್ಮ ಒಗ್ಗೂಟ ತೋರಿಸಬೇಕಾಗಿದೆ. ಅಷ್ಟೇ ಅಲ್ಲಾ, ಕೇಂದ್ರ ಸರ್ಕಾರದ ಹಿಂದುಳಿದ ವರ್ಗದ ಸೌಲಭ್ಯವನ್ನು ಪಡೆಯುವುದಕ್ಕಾಗಿ ಸರ್ಕಾರದ ಮೇಲೆ ಒತ್ತಡ ಹಾಕಬೇಕಾಗಿದೆ ಎಂದರು.

ಈಗ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರ ಜಾತಿ ಸಮೀಕ್ಷೆ ಮಾಡುತ್ತಿದ್ದು, ಇತರೆ ಜಾತಿಯ ಉಪಪಂಗಡದಂತೆ ಗುರುತಿಸಿಕೊಳ್ಳದೆ ರಡ್ಡಿ ಎಂದು ಕಡ್ಡಾಯವಾಗಿ ಜಾತಿ ಕಾಲಂ ನಲ್ಲಿ ನಮೂದಿಸುವಂತೆ ಮನವಿ ಮಾಡಿದರು. ಅದಕ್ಕೂ ಮೊದಲು ರಾಜ್ಯಾದ್ಯಂತ ಸಂಘಟನೆ ಮಾಡಿ, ಒಗ್ಗೂಡಬೇಕಾಗಿದೆ ಎಂದರು.

ರೆಡ್ಡಿ ಜನಸಂಘದ ನಿರ್ದೇಶಕ ವಾಸುದೇವರಡ್ಡಿ ಅವರು ಮಾತನಾಡಿ, ಸಮಾಜವನ್ನು ಸಂಘಟನೆ ಮಾಡುವ ಅಗತ್ಯವಿದೆ. 35 ಲಕ್ಷ ಇದ್ದರೂ ಕೇವಲ ಏಳು ಲಕ್ಷ ತೋರಿಸಿದ್ದಾರೆ ರಾಜ್ಯದಲ್ಲಿ.

ಈಗ ಒಳ್ಳೆಯ ಸಮಯ. ಹೀಗಾಗಿ ನಾವು ಸರಿಯಾಗಿ ಬರೆಯಿಸಬೇಕು ಎಂದರು. ಈಗಲೇ ನಾವು

ಮುಂದಿನ ಪೀಳಿಗೆಗಾಗಿ ಒಗ್ಗಟ್ಟಿನಿಂದ ಇರಬೇಕು. ನಾವು ಡಿಸೈಡ ಪ್ಯಾಕ್ಟರ್ ಆಗಬೇಕು. ಒಗ್ಗಟ್ಟು ಬೇಕೇ ಬೇಕು. ಭಾವನೆಗಳು ವ್ಯಾತ್ಯಾಸ ಇದ್ದೇ ಇರುತ್ತದೆ. ಹೀಗಾಗಿ ನಾವೆಲ್ಲ ಒಗ್ಗೂಡಿಸುವ ಕಾರ್ಯ ಮಾಡುತ್ತಿದ್ದೇವೆ ಎಂದರು.

ರೆಡ್ಡಿಜನಸಂಘದಶತಮಾನೋತ್ಸವ:– ಸೆಪ್ಟಂಬರ್ 24 ರಂದು ರೆಡ್ಡಿ ಜನಸಂಘಕ್ಕೆ ಭರ್ತಿ ನೂರು ವರ್ಷಗಳು ಆಗುತ್ತಿರುವ ಹಿನ್ನೆಲೆಯಲ್ಲಿ ಶತಮಾನೋತ್ಸವ ಕಾರ್ಯಕ್ರಮವನ್ನು ಬೆಂಗಳೂರಿನ ಅರಮನೆ ಮೈದಾನದಲ್ಲಿ ಹಮ್ಮಿಕೊಳ್ಳಲಾಗುವುದು. ಅಂದು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆಯೂ ಕೋರಿದರು.

ರೆಡ್ಡಿ ಸಮಾಜದ ಜಿಲ್ಲಾಧ್ಯಕ್ಷ ಜಗದೀಶಪ್ಪ ಸಿಂಗನಾಳ, ತಾಲೂಕು ಅಧ್ಯಕ್ಷ ಪ್ರಭು ಹೆಬ್ಬಾಳ, ಹಿರಿಯ ಮುಖಂಡರಾದ ಎಸ್. ಬಿ.ನಾಗರಳ್ಳಿ, ವೆಂಕರಡ್ಡಿ ವಕೀಲರು. ದೇವಪ್ಪ ಅರಕೇರಿ, ಅಮರೇಶ ಪಾಟೀಲ, ಹೇಮರಡ್ಡಿ ಕೆಂಚರಡ್ಡಿ, ಶರಣಪ್ಪ ವಕೀಲರು, ಹನುಮರಡ್ಡಿ ಹಂಗನಕಟ್ಟಿ, ಶಿವಣ್ಣರಾಯಡ್ಡಿ, ಶಿವನಗೌಡ ಶಿವನಗುತ್ತಿ, ಸುರೇಶ ದಾಸರಡ್ಡಿ, ಮನೋಹರ ದಾದಮಿ, ವಿಶ್ವನಾಥ ಮಾಲಿಪಾಟೀಲ, ಬಸವರಾಜ ಮೇಟಿ, ರುದ್ರಗೌಡ ನಂದಿಹಾಳ, ಕೋಲಾರ ಜಿಲ್ಲಾಧ್ಯಕ್ಷ ಮಾಷ್ಣರಡ್ಡಿ ಸೇರಿದಂತೆ ಅನೇಕರು ಇದ್ದರು.

## ಬೇವೂರಿನಲ್ಲಿ ಇಂದು 'ಸಂವಿಧಾನ ಯಾನ ' ಉಪನ್ಯಾಸ ಕಾರ್ಯಕ್ರಮ.

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,4–ತಾಲೂಕಿನ ಬೇವೂರಿನ ಆದರ್ಶ ಪದವಿ ಪೂರ್ವ ಕಾಲೇಜಿನಲ್ಲಿ ಆ.5 ರಂದು 'ಸಂವಿಧಾನ ಯಾನ ' ವಿಶೇಷ ಉಪನ್ಯಾಸಕಾರ್ಯಕ್ರಮಜರುಗಲಿದೆ. ಆದರ್ಶ ವಿದ್ಯಾವರ್ಧಕ ಸಂಘ, ಕಾಲೇಜು, ಪಿ.ಎಸ್.ಸಜ್ಜನ ಮಹಾವಿದ್ಯಾಲಯಮತ್ತುಕರ್ನಾಟಕ ಸತ್ಯಶೋಧಕ ಸಂಘ ಇವರ ಸಹಯೋಗದಲ್ಲಿ ಮಂಗಳವಾರ ಮುಂಜಾನೆ 10 ಗಂಟೆಗೆನಡೆಯುವ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಕೀಲ ಜಿ.ಜಿ.ಮಾಗನೂರ ವಹಿಸುವರು. ' ಸಂವಿಧಾನದಮತ್ತುಪ್ರಜಾಪ್ರಭುತ್ವದ ಆಶಯಗಳು'ಕುರಿತುಸತ್ಯಶೋಧಕ ಸಂಘದರಾಜ್ಯಾಧ್ಯಕ್ಷಪರಶುರಾಮ್ ಮಹಾರಾಜನವರ ಉಪನ್ಯಾಸ ನೀಡುವರು. ಪ್ರಾಚಾರ್ಯರಾದ ಜೆ.ಜಿ.ಭೈರಮಟ್ಟಿ ಹಾಗೂ ವಿ.ಬಿ.ಅರಹುಣಶಿಉಪಸ್ಥಿತರಿರುವರು.

## ಅಪರ ಜಿಲ್ಲಾಧಿಕಾರಿಯಾಗಿ ಶಿವಾನಂದ ಬಿ.ಕರಾಳೆ ಅಧಿಕಾರ ಸ್ವೀಕಾರ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಆ.04:ಬೀದರ ಜಿಲ್ಲೆಯ ನೂತನ ಅಪರ ಜಿಲ್ಲಾಧಿಕಾರಿಯಾಗಿ ಹಾಗೂ ಅಪರಜಿಲ್ಲಾದಂಡಾಧಿಕಾರಿಯಾಗಿ ಶಿವಾನಂದ ಬಿ.ಕರಾಳೆ ಅವರು ಇಂದು ಅಧಿಕಾರ ಸ್ವೀಕಾರ ಮಾಡಿದರು. ಹಿಂದಿನ ಪ್ರಭಾರಿ ಅಪರ ಜಿಲ್ಲಾಧಿಕಾರಿ ಸುರೇಖಾ ಅವರು ಶಿವಾನಂದ ಬಿ.ಕರಾಳೆ ಅವರಿಗೆ ಅಧಿಕಾರ ಹಸ್ತಾಂತರಿಸಿದರು.

ಶಿವಾನಂದ ಬಿ.ಕರಾಳೆ ಅವರು 2010ನೇ ಸಾಲಿನ ಕೆಎಎಸ್ ಅಧಿಕಾರಿಯಾಗಿದ್ದು, ಈ ಹಿಂದೆ ಕಾರವಾರ ಜಿಲ್ಲೆಯ ಸಹಾಯಕ ಆಯುಕ್ತರಾಗಿ ಹಾಗೂ ಅಪರ ಜಿಲ್ಲಾಧಿಕಾರಿಯಾಗಿ ಗದಗ, ಧಾರವಾಡ, ತುಮಕೂರ ಜಿಲ್ಲೆಯಲ್ಲಿ ಸೇವೆ ಸಲ್ಲಿಸಿರುತ್ತಾರೆ.

## ನಮ್ಮ ಕರ್ನಾಟಕ ಸೇನೆಯಿಂದ ಮನವಿ ಪತ್ರ ಸಂಚಾರ ವ್ಯವಸ್ಥೆ ಸುಧಾರಣೆಗೆ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 04 :– ನಗರದಲ್ಲಿ ಸಂಚಾರ ವ್ಯವಸ್ಥೆ ಸುಧಾರಣೆಗೆ ಕ್ರಮ ಕೈಗೊಳ್ಳಬೇಕು ಎಂದು ನಮ್ಮ ಕರ್ನಾಟಕ ಸೇನೆ ಒತ್ತಾಯಿಸಿದೆ.

ಸೇನೆಯ ಜಿಲ್ಲಾ ಘಟಕದ ಪದಾಧಿಕಾರಿಗಳು ನಗರದಲ್ಲಿ ಸೋಮವಾರ ನಿಯೋಗದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಅವರನ್ನು ಭೇಟಿ ಮಾಡಿ ಈ ಕುರಿತು ಮನವಿ ಪತ್ರ ಸಲ್ಲಿಸಿದರು.

ನಗರದಲ್ಲಿ ಸಂಚಾರ ವ್ಯವಸ್ಥೆ ಸಂಪೂರ್ಣ ಅಸ್ತವ್ಯಸ್ತಗೊಂಡಿದೆ ಎಂದು ಸೇನೆಯ ಜಿಲ್ಲಾ ಘಟಕದ ಅಧ್ಯಕ್ಷ ಗಣೇಶ ಪಾಟೀಲ ಜ್ಯಾಂತಿ ಹೇಳಿದರು.

ನಗರದ ಜಿ.ವಿ. ಮಾಲ್ ಮುಂಭಾಗದ ರಸ್ತೆ ಹಿಂದೆ ಒನ್ ವೇ ಆಗಿತ್ತು. ಈಗ ಈ ರಸ್ತೆಯಲ್ಲಿ ಸಂಚಾರ ವ್ಯವಸ್ಥೆ ಸಮರ್ಪಕವಾಗಿಲ್ಲ ಎಂದು ದೂರಿದರು.

ಮನ್ನಳ್ಳಿ ರಸ್ತೆಯಲ್ಲಿ ಇರುವ ಎಂ.ಎಸ್. ಪಾಟೀಲ ಫಂಕ್ಷನ್ ಹಾಲ್ ಮುಂಭಾಗದಲ್ಲಿ ಪಾಕಿಂ–ರ್ಗ್ ವ್ಯವಸ್ಥೆ ಇಲ್ಲ.

ಹೀಗಾಗಿ ಇಲ್ಲಿ ಅನೇಕ ವಾಹನಗಳು ನಿಲುಗಡೆಯಾಗುತ್ತಿವೆ. ನೌಬಾದನ ಬಸವೇಶ್ವರ ವೃತ್ತ, ನಗರದ ಕೇಂದ್ರ ಬಸ್ ನಿಲ್ದಾಣ, ಬಸವೇಶ್ವರ ವೃತ್ತ, ಅಂಬೇಡ್ಕರ್ ವೃತ್ತದ ಹತ್ತಿರ ಆಟೊಗಳನ್ನು ಎಲ್ಲೆಂದರಲ್ಲಿ ನಿಲ್ಲಿಸಲಾಗುತ್ತಿದೆ. ಇದರಿಂದ ವಾಹನ ಸವಾರರಿಗೆ ತೊಂದರೆ ಉಂಟಾಗುತ್ತಿದೆ ಎಂದು ತಿಳಿಸಿದರು.

ತಹಶೀಲ್ದಾರ್ ಕಚೇರಿ ಹಾಗೂ ನ್ಯಾಯಾಲಯ ಎದುರಿನ ರಸ್ತೆ ಬದಿಯಲ್ಲೂ ದ್ವಿಚಕ್ರ ವಾಹನ, ನಾಲ್ಕು ಚಕ್ರದ ವಾಹನ ಹಾಗೂ ಆಟೊಗಳನ್ನು ಮನ ಬಂದಂತೆ ನಿಲುಗಡೆ ಮಾಡಲಾಗುತ್ತಿದೆ ಎಂದು ಹೇಳಿದರು.

ಸಂಚಾರ ಪೊಲೀಸರು ನಗರದ ಮುಖ್ಯ ರಸ್ತೆಗಳಲ್ಲಿ ನಿಲ್ಲದೆ, ಕರ್ತವ್ಯ ನಿರ್ಲಕ್ಷ್ಯ ತೋರುತ್ತಿದ್ದಾರೆ. ಹೀಗಾಗಿ ವಾಹನಗಳು ವೃತ್ತಗಳಲ್ಲಿ ರೆಡ್ ಸಿಗ್ನಲ್ ಬಿದ್ದಾಗಲೂ ನಿಲ್ಲಿಸುತ್ತಿಲ್ಲ. ವಾಹನ ಸವಾರರು ರಸ್ತೆ ನಿಯಮ ಉಲ್ಲಂಘಿಸುತ್ತಿದ್ದಾರೆ ಎಂದು ದೂರಿದರು.

ಸಂಚಾರನಿಯಮಉಲ್ಲಂಘಿಸುವ ವಾಹನ ಸವಾರರಿಗೆ ದಂಡ ವಿಧಿಸಬೇಕು. ಸಾರ್ವಜನಿಕರಲ್ಲಿ ಸಂಚಾರ ನಿಯಮಗಳ ಅರಿವು ಮೂಡಿಸಬೇಕು ಎಂದು ಮನವಿ ಮಾಡಿದರು.

ತಮ್ಮ ಮನವಿಗೆ ಸ್ಪಂದಿಸಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅವರು ಸಂಚಾರ ಠಾಣೆ ಸಿಪಿಐ ಅವರಿಗೆ ಸಂಚಾರ ವ್ಯವಸ್ಥೆ ಸರಿಪಡಿಸಲು ಸೂಚನೆ ನೀಡಿದರು ಎಂದು ಗಣೇಶ ಪಾಟೀಲ ತಿಳಿಸಿದರು

ಸೇನೆಯ ಪದಾಧಿಕಾರಿಗಳು ಜಿಲ್ಲಾ ಘಟಕದ ಉಪಾಧ್ಯಕ್ಷರಾದ ದತ್ತಾತ್ರಿ ಎಸ್. ಅಲ್ಲಮಕೇರೆ, ಶಶಿಕಾಂತ ಅಷ್ಟೂರೆ, ಪ್ರಧಾನ ಸಂಚಾಲಕ ಸುಧಾಕರ ರಾಠೋಡ್, ಪ್ರಮುಖರಾದ ಸಂತೋಷ್ ಪಾಟೀಲ, ರಾಜಕುಮಾರ ಸ್ವಾಮಿ, ಸುದೀಪ್ ತೂಗಾವೆ, ಪ್ರದೀಪ್ ಪಾಟೀಲ, ಧನರಾಜ ಧನ್ನೂರೆ, ಬಸವರಾಜ ಕಾರಬಾರಿ, ಕಿರಣ ಐನಾಪುರೆ, ಪಪ್ಪು ಸ್ವಾಮಿ, ಮಂಜು ಸ್ವಾಮಿ ಇದ್ದರು.

## ಕೊಪ್ಪಳ ಜಿಲ್ಲೆಯಲ್ಲಿ ಪ್ರಪ್ರಥಮವಾಗಿ ಐದು ವರ್ಷದ ಕಾನೂನು ವ್ಯಾಸಂಗಕ್ಕೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳದ ಹೊರವಲಯದಲ್ಲಿರುವ ಶಿವಪ್ರಿಯ ಕಾನೂನುಮಹಾವಿದ್ಯಾಲಯದಲ್ಲಿಐದು ವರ್ಷದ ಎಲ್ ಎಲ್ ಬಿ ವ್ಯಾಸಂಗಕ್ಕೆ ಚಾಲನೆಯನ್ನು ನೀಡಲಾಯಿತು ಈ ಕಾರ್ಯಕ್ರಮವನ್ನು ಪೂಜೆಯ ಮೂಲಕ ಆರಂಭಿಸಲಾಗಿದ್ದು ಕಾರ್ಯಕ್ರಮದ ಉದ್ಘಾಟನೆಯನ್ನು ಶ್ರೀಯುತ ಮಹಾಂತೇಶ್ ಎಸ್ ದರ್ಗದ ಉದ್ಘಾಟಿಸಿದರು ನಂತರದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ ಪೀರ ಹುಸೇನ್ ಹೊಸಳ್ಳಿ ನ್ಯಾಯವಾದಿಗಳು ಇವರು ಹಾಜರಿದ್ದರು ಅಧ್ಯ–ಕ್ಷೆಯ ಸ್ಥಾನವನ್ನು ರಾಘವೇಂದ್ರ ಪಾನಗಂಟಿ ಇವರು ವಹಿಸಿದ್ದು ಫೀನಿಕ್ಸ್ ಬಿ ಎಡ್ ವಿದ್ಯಾಲಯದ ಪ್ರಾಚಾರ್ಯರಾದ ರಾಜಶೇಖರ್ ಗಂಜಿ ಭಾಗವಹಿಸಿದ್ದರು ಶಿವಪ್ರಿಯ ಕಾನೂನು ಮಹಾವಿದ್ಯಾಲಯದ ಪ್ರಾಚಾರ್ಯ ಪ್ರೊ.ಡಾ ಬಸವರಾಜ ಹನ್ಸಿ ಇವರು ಸ್ವಾಗತ ಭಾಷಣ ಮತ್ತು ಅತಿಥಿಗಳ ಪರಿಚಯವನ್ನು ಮಾಡಿದರು. ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶವನ್ನು ಪಡೆದ ಎಲ್ಲ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು ಈ ಕಾರ್ಯಕ್ರಮದಲ್ಲಿ ವಿದ್ಯಾಲಯದ ಉಪನ್ಯಾಸವರ್ಗ ವಿದ್ಯಾರ್ಥಿಗಳು ಭಾಗವಹಿಸಿದ್ದರು ಪ್ರಾರ್ಥನಾ ಗೀತೆಯನ್ನು ರಾಘವೇಂದ್ರ ನೆರವೇರಿಸಿದರು ಒಂದೇ ಮಾತರಂ ಗೀತೆಯನ್ನು ತಬಸ್ಸುಮ ನೆರವೇರಿಸಿದರು . ವಂದನಾರ್ಪಣೆಯನ್ನು ವಿಜಯ್ ಕುಮಾರ್ ಕಂಬಳಿ ಮತ್ತು ನಿರೂಪಣೆಯನ್ನು ಶ್ರೀದೇವಿ ಹಿರೇಮಠ ನೆರವೇರಿಸಿದರು.

## ತಿರುಪತಿ ತಿಮ್ಮಪ್ಪನ ದರ್ಶನ ಪಡೆದ ರಾಜ್ಯಪಾಲರು



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು / ತಿರುಪತಿ :ಅ.4:ಆಂಧ್ರಪ್ರದೇಶದ ತಿರುಪತಿಯ ತಿರುಮಲ ವೆಂಕಟೇಶ್ವರ ಸನ್ನಿಧಿಗೆ ಕುಟುಂಬ ಸದಸ್ಯರೊಡನೆ ಕರ್ನಾಟಕದ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಭೇಟಿ ನೀಡಿ, ವೆಂಕಟೇಶ್ವರ ಸ್ವಾಮಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದ್ದಾರೆ.

ತಿರುಮಲ ತಿರುಪತಿ ದೇವಸ್ಥಾನ ಮಂಡಳಿ (nnr) ಅಧಿಕಾರಿಗಳು ಮತ್ತು ಅರ್ಚಕರು ರಾಜ್ಯಪಾಲರನ್ನು ಸ್ವಾಗತಿಸಿದರು.

ಪೂಜೆಯನಂತರರಂಗಾನಾಯಕುಲ ಮಂಟಪದಲ್ಲಿ ಟಿಟಿಡಿ ಹೆಚ್ಚುವರಿ ಇಒ ಸಿ.ಎಚ್.ವೆಂಕಯ್ಯ ಚೌಧರಿ, ಟಿಟಿಡಿ ಓಎ???ಡಿ ಎಂ.ಎಸ್. ನಾಯಕ್ ಮತ್ತು ಇತರ ಟಿಟಿಡಿ ಅಧಿಕಾರಿಗಳು ಶ್ರೀವಾರಿ ವಸ್ತ್ರವನ್ನು ನೀಡಿ ರಾಜ್ಯಪಾಲರನ್ನು ಗೌರವಿಸಿದರು. ನಂತರ ತಿಮ್ಮಪ್ಪಸ್ವಾಮಿ ಪ್ರಸಾದವನ್ನು ಗೌರವಾನ್ವಿತ ರಾಜ್ಯಪಾಲರಿಗೆ ದೇವಾಲಯದ ವತಿಯಿಂದ ನೀಡಲಾಯಿತು.

## ವಾಲ್ ಪೋಸ್ಟರ್ ಬಿಡುಗಡೆ,



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ, ಆ,9ರಂದು ಶಹಾಪುರ ನಗರದ ಆರಬೊಳ ಕಲ್ಯಾಣ ಮಂಟಪದಲ್ಲಿ ನಡೆಯುವ ಸಂವಿಧಾನ ಜನ ಜಾಗ್ರತಿ ಸಮಾವೇಶ ಕಾರ್ಯಕ್ರಮದ ವಾಲ್ ಪೋಸ್ಟರ್‌ಗಳನ್ನು ಸಣ್ಣ ಕೈಗಾರಿಕಾ ಮತ್ತು ಸಾರ್ವಜನಿಕ ಉದ್ಯಮಗಳ ಮಂತ್ರಿ ಶರಣಬಸ್ಸಪ್ಪಗೌಡ ದರ್ಶನಾಪುರವರು ಭೀ,ಗುಡಿಯಲ್ಲಿ ಬಿಡುಗಡೆ ಮಾಡಿದರು, ಈ ಸಂಧರ್ಭದಲ್ಲಿ ಗೀರೆಪ್ಪಗೌಡ ಬಾಣಿತಹಾಳ, ಶಿವುಮಾಂತಪ್ಪ ಚಂದಾಪುರ,ನೀಲಕಂಠ ಬಡಿಗೇರ, ರುದ್ರಪ್ಪ ಹುಲಿಮನಿ, ಮಲ್ಲಪ್ಪ ಬೀರನೂರ, ಮಾನಯ್ಯ ಹೋಸಮನಿ, ಶರಣ–ರಡ್ಡಿ ಹತ್ತಿಗೂಡೂರ, ಭೀಮರಾಯ ಮಲ್ಲಪ್ಪ ಗೋಗಿ, ರಾಯಪ್ಪ ಸಾಲಿಮನಿ, ಲಕ್ಷ್ಮಣ ಸಿತ್ನಿ, ಸೇರಿದಂತೆ ಅನೇಕ ಮುಖಂಡರು ಹಾಜರಿದ್ದರು,

# ಕೆಲವರು ಅಧಿಕಾರ ಹಂಚಿಕೊಳ್ಳಲು ಒಪ್ಪಲ್ಲ:ಡಿಕೆಶಿ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಅ.4: ರಾಜ್ಯ ಕಾಂಗ್ರೆಸ್‌ನಲ್ಲಿ ಸೆಪ್ಟೆಂಬರ್ ಕ್ರಾಂತಿಗೂ ಮುನ್ನವೇ ನಾನಾ ಬೆಳವಣಿಗೆಗಳು ನಡೆಯುತ್ತಿವೆ. ಈ ನಡುವೆ ಸೋನಿಯಾ ಗಾಂಧಿ ಅವರ ಅಧಿಕಾರ ತ್ಯಾಗದ ಸಂದರ್ಭವನ್ನ ಉಲ್ಲೇಖಿಸಿ ಡಿಸಿಎಂ ಡಿಕೆ ಶಿವಕುಮಾರ್ ಪರೋಕ್ಷವಾಗಿ ಸಿದ್ದರಾಮಯ್ಯ ಅವರಿಗೆ ಟಾಂಗ್ ಕೊಟ್ಟಿದ್ದಾರೆ.

ಹೈಕಮಾಂಡ್ ನಾಯಕರ ಮುಂದೆಯೇ ಪರೋಕ್ಷವಾಗಿ ಅಧಿಕಾರ ಹಂಚಿಕೆ ಬಗ್ಗೆ ಮಾತನಾಡಿದ್ದು, ಕೆಲವರು ಅಧಿಕಾರ ಹಂಚಿಕೊಳ್ಳಲು ಒಪ್ಪಲ್ಲ ಅಂತ ಹೇಳಿದ್ದಾರೆ.

ಸೋನಿಯಾ ಗಾಂಧಿ ಅವರಿಗೆ ಪ್ರಧಾನಿಯಾಗುವ ಅವಕಾಶ ಇತ್ತು. ರಾಷ್ಟ್ರಪತಿಗಳು ಸರ್ಕಾರ ರಚನೆ ಮಾಡುವಂತೆ ಆಹ್ವಾನ ನೀಡಿದ್ದರು. ಆದ್ರೆ ಸೋನಿಯಾ ಗಾಂಧಿ ಅಧಿಕಾರ ಮುಖ್ಯವಲ್ಲ ಅಂದರು. ಒಬ್ಬ ಆರ್ಥಿಕ ತಜ್ಞ ದೇಶ ಉಳಿಸಬಹುದು ಅಂತ ಮನಮೋಹನ್ ಸಿಂಗ್ ಅವರನ್ನ ಪ್ರಧಾನಿಯಾಗಿ ಮಾಡಿದ್ರು. ಇದು ಸೋನಿಯ ಗಾಂಧಿ ಅವರ ರಾಜಕೀಯ ತ್ಯಾಗದ ಅಪ್ರತಿಮ ಕಾರ್ಯ ಎಂದು ಶ್ಲಾಘಿಸಿದ್ರು.

ಇಷ್ಟು ದೊಡ್ಡ ಪ್ರಜಾಪ್ರಭುತ್ವದಲ್ಲಿ ಯಾರಾದ್ರೂ ಇಷ್ಟೊಂದು ತ್ಯಾಗ ಮಾಡಿದ್ದಾರೆಯೇ? ಇಂದು ಯಾರಾದರೂ ಸಣ್ಣ ಹುದ್ದೆಯನ್ನ ತ್ಯಾಗ ಮಾಡೋದಕ್ಕೆ ರೆಡಿ ಇದ್ದಾರಾ? ಪಂಚಾಯತ್ ಮಟ್ಟದಲ್ಲು ಸಹ ಅಧಿಕಾರ ತ್ಯಾಗ ಮಾಡಲ್ಲ. ಕೆಲ ಶಾಸಕರು ಮತ್ತು ಸಚಿವರು ಅಧಿಕಾರ ಹಂಚಿಕೊಳ್ಳಲು ಸಹ ಒಪ್ಪುವುದಿಲ್ಲ. ಅಂತಹದ್ರಲ್ಲಿ ಸೋನಿಯಾ ಗಾಂಧಿ ತ್ಯಾಗ ಮಾಡಿದರು ಎಂದು ಸ್ಮರಿಸಿದರು.

ನಾನು ತಿಹಾರ್ ಜೈಲಿಗೆ ಹೋಗಿ ಬಂದ ಬಳಿಕ ಕೆಪಿಸಿಸಿ ಅಧ್ಯಕ್ಷರನ್ನಾಗಿ ಮಾಡಿದರು. ಅಂದಿನಿಂದ ಪಕ್ಷ ಅಧಿಕಾರಕ್ಕೆ ಬರುವವರೆಗೂ ನಿದ್ದೆ ಮಾಡಿಲಿಲ್ಲ ಎಂದು ಹೇಳಿದರು.


ಕರ್ನಾಟಕ ಸರ್ಕಾರ

**ರಾಯಚೂರು ಮಹಾನಗರ ಪಾಲಿಕೆ**

Website:-www.raichurcity.gov.in E-mail:itstaff_ulb_raichura@yahoo.com

Phone No:08532-226768 Fax No:08532-226316

ಸಂ.ರಾಮಪ/ತಾಂತ್ರಿಕ/ಕಾ/ಅ/219,220,221,223,227,229,230/2025–26 ದಿನಾಂಕ: 01–08–2025.

**ಟೆಂಡರ್ ಪ್ರಕಟಣೆ (ಕೆ.ಪಿ.ಪಿ.ಪಿ 2.0 ಪದ್ಧತಿ ಅಡಿಯಲ್ಲಿ).**

ಈ ಮೂಲಕ ತಿಳಿಯಪಡಿಸುವುದೇನೆಂದರೆ, ಈ ಕೆಳಗಿನ ಅನುದಾನದಲ್ಲಿ ಈ ಕೆಳಗೆ ತೋರಿಸಿದ ಇಂಡೆಂಟ್ ನಂಬರ ಸರಬರಾಜು / ಕಾಮಗಾರಿಗಳಿಗೆ ಕೆ.ಪಿ.ಪಿ.ಪಿ 2.0 ಪದ್ಧತಿ ಅಡಿಯಲ್ಲಿ ಅಲ್ಪಾವಧಿ ಟೆಂಡರ್ ಪ್ರಕಟಣೆಯನ್ನು ಹೊರಡಿಸಲಾಗಿದ್ದು, ಸದರಿ ಟೆಂಡರ್‌ನಲ್ಲಿ ಭಾಗವಹಿಸಲು ಇಚ್ಛಿಸುವ ಅರ್ಹ ಗುತ್ತಿಗೆದಾರರು WWW.KPPP.Karnataka.gov.in ವೆಬ್‌ಸೈಟ್ ಮೂಲಕ ಭಾಗವಹಿಸತಕ್ಕದ್ದು, ಹಾಗೂ ಹೆಚ್ಚಿನ ವಿವರಗಳಿಗಾಗಿ ಮಹಾನಗರ ಪಾಲಿಕೆಯ ವೆಬ್‌ಸೈಟ್ WWW.raichurcity. mrc.gov.in ರಲ್ಲಿ ಹೆಚ್ಚಿನ ಮಾಹಿತಿ ಪಡೆಯಬಹುದಾಗಿದೆ.

| ಕ್ರ. ಸಂ | ಅನುದಾನದ ವಿವರ | ಕಾಮಗಾರಿಗಳ ವಿವರ | ಪ್ರವರ್ಗ | ಇಂಡೆಂಟ್ ನಂಬರ |
|---|---|---|---|---|
| 1 | ಡಿ.ಎಂ.ಎಫ್ ಅನುದಾನ | Proposed Construction of RCC Drain and CC Road in Ward No 03 at Near Mother Trust School in Raichur City **Estimate Cost Rs.44,62,000/-** | ಸಾಮಾನ್ಯ ವರ್ಗ | DMA/2025-26/OW/WORK_INDENT46750 |
| 2 | 2021–22 15ನೇ ಹಣಕಾಸು ಅನುದಾನ | Providing and Laying of HDPE Pipe Line from Bolamanadoddi Main Road to Eganoor Temple Via Madhur Nagar Shravan Kumar House to Krishanachari House at Ward No 21 in Raichur City **Estimate Cost Rs.8,00,000/-** | ಸಾಮಾನ್ಯ ವರ್ಗ | DMA/2025-26/WS/WORK_INDENT46748 |
| 3 | 2025–26 15ನೇ ಹಣಕಾಸು ಅನುದಾನ | Providing and Laying of Pipe Line from Shanti Saree Centre to Aduge Rajamma House in Ward No 24 in Raichur City **Estimate Cost Rs.4,00,000/-** | ಸಾಮಾನ್ಯ ವರ್ಗ | DMA/2025-26/WS/WORK_INDENT46747 |
| 4 | | Providing and Fixing of Children playing Equipments at Ward no 02 Buddi Baba Darga, Vijayanagara Colony, Shivangudi, Water Tank janatha Colony, V.M. Reddy, Mallikarjun layout in Raichur City. **Estimate Cost Rs.7,00,000/-** | ಸಾಮಾನ್ಯ ವರ್ಗ | DMA/2025-26/OW/WORK_INDENT46740 |
| 5 | | Sinking of Borewell at Dathar Nagara Ward No 02 and Providing and Laying of 75mm Pipe line to Buddi Baba Darga Park In raichur City. **Estimate Cost Rs.5,00,000/-** | (ಪರಿಶಿಷ್ಟ ಜಾತಿ (ಎಸ್.ಸಿ) | DMA/2025-26/WS/WORK_INDENT46739 |
| 6 | 2024–25 15ನೇ ಹಣಕಾಸು ಅನುದಾನ | Providing and Laying of 75m,90mm, and 110mm HDPE Pipe Line from Basava Sri School to Gppi Railway House in Ward No 01 in Raichur City **Estimate Cost Rs.10,00,000/-** | ಸಾಮಾನ್ಯ ವರ್ಗ | DMA/2025-26/WS/WORK_INDENT46691 |
| 7 | 2021–22 15ನೇ ಹಣಕಾಸು ಅನುದಾನ | Providing and Laying of Pipe Line From Tipper Office Sanga To Sadyam Hotel Via Yusuf Shop At Ward No 31 In Raichur City. **Estimate Cost Rs.5,00,000/-** | ಪರಿಶಿಷ್ಟ ಪಂಗಡ (ಎಸ್.ಟಿ | DMA/2025-26/WS/WORK_INDENT46685 |
| 8 | ಮಹಾನಗರ ಪಾಲಿಕೆ ಅನುದಾನದಲ್ಲಿ | Supplying and Fixing of 200 Watts LED Flood Light for Hymast Pole at Aam Talab Garden In Raichur City. Estimate Cost Rs.2,80,000/- | ಸಾಮಾನ್ಯ ವರ್ಗ | DMA/2025-26/EL/WORK_INDENT46663 |

ಸಹಿ/– ಕಾರ್ಯಪಾಲಕ ಅಭಿಯಂತರರು,
ಮಹಾನಗರ ಪಾಲಿಕೆ, ರಾಯಚೂರು.

DIP/RCR/297/KSMCA/298/2025-26


Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330. Editor: Ramesh Reddy, Office Ph. No: +91 9449732000.